ಸಂಪುಟ: 14 Volume | ಸಂಚಿಕೆ: 22 Issue | ಪುಟಗಳು 08 Pages | ಶನಿವಾರ 25 ಏಪ್ರಿಲ್ 2026 | ₹4 | PRGINO.120927 (RNINO: KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ | ಪ್ರಧಾನ ಸಂಪಾದಕರು: ಮಾಣಿಕರೆಡ್ಡಿ, ಕೌಡಾಳೆ

**ಬೆಳಗು**

ಕರುಣೆ ಹೃದಯದ ಅಂತರಾಳದಿಂದ ಬರಬೇಕು. ಅದೇ ನಿಜವಾದ ಕರುಣೆ.
–ಮಹಾತ್ಮಾ ಗಾಂಧಿ



ಬೆಂಗಳೂರು: ಇಂದು ನಡೆದ ವಿಶೇಷ ಸಚಿವ ಸಂಪುಟ ಸಭೆಯ ಬಳಿಕ ಸನ್ಮಾನ್ಯ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ಹಾಗೂ ಸಚಿವ ಸಂಪುಟದ ಹಿರಿಯ ಸಚಿವರುಗಳೊಂದಿಗೆ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ವಿಶೇಷ ಸಭೆಯ ನಿರ್ಣಯದ ಕುರಿತು ಸುದ್ದಿಗೋಷ್ಠಿ ನಡೆಸಿ, ವಿವರಿಸಿದರು.

# ಸಂಪುಟ ಪುನಃ ಸಂಕಟ

## ಮೇ 20ರ ಒಳಗೆ ಸಚಿವ ಸಂಪುಟ ಪುನರ್ ರಚನೆಯ ಕಸರತ್ತು | ದಿಲ್ಲಿಯಲ್ಲಿ ಗರಿಗೆದರಿದ ರಾಜಕೀಯ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಇದೀಗ ರಾಜ್ಯ ಕಾಂಗ್ರೆಸ್‌ನಲ್ಲಿ ಮತ್ತೆ ರಾಜಕೀಯ ಸಂಚಲನ ಶುರುವಾಗಿದೆ. ಶಾಸಕರ ಬಹುದಿನಗಳ ಬೇಡಿಕೆಗೆ ಅನುಗುಣವಾಗಿ ಮೇ 20ರ ಒಳಗೆ ಸಚಿವ ಸಂಪುಟ ಪುನರ್ ರಚನೆಯಾಗಲಿದೆ. ಹಿರಿಯ ಶಾಸಕರು ಹಾಗೂ ಸಿಎಂ ಸಿದ್ದರಾಮಯ್ಯ ಅವರ ಒತ್ತಡದ ಮೇರೆಗೆ ಹೈಕಮಾಂಡ್ ಅನಿವಾರ್ಯವಾಗಿ ಸಂಪುಟ ಪುನರ್ ರಚನೆಗೆ ಅನುಮತಿಸುವ ಪರಿಸಿತಿ ನಿರ್ಮಾಣವಾಗಿರುವುದಾಗಿ ಮೂಲಗಳು ಖಚಿತ ಪಡಿಸಿವೆ.

**ಪಂಚರಾಜ್ಯಗಳ ಫಲಿತಾಂಶ:** ಮೇ 4ರಂದು ಪಂಚರಾಜ್ಯಗಳ ವಿಧಾನಸಭೆಗಳ ಚುನಾವಣೆ ಫಲಿತಾಂಶ ಪ್ರಕಟವಾಗುತ್ತಿದೆ. ಬಳಿಕ ಸಂಪುಟ ಪುನರ್ ರಚನೆಯ ಕುರಿತು ಚರ್ಚೆಗಳು ನಡೆಯಲಿವೆ. ಸಂಪುಟದಲ್ಲಿ ಹಾಲಿ ಸಚಿವರಾಗಿರುವ ರೇ.50ಕ್ಕಿಂತಲೂ ಹೆಚ್ಚು ಮಂದಿ ಹಿರಿಯರನ್ನು ಕೈಬಿಟ್ಟು ಹೊಸಬರಿಗೆ ಅವಕಾಶ ನೀಡುವ ಬಗ್ಗೆ ಚಿಂತನೆ ನಡೆದಿದೆ.

**ಸ್ಥಾನ ಗಿಟ್ಟಿಸಿಕೊಳ್ಳುವ ಯತ್ನ:** ಸಂಪುಟದಿಂದ ಕೈ ಬಿಡುವ ಸಚಿವರನ್ನು ಪಕ್ಷ ಸಂಘಟನೆಗೆ ಬಳಸಿಕೊಳ್ಳಲು ನಿರ್ಧಾರವಾಗಿದೆ. 30ಕ್ಕೂ ಹೆಚ್ಚು ಮಂದಿ ಹಿರಿಯ ಶಾಸಕರು ಸಂಪುಟದಲ್ಲಿ ಸ್ಥಾನ ಗಿಟ್ಟಿಸಲು ಪ್ರಯತ್ನಿಸುತ್ತಿದ್ದಾರೆ. 43 ಮಂದಿ ಶಾಸಕರು ಮೂರಕ್ಕಿಂತಲೂ ಹು ಬಾರಿ ಗೆದ್ದಿದ್ದಾರೆ. ಈ ಪೈಕಿ ಬಹಳಷ್ಟು ಜನಶಾಸಕರು ಇದುವರೆಗೂ ಸಚಿವರಾಗದೇ ಇದ್ದಾರೆ.



### ಪ್ರಮುಖ ವಿಷಯಗಳ ಬಗ್ಗೆ ಚರ್ಚೆಯಾಗಿಲ್ಲ, ಸಚಿವರ ಸಭೆ ಸರ್ಜರಿ ಅಲ್ಲ..!

ಕೆಪಿಸಿಸಿ ಅಧ್ಯಕ್ಷ ಸ್ಥಾನ, ಸಚಿವ ಸಂಪುಟ ಪುನರ್ ರಚನೆ ಸೇರಿದಂತೆ ಹಲವು ವಿಚಾರದ ಬಗ್ಗೆ ತೀರ್ಮಾನ ಆಗಬೇಕಿದೆ. ಅಹಿಂದ ಒಟ್ಟುಗೂಡಿಸುವ ಕೆಲಸ ಆಗಬೇಕು. ನಿನ್ನೆ ನಡೆದ ಸಚಿವರ ಸಭೆಯಲ್ಲಿ ಅಷ್ಟೇನೂ ಪ್ರಮುಖ ವಿಷಯಗಳ ಬಗ್ಗೆ ಚರ್ಚೆಯಾಗಿಲ್ಲ. ಅದು ಸರ್ಜರಿ ಅಲ್ಲ ಜನರಲ್ ಚೆಕಪ್ ಅಷ್ಟೇ ಸಚಿವ ಸಂಪುಟ ಪುನರ್ ರಚನೆ ಆಗಬೇಕು. ಅಧ್ಯಕ್ಷ ಸ್ಥಾನ ಬದಲಾವಣೆ ಸೇರಿದಂತೆ ಹಲವು ವಿಚಾರವಿದ್ದು, ಅವೆಲ್ಲಾ ತೀರ್ಮಾನ ಆಗಬೇಕಿದೆ ಎಂದಿದ್ದಾರೆ ಸಚಿವ ಸತೀಶ್ ಜಾರಕಿಹೊಳಿ.

### ರಾಜ್‌ನಾಥ್ ಜೊತೆ ಡಿಸಿಎಂ


ದೆಹಲಿಯ ಗಾಳಿ ಸೇವಿಸಲು ಬಂದಿಲ್ಲ. ಬೆಂಗಳೂರು ಸಮಸ್ಯೆಗಳ ಬಗ್ಗೆ ಕೇಂದ್ರ ಸಚಿವರ ಜೊತೆ ಚರ್ಚೆ ಮಾಡಬೇಕಿದ್ದರಿಂದ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಜೊತೆ ಚರ್ಚೆ ನಡೆಸಿದ್ದೇನೆ. ಅಲ್ಪಸಂಖ್ಯಾತ ನಾಯಕರ ಅಸಮಧಾನ ವಿಚಾರವಾಗಿ ಕೇಳಿದಾಗ, "ಅವರು ತಮ್ಮ ಭಾವನೆ, ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಇದರಲ್ಲಿ ತಪ್ಪಿಲ್ಲ. ನಾವೆಲ್ಲರೂ ಕೂತು ಚರ್ಚೆ ಮಾಡುತ್ತೇವೆ ಎಂದು ಡಿಸಿಎಂ ವಿವರಿಸಿದ್ದಾರೆ.

### ಯಾರಿಗೆ ಯಾರು ಆಪ್ತರೋ!

ಸಿಎಂ ಆಪ್ತ ಸಚಿವರು ಭೇಟಿ ಮಾಡಿ ಚರ್ಚೆ ಮಾಡಿದ್ದಾರೆ ಎಂದಾಗ, ನನಗೆ ಈ ಬಗ್ಗೆ ಮಾಹಿತಿ ಇಲ್ಲ. ಯಾರು ಯಾರ ಆಪ್ತರು, ಯಾರಿಗೆ ಆಪ್ತರಲ್ಲ ಎಂದು ನನಗೆ ಗೊತ್ತಿಲ್ಲ. ನಾನು ಈ ಸಭೆಗಳ ಬಗ್ಗೆ ತಲೆಕೆಡಿಸಿಕೊಳ್ಳುವುದಿಲ್ಲ. ಹಿರಿಯ ಶಾಸಕರು ಸಂಪುಟ ಪುನಾರಚನೆಗೆ ಆಗ್ರಹಿಸಲು ಮತ್ತೆ ದೆಹಲಿ ಪ್ರವಾಸ ಮಾಡಲಿದ್ದಾರೆ ಎಂದು ಕೇಳಿದಾಗ, ಕಾದು ನೋಡೋಣ ಎಂದಿದ್ದಾರೆ ಡಿಕೆಶಿ.

### ಒಳ ಮೀಸಲಾತಿ ಗೊಂದಲ, ವಿಶೇಷ ಸಚಿವ ಸಂಪುಟ ಸಭೆ

ಒಳ ಮೀಸಲಾತಿ ಗೊಂದಲವನ್ನು ನಿವಾರಿಸುವ ಸಲುವಾಗಿ ಇಂದು ವಿಶೇಷ ಸಚಿವ ಸಂಪುಟ ಸಭೆ ನಡೆಯಲಿದ್ದು, ಅದಕ್ಕೂ ಮುನ್ನ ಪೂರ್ವಭಾವಿಯಾಗಿ ಪರಿಶಿಷ್ಟ ಜಾತಿಯ ಸಚಿವರು ಸಭೆ ನಡೆಸಿ ಚರ್ಚಿಸಿದ್ದಾರೆ. ಸಚಿವ ಎಚ್.ಸಿ.ಮಹದೇವಪ್ಪ ನಿವಾಸದಲ್ಲಿಂದು ಸಭೆ ನಡೆದಿದೆ.ಸಚಿವ ಕೆ.ಎಚ್.ಮುನಿಯಪ್ಪ, ಆರ್.ಬಿ.ತಿಮ್ಮಾಪುರ್, ಡಾ.ಜಿ.ಪರಮೇಶ್ವರ್ ಸಭೆಯಲ್ಲಿ ಭಾಗವಹಿಸಿ ಗಮನ ಸೆಳೆದಿದ್ದಾರೆ.







## ರಾಷ್ಟ್ರೀಯ ಪಂಚಾಯತ್ ರಾಜ್ ದಿನಾಚರಣೆ

# ಆರ್‌ಡಿಪಿಆರ್ ದೊಡ್ಡ ಇಲಾಖೆ, ಪ್ರತಿಯೊಬ್ಬರೂ ವ್ಯವಸ್ಥೆ ಒಳಗಡೆ ಕೆಲಸ ಮಾಡಬೇಕು: ಇಓ




• ಮಲ್ಲಮ್ಮ ನುಡಿ ವಾರ್ತೆ. ಬಸವಕಲ್ಯಾಣ

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಅತಿ ದೊಡ್ಡ ಇಲಾಖೆ ಆಗಿದೆ. ಹೀಗಾಗಿ ಸರ್ಕಾರದ ಯೋಜನೆಗಳು ಗ್ರಾಮೀಣ ಜನರಿಗೆ ಮುಟ್ಟಿಸುವಲ್ಲಿ ಇಲಾಖೆಯ ಪ್ರತಿಯೊಬ್ಬ ಸಿಬ್ಬಂದಿಗಳ ಜವಾಬ್ದಾರಿಯಾಗಿದೆ ಎಂದು ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ರಮೇಶ ಸುಲ್ಫಿ ಹೇಳಿದರು.

ಇಲ್ಲಿನ ತಾಲ್ಲೂಕು ಪಂಚಾಯತ್ ಸಭಾಂಗಣದಲ್ಲಿ ರಾಷ್ಟ್ರೀಯ ಪಂಚಾಯತ್ ರಾಜ್ ದಿನಾಚರಣೆ ಅಂಗವಾಗಿ ತಾ.ಪಂ.ಕಾ.ನಿ.ಅ.ಅಧ್ಯಕ್ಷತೆಯಲ್ಲಿ ನಡೆದ ಸಿಬ್ಬಂದಿಗಳಿಗೆ ಸನ್ಮಾನ ಮತ್ತು ಪ್ರಶಂಸನಾ ಪತ್ರ ವಿತರಣಾ ಕಾರ್ಯಕ್ಮದಲ್ಲಿ ಅವರು ಮಾತನಾಡಿ ಪಂಚಾಯತ್ ರಾಜ್ ಇಲಾಖೆಯಲ್ಲಿ ಎಲ್ಲಿವರೆಗು ವ್ಯವಸ್ಥೆ ಇರುತ್ತದೋ ಅಲ್ಲಿವರೆಗು ನಾವು ಗ್ರಾಮೀಣ ಭಾಗವನ್ನು ಅಭಿವೃದ್ಧಿಗೊಳಿಸುವುದು ಮತ್ತು ಸಮಸ್ಯೆಮುಕ್ತ ಗ್ರಾಮವನ್ನಾಗಿ ಮಾಡಲು ಶ್ರಮಿಸೋಣ ಎಂದರು.

ಗ್ರಾಮ ಪಂಚಾಯತ್ ಹಾಗೂ ತಾಲ್ಲೂಕು ಪಂಚಾಯತ್ ಕಚೇರಿಯ ಕೇಳ ಸಿಬ್ಬಂದಿಗಳು ಒಳ್ಳೆಯ ರೀತಿಯಲ್ಲಿ ಕೆಲಸ ಮಾಡಿದಾಗ ಮಾತ್ರ ಮೇಲಾಧಿಕಾರಿಗಳಿಗೆ ಒಳ್ಳೆಯ ಹೆಸರು ಬರಲು ಸಾಧ್ಯ. ಆ ನಿಟ್ಟಿನಲ್ಲಿ ಇಗಾಗಲೇ ಕರವಸೂಲಿ ಸೇರಿದಂತೆ ವಿವಿಧ ಯೋಜನೆಗಳ ಪ್ರಗತಿಗಾಗಿ ಸಿಬ್ಬಂದಿಗಳು ಶ್ರಮ ಪಟ್ಟ ಹಿನ್ನೆಲೆಯಲ್ಲಿ ಪ್ರಶಂಸಕ್ಕೆ ಪಾತ್ರರಾಗಲು ಸಾಧ್ಯವಾಗಿದೆ. ಹೀಗಾಗಿ ಬೇರೆಯವರಿಗು ಪ್ರೇರಣೆಗಾಗಿ ಇಂದು ಗೌರವ ಸನ್ಮಾನ ಮತ್ತು ಪ್ರಶಂಶನಾ ಪತ್ರ ವಿತರಣಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ತಾಲ್ಲೂಕು ಪಂಚಾಯತ್ ಸಹಾಯಕ ನಿರ್ದೇಶಕರಾದ (ಉ.ಖಾ) ಮಹ್ಮದ್ ಸಲೀಂ ಅವರು ಮಾತನಾಡಿ, ಇಲಾಖೆಯಲ್ಲಿ ಇರುವ ಪ್ರತಿಯೊಬ್ಬರು ಉತ್ತಮ ರೀತಿಯಲ್ಲಿ ಕೆಲಸ ಮಾಡಿದ್ದಾರೆ, ಆದರೆ ಬೇರೆಯವರಿಗೆ ಪ್ರೇರಣೆಗಾಗಿ ಮಾತ್ರ ಕೆಲವರಿಗೆ ಮಾತ್ರ ಸನ್ಮಾನ ಮಾಡಲು ಮೂಲಕ ಗೌರಿಸಲಾಗುತ್ತಿದೆ. ಮುಂದಿನ ವರ್ಷ ಎಲ್ಲರು ಉತ್ತಮ ಕೆಲಸ ಮಾಡುವ ಎಲ್ಲರಿಗು ಪ್ರೇರಣೆ ಆಗಬೇಕು ಎಂದು ಸಲಹೆ ನೀಡಿದರು. ನಂತರ ತಾಲ್ಲೂಕು ಯೋಜನಾಧಿಕಾರಿ ಸಂಜುಕುಮಾರ ಕಾಂಗೆ ಹಾಗೂ ತಾ.ಪಂ.ಸ.ನಿ.(ಪಂ.ರಾ) ಅರುಣಕುಮಾರ ಪಾಟೀಲ್ ಪಿಡಿಓ ಚಂದ್ರಾಮ ಮಾತನಾಡಿದರು

ಈ ಸಂದರ್ಭದಲ್ಲಿ ತಾ.ಪಂ. ವ್ಯವಸ್ಥಾಪಕ ರಾಜರೆಡ್ಡಿ ಪಾಟೀಲ್, ಟಿಸಿ ಶಿವರಾಜ ಪಾಟೀಲ್, ಐಇಸಿ ಸಂಯೋಜಕ ವೀರಾರೆಡ್ಡಿ, ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ತಾಂತ್ರಿಕ ಸಹಾಯಕರು, ಪಂ.ಕಾ, ಡಿಇಓ, ಅರಿವು ಕೇಂದ್ರದ ಮೇಲ್ವಿಚಾಕರು, ಬಿಎಫ್ಟಿ, ಕಾಯಕ ಮಿತ್ರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# 893ನೇ ಬಸವ ಜಯಂತಿ ಸಡಗರ ಬಸವ ತತ್ವ ಪಾಲನೆಗೆ ಪಟ್ಟದ್ದೇವರ ಕರೆ


ಮಲ್ಲಮ್ಮ ನುಡಿ ವಾರ್ತೆ, ಕಮಲನಗರ

ತಾಲೂಕಿನ ಚಾಂಡೇಶ್ವರ ಗ್ರಾಮದಲ್ಲಿ ಜಗಜ್ಯೋತಿ ಬಸವಣ್ಣನವರ 893ನೇ ಜಯಂತ್ಯುತ್ಸವ ಹಾಗೂ ಮೂರ್ತಿ ಪ್ರತಿಷ್ಠಾಪನಾ ಮಹೋತ್ಸವವು ಗುರುವಾರ ಸಂಜೆ ಅತ್ಯಂತ ಸಡಗರ–ಸಂಭ್ರಮದಿಂದ ಜರುಗಿತು.

ಕಾರ್ಯಕ್ರಮದಲ್ಲಿ ಪಾಲ್ಗೊಂಡು ಆಶೀರ್ವಚನ ನೀಡಿದ ಭಾಲ್ಕಿಯ ಪೂಜ್ಯಶ್ರೀ ಗುರುಬಸವ ಪಟ್ಟದ್ದೇವರು, "ಬಸವಣ್ಣನವರ ತತ್ವಗಳು ಕೇವಲ ಓದಿಗೆ ಸೀಮಿತವಾಗಬಾರದು, ಅವು ನಮ್ಮ ದೈನಂದಿನ ಜೀವನದ ಆಚರಣೆಗೆ ಬರಬೇಕು. ಪ್ರತಿಯೊಬ್ಬರೂ ಶರಣರ ಮಾರ್ಗದಲ್ಲಿ ನಡೆದು, ಸಮಾಜದಲ್ಲಿ ಶಾಂತಿ ಮತ್ತು ಸಮಾನತೆಯನ್ನು ಎತ್ತಿ ಹಿಡಿಯಬೇಕು" ಎಂದು ಮಾರ್ಮಿಕವಾಗಿ ನುಡಿದರು. ಬಸವಣ್ಣನವರ ವಚನ ಸಾಹಿತ್ಯ ಮತ್ತು ಅವರ ವಿಚಾರಧಾರೆಗಳನ್ನು ಪಾಲಿಸುವುದೇ ನಾವು ಅವರಿಗೆ ಸಲ್ಲಿಸುವ ನಿಜವಾದ ಗೌರವ ಎಂದು ಅವರು ತಿಳಿಸಿದರು.

ಪೂಜ್ಯಶ್ರೀ ಶಿವಾನಂದ ಶಿವಾಚಾರ್ಯ ಮಹಾರಾಜರ ದಿವ್ಯ ಸಾನ್ನಿಧ್ಯದಲ್ಲಿ ಬಸವಣ್ಣನವರ ನೂತನ ಮೂರ್ತಿಯನ್ನು ಶಾಸ್ತ್ರೋಕ್ತವಾಗಿ ಪ್ರತಿಷ್ಠಾಪಿಸಲಾಯಿತು. ಹಿರೇಮಠ ಸಂಸ್ಥಾನದ ಪೂಜ್ಯ ಶ್ರೀ ರಾಜಶೇಖರ ಶಿವಾಚಾರ್ಯ ಸ್ವಾಮಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದು ಮಾರ್ಗದರ್ಶನ ನೀಡಿದರು.

ಚಾಂಡೇಶ್ವರ ಗ್ರಾಮಸ್ಥರ ಒಗ್ಗಟ್ಟಿನಿಂದ ನಡೆದ ಈ ಧಾರ್ಮಿಕ ಕಾರ್ಯಕ್ರಮದಲ್ಲಿ ನೂರಾರು ಭಕ್ತಾದಿಗಳು ಪಾಲ್ಗೊಂಡು ಶರಣರ ಆಶೀರ್ವಾದ ಪಡೆದರು. ಸಮಾರಂಭದ ನಂತರ ನಡೆದ ಅನ್ನಪ್ರಸಾದ ವಿತರಣೆಯಲ್ಲಿ ಗ್ರಾಮದ ಎಲ್ಲ ಸದ್ಭಕ್ತರು ಪಾಲ್ಗೊಂಡಿದ್ದರು.



## ಸಂಪಾದಕೀಯ

ಮಾಣಿಕರೆಡ್ಡಿ ಕೌಡಾಳೆ
ಪ್ರಧಾನ ಸಂಪಾದಕರು
ಮೋ: 9845028349



# ಗಣಿಗಾರಿಕೆಗೆ ಕೊನೆ ಪರಿಸರ ಉಳಿವಿನ ಹೋರಾಟ

ಪ್ರಕೃತಿ ಮಾನವನ ಬದುಕಿನ ಆಧಾರ. ಭೂಮಿ, ನೀರು, ಗಾಳಿ, ಅರಣ್ಯ ಇವೆಲ್ಲವೂ ನಮ್ಮ ಜೀವನಾಡಿ. ಆದರೆ ಇತ್ತೀಚಿನ ದಿನಗಳಲ್ಲಿ ಅತಿಯಾದ ಗಣಿಗಾರಿಕೆ ಪ್ರಕೃತಿಯ ಸಮತೋಲನವನ್ನು ಹಾಳುಮಾಡುತ್ತಿದೆ. ಅಭಿವೃದ್ಧಿಯ ಹೆಸರಿನಲ್ಲಿ ನಡೆಯುತ್ತಿರುವ ಅಕ್ರಮ ಮತ್ತು ನಿಯಂತ್ರಣವಿಲ್ಲದ ಗಣಿಗಾರಿಕೆ ಪರಿಸರಕ್ಕೆ ಭಾರೀ ಹಾನಿ ಉಂಟುಮಾಡುತ್ತಿದೆ.

ಗಣಿಗಾರಿಕೆ ಮೂಲಕ ಬೆಟ್ಟಗಳು ನಾಶವಾಗುತ್ತಿವೆ, ಅರಣ್ಯ ಸಂಪತ್ತು ಕಡಿಮೆಯಾಗುತ್ತಿದೆ, ಜಲಮೂಲಗಳು ಒಣಗುತ್ತಿವೆ. ಧೂಳು, ಶಬ್ದ, ಸ್ಫೋಟಗಳಿಂದ ಗ್ರಾಮೀಣ ಜನರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿದೆ. ರೈತರ ಜಮೀನು ಹಾಳಾಗುತ್ತಿದೆ, ಪಶುಸಂಪತ್ತು ಕುಗ್ಗುತ್ತಿದೆ. ಭೂಗರ್ಭಜಲ ಮಟ್ಟ ಕುಸಿಯುತ್ತಿದೆ. ಇದರಿಂದ ಗ್ರಾಮೀಣ ಜೀವನವೇ ಸಂಕಷ್ಟಕ್ಕೆ ಸಿಲುಕುತ್ತಿದೆ. ಕೆಲವರು ಲಾಭಕ್ಕಾಗಿ ಪ್ರಕೃತಿಯನ್ನು ದುರುಪಯೋಗಪಡಿಸಿಕೊಳ್ಳುತ್ತಿದ್ದಾರೆ. ಅಧಿಕಾರಿಗಳ ನಿರ್ಲಕ್ಷ್ಯ ಮತ್ತು ರಾಜಕೀಯ ಬೆಂಬಲದಿಂದ ಅಕ್ರಮ ಗಣಿಗಾರಿಕೆ ಹೆಚ್ಚುತ್ತಿದೆ. ಕಾನೂನು ಇದ್ದರೂ ಅದರ ಅನುಷ್ಠಾನ ದುರ್ಬಲವಾಗಿದೆ. ಪರಿಸರ ಸಂರಕ್ಷಣೆಗಿಂತ ಹಣದ ಆಸೆಗೆ ಹೆಚ್ಚಿನ ಮಹತ್ವ ನೀಡಲಾಗುತ್ತಿದೆ.

ಗಣಿಗಾರಿಕೆ ಸಂಪೂರ್ಣ ನಿಲ್ಲಿಸಬೇಕು ಎಂಬುದಲ್ಲ, ಆದರೆ ನಿಯಮಬದ್ಧವಾಗಿ, ಪರಿಸರದ ಸಮತೋಲನ ಕಾಪಾಡುವ ರೀತಿಯಲ್ಲಿ ಮಾತ್ರ ನಡೆಯಬೇಕು. ಅಕ್ರಮ ಗಣಿಗಾರಿಕೆಗೆ ಕಟ್ಟುನಿಟ್ಟಿನ ಕಡಿವಾಣ ಹಾಕಬೇಕು. ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು. ಸ್ಥಳೀಯ ಜನರ ಅಭಿಪ್ರಾಯಕ್ಕೂ ಗೌರವ ನೀಡಬೇಕು. "ಅಭಿವೃದ್ಧಿ" ಎಂಬ ಹೆಸರಿನಲ್ಲಿ ಪ್ರಕೃತಿಯನ್ನು ಕೊಂದು ಭವಿಷ್ಯವನ್ನು ಹಾಳು ಮಾಡಬಾರದು. ಮುಂದಿನ ಪೀಳಿಗೆಗೆ ಹಸಿರು ಭೂಮಿಯನ್ನು ಉಳಿಸುವ ಹೊಣೆ ನಮ್ಮೆಲ್ಲರದು. ಆದ್ದರಿಂದ ಸರ್ಕಾರ, ಅಧಿಕಾರಿಗಳು ಮತ್ತು ಜನತೆ ಒಟ್ಟಾಗಿ ಗಣಿಗಾರಿಕೆಯ ದುಷ್ಪರಿಣಾಮಗಳಿಗೆ ತೆರೆ ಎಳೆಯಬೇಕು. ಗಣಿಗಾರಿಕೆಗೆ ಕೊನೆ ಎಂದರೆ ಅಭಿವೃದ್ಧಿಗೆ ವಿರೋಧವಲ್ಲ; ಅದು ಜೀವ ಉಳಿಸುವ ಹೋರಾಟ. ಪ್ರಕೃತಿಯನ್ನು ಉಳಿಸಿದಾಗ ಮಾತ್ರ ಮಾನವ ಜೀವನ ಉಳಿಯುತ್ತದೆ.

# ಅಹಿಂದ, ರಾಜ್ಯ ಮಟ್ಟದ ವಿಚಾರ ಸಂಕಿರಣ ಭಾಗವಹಿಸಲು ಬೆಲ್ದಾರ್ ಕರೆ




• ಮಲ್ಲಮ್ಮ ನುಡಿ ವಾರ್ತೆ, ಬೀದರ

ಅಹಿಂದ ಚಳುವಳಿಯ 25ನೇ ವರ್ಷದ ಸಂಭ್ರಮದ ಅಂಗವಾಗಿ 'ಹೋರಾಟ ಸಾಧನೆ ಸಂಕಲ್ಪ' ಎಂಬ ಘೋಷಣೆಯಡಿ ಏಪ್ರಿಲ್ 26, 2026ರಂದು ಹುಬ್ಬಳ್ಳಿಯ ಗೋಕುಲ ರಸ್ತೆಯಲ್ಲಿರುವ ಲೋಟಸ್ ಗಾರ್ಡನ್‌ನಲ್ಲಿ ರಾಜ್ಯಮಟ್ಟದ ವಿಚಾರ ಸಂಕಿರಣ ಆಯೋಜಿಸಲಾಗಿದೆ. ಎಂದು ಕರ್ನಾಟಕ ಅಹಿಂದ ಒಕ್ಕೂಟದ ರಾಜ್ಯ ಸಹ ಸಂಚಾಲಕ ಅನಿಲಕುಮಾರ ಬೆಲ್ದಾರ್ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಶುಕ್ರವಾರ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು,

ಅಹಿಂದ ಕರ್ನಾಟಕದ ಆಶ್ರಯದಲ್ಲಿ ನಡೆಯುವ ಈ ವಿಚಾರ ಸಂಕಿರಣದಲ್ಲಿ ಅಹಿಂದ ಸಮುದಾಯಗಳ ಏಳಿಗೆಗೆ ಶರಣರು, ದಾಸರು, ತತ್ವಕಾರರು, ದಾರ್ಶನಿಕರು ಹಾಗೂ ರಾಜಕೀಯ ಚಿಂತಕರ ಕೊಡುಗೆಯನ್ನು ಸ್ಮರಿಸಲಾಗುತ್ತದೆ. ಜೊತೆಗೆ ಸಂವಿಧಾನದ ಆಶಯಗಳನ್ನು ಎತ್ತಿ ಹಿಡಿದು, ಸಾಮಾಜಿಕ ನ್ಯಾಯದ ದಿಕ್ಕಿನಲ್ಲಿ ನಡೆದ ಹೋರಾಟ ಮತ್ತು ಸಾಧನೆಗಳ ಅವಲೋಕನ ನಡೆಸಲಾಗುವುದು.

ರಾಜ್ಯದಲ್ಲಿ ಅಹಿಂದ ಸಮುದಾಯಗಳಿಗೆ ಪ್ರಾತಿನಿಧ್ಯ ಒದಗಿಸಲು ಮಾಜಿ ಮುಖ್ಯಮಂತ್ರಿ ದೇವರಾಜ್ ಅರಸ್, ವೀರಪ್ಪ ಮೊಯ್ಲಿ, ಬಂಗಾರಪ್ಪ ಹಾಗೂ ಸಿದ್ದರಾಮಯ್ಯ ಅವರು ಸಲ್ಲಿಸಿರುವ ಸೇವೆಯನ್ನು ಈ ಸಂದರ್ಭದಲ್ಲಿ ಚರ್ಚಿಸಲಾಗುತ್ತದೆ ಎಂದು ಹೇಳಿದರು..

ಕಳೆದ 25 ವರ್ಷಗಳಿಂದ ಅಹಿಂದ ಚಳುವಳಿ ಸಮುದಾಯಗಳಿಗೆ ಶಕ್ತಿಯನ್ನು ನೀಡುತ್ತಿರುವ ಹಿನ್ನೆಲೆಯಲ್ಲಿ, ಇಂದಿನ ಹೊಸ ಸವಾಲುಗಳನ್ನು ಎದುರಿಸಲು ಸಂಕಲ್ಪ ಕೈಗೊಳ್ಳುವುದು ಮತ್ತು ಸಮುದಾಯಗಳ ಐಕ್ಯತೆಯನ್ನು ಮತ್ತಷ್ಟು ಬಲಪಡಿಸುವುದು ಈ ವಿಚಾರ ಸಂಕಿರಣದ ಮುಖ್ಯ ಉದ್ದೇಶವಾಗಿದೆ ಎಂದರು.

ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ, ಕಾರ್ಮಿಕ ಸಚಿವ ಸಂತೋಷ ಲಾಡ್, ವಿಧಾನ ಪರಿಷತ್ ಸಚೇತಕ ಸಲೀಮ್ ಅಹಮ್ಮದ್ ಸೇರಿದಂತೆ ಹಲವರು ಭಾಗವಹಿಸಲಿರುವರು.

ಸಂವಿಧಾನದ ಸಂರಕ್ಷಣೆ ಮತ್ತು ಸಾಮಾಜಿಕ ನ್ಯಾಯಕ್ಕಾಗಿ ಶ್ರಮಿಸುತ್ತಿರುವ ಹಿರಿಯರು ಹಾಗೂ ಯುವ ನಾಯಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವ ನಿರೀಕ್ಷೆಯಿದ್ದು, ಕಾರ್ಯಕ್ರಮಕ್ಕೆ ಎಲ್ಲರನ್ನು ಭಾಗವಹಿಸಲು ವಿನಂತಿಸಲಾಗುತ್ತಿದೆ ಎಂದು ಬೆಲ್ದಾರ್ ಹೇಳಿದರು.

ಒಕ್ಕೂಟದ ಜಿಲ್ಲಾಧ್ಯಕ್ಷ ತುಕಾರಾಮ ಚಿಮಕೊಡೆ, ಒಬಿಸಿ ಆರ್ಮಿ ಜಿಲ್ಲಾಧ್ಯಕ್ಷ ತಾನಾಜಿ ಸಗರ, ಕಾರ್ಯದರ್ಶಿ ರಾಜಕುಮಾರ ಟಿಳೆಕರ್, ದಲಿತ ಸೇನೆ ಜಿಲ್ಲಾಧ್ಯಕ್ಷ ಶ್ರೀಪತರಾವ ದೀನೆ, ದಲಿತ ವಿದ್ಯಾರ್ಥಿ ಒಕ್ಕುಟದ ಜಿಲ್ಲಾಧ್ಯಕ್ಷ ಪ್ರದೀಪ ನಾಟೇಕರ್, ಒಬಿಸಿ ಮೋರ್ಚಾ ರಾಜ್ಯ ಸಲಹೆಗಾರ ಸಿದ್ದು ಫುಲಾರಿ ಪತ್ರಿಕಾಗೋಷ್ಠಿಯಲ್ಲಿದ್ದರು.

# ರಾಜಕುಮಾರ ಬಹುಮುಖ ಪ್ರತಿಭೆ: ಕರಾಳೆ

• ಮಲ್ಲಮ್ಮ ನುಡಿ ವಾರ್ತೆ, ಬೀದರ



ಡಾ.ರಾಜ್‌ಕುಮಾರ್ ಅವರು ಕೇವಲ ಒಬ್ಬ ನಟರಾಗಿರದೆ, ಅದ್ಭುತ ಗಾಯಕರಾಗಿ, ಸಮಾಜ ಸೇವಕರಾಗಿ ಗುರುತಿಸಿಕೊಂಡಿದ್ದರು. ಸಂಗೀತ ಕ್ಷೇತ್ರದಲ್ಲಿನ ಅವರ ಮಾಡಿದ ಸಾಧನೆಗಾಗಿ ಅವರಿಗೆ ರಾಷ್ಟ್ರಮಟ್ಟದ ಪ್ರಶಸ್ತಿ ಲಭಿಸಿವೆ ಎಂದು ಅಪರ ಜಿಲ್ಲಾಧಿಕಾರಿ ಶಿವಾನಂದ ಕರಾಳೆ ಹೇಳಿದರು.

ಅವರು ಶುಕ್ರವಾರ ಜಿಲ್ಲಾಡಳಿತ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಕರ್ನಾಟಕ ಸಾಹಿತ್ಯ ಸಂಘ ಬೀದರ ಇವರ ಸಂಯುಕ್ತಾಶ್ರಯದಲ್ಲಿ ಡಾ. ರಾಜಕುಮಾರ ರವರ 97ನೇ ಜಯಂತಿ ಅಂಗವಾಗಿ ಆಯೋಜಿಸಿದ "ರಾಜರಸ" ಸಂಗೀತ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಕನ್ನಡ ಭಾಷೆಯ ಉಳಿವಿಗಾಗಿ ನಡೆದ ಐತಿಹಾಸಿಕ ಗೋಕಾಕ್ ಚಳವಳಿಯಲ್ಲಿ ಡಾ.ರಾಜ್‌ಕುಮಾರ್ ಅವರ ಪಾತ್ರ ಅನನ್ಯವಾದುದು. ಅವತ್ತು ಅವರು

ಯಾವುದೇ ಪ್ರತಿಫಲಾಪೇಕ್ಷೆ ಇಲ್ಲದೆ ನೀಡಿದ ಸಹಕಾರದಿಂದ ಚಳವಳಿಗೆ ದೊಡ್ಡ ಶಕ್ತಿ ಬಂದಿತ್ತು. ರಾಜ್ ಅವರ ಕಲಾ ಸೇವೆಗಾಗಿ ಅವರಿಗೆ ಅನೇಕ ರಾಜ್ಯ ಹಾಗೂ ರಾಷ್ಟ್ರಮಟ್ಟದ

ಪ್ರಶಸ್ತಿ ಲಭಿಸಿವೆ. ಅವರು ಇಂದಿನ ಸಮಾಜಕ್ಕೆ ದಾರಿದೀಪವಾಗಿದ್ದಾರೆ ಎಂದರು.

ಡಾ.ರಾಜಕುಮಾರ ಅವರ ಜೀವನ ಚರಿತ್ರೆ ಕುರಿತು ವಿಶೇಷ ಉಪನ್ಯಾಸ ನೀಡಿದ ಜಗನ್ನಾಥ ಹೆಬ್ಬಾಳೆ ಅವರು,

ಕನ್ನಡ ಚಿತ್ರರಂಗದ ಧ್ರುವತಾರೆ ಡಾ.ರಾಜ್‌ಕುಮಾರ್ ಅವರು ಕೇವಲ ಒಬ್ಬ ನಟರಾಗಿರದೆ, ಸಮಾಜದ ಏಳಿಗೆಗಾಗಿ ಶ್ರಮಿಸಿದ ಮಹಾನ್ ಸುಧಾರಕರು. ಪೌರಾಣಿಕ ಮತ್ತು ಸಾಮಾಜಿಕ ಚಿತ್ರಗಳ ಮೂಲಕ ಜನಮನ ಗೆದ್ದಿದ್ದ ಅವರು, ನಟನೆಯ ಜೊತೆಗೆ ಸಂಗೀತ ಕ್ಷೇತ್ರದಲ್ಲಿಯೂ ರಾಷ್ಟ್ರಮಟ್ಟದ ಸಾಧನೆ ಮಾಡಿರುವುದು ಅವಿಸ್ಮರಣೀಯ. ನ

ಾಡು–ನುಡಿಯ

ರಕ್ಷಣೆಗಾಗಿ ಹೋರಾಡಿದ ಅವರ ನಾಯಕತ್ವದ ಗುಣ ಶ್ಲಾಘನೀಯವಾದದ್ದು. ಕಲೆ ಮತ್ತು ಸಮಾಜ ಸೇವೆಯನ್ನು ಸಮನಾಗಿ ತೂಗಿಸಿದ ಅಣ್ಣಾವ್ರ ಜೀವನ ಮೌಲ್ಯಗಳು ಇಂದಿನ ತಲೆಮಾರಿಗೆ ದಾರಿದೀಪವಾಗಿವೆ ಎಂದರು.

ಅತಿಥಿ ಉಪನ್ಯಾಸ ನೀಡಿ ಮಾತನಾಡಿದ ಕರ್ನಾಟಕ ಪದವಿ ಪೂರ್ವ ಕಾಲೇಜಿನ ಡಾ. ಬಸವರಾಜ್ ಬಲ್ಲೂರ್, ರಾಜ್‌ಕುಮಾರ್ ಅವರು ತಮ್ಮ ನಟನೆಯ ಮೂಲಕ ಸಮಾಜದಲ್ಲಿದ್ದ ಅಂಕುಡೊಂಕುಗಳನ್ನು ತಿದ್ದುವ ಕೆಲಸ ಮಾಡಿದ್ದಲ್ಲದೆ, ಗೋಕಾಕ್ ಚಳವಳಿಯಂತಹ ಸಾಂಸ್ಕೃತಿಕ ಹೋರಾಟಗಳ ಮೂಲಕ ನಾಡು–ನುಡಿಯ ರಕ್ಷಣೆಗೆ ಬದ್ಧರಾಗಿದ್ದರು.

ಕಲಾವಿದರು ಸಾಮಾಜಿಕ ಜವಾಬ್ದಾರಿಯನ್ನು ಹೊಂದಿರಬೇಕು ಎಂಬುವುದನ್ನು ಅಣ್ಣಾವ್ರು ತೋರಿಸಿಕೊಟ್ಟಿದ್ದರು. ಡಾ.ರಾಜ್ ಅವರ ಸರಳತೆ ಮತ್ತು ಮೌಲ್ಯಯುತ ಜೀವನ ಇಂದಿನ ಸಮಾಜಕ್ಕೆ ಆದರ್ಶಪ್ರಾಯವಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ಮಂಜುನಾಥ್ ಸುಳ್ಳೊಳ್ಳಿ, ಸಂಜೆ ಅಂತರಂಗ

ಸುದ್ದಿ ದಿನಪತ್ರಿಕೆಯ ಸಂಪಾದಕ ಮಾಳಪ್ಪ ಅಡಸಾರೆ, ಕರ್ನಾಟಕ ಜಾನಪದ ಅಕಾಡೆಮಿ ಸದಸ್ಯ ವಿಜಯಕುಮಾರ ಸೋನಾರೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಗ್ರಂಥಪಾಲಕ ತನ್ವಿರ್ ಇಕ್ಬಾಲ್, ಸಿನಿ ಚಾಲಕ ವಿಜಯಕೃಷ್ಣ ಸೋಲಪುರ, ಆಶೀಶ್ ಹಜಾರೆ, ಗೀತಾಬಾಯಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಗುರುಲಿಂಗ ಶಿವಾಚಾರ್ಯ ಉಚಿತ ವಸತಿ ಪ್ರೌಢ ಶಾಲೆಗೆ 97%: ಶ್ರೀಗಳ ಹರ್ಷ



• ಮಲ್ಲಮ್ಮ ನುಡಿ ವಾರ್ತೆ, ಬಸವಕಲ್ಯಾಣ

ತಾಲೂಕಿನ ಹಾರಕೂಡ ಶ್ರೀಮಠದ ಶ್ರೀ ಗುರುಲಿಂಗ ಶಿವಾಚಾರ್ಯ ಉಚಿತ ವಸತಿ ಪ್ರೌಢ ಶಾಲೆಗೆ ಎಸ್ ಎಸ್ ಎಲ್ ಸಿ ಪರಿಕ್ಷೆಯಲ್ಲಿ 97% ಪ್ರತಿಶತ ಫಲಿತಾಂಶ ಬಂದಿದ್ದು, ಒಟ್ಟು 33 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, ಇದರಲ್ಲಿ 6 ವಿದ್ಯಾರ್ಥಿಗಳು ಆಗ್ರ ಶ್ರೇಣಿಯಲ್ಲಿ ತೇರ್ಗಡೆ ಹೊಂದಿದ್ದಾರೆ.

ಪ್ರಥಮ ದರ್ಜೆಯಲ್ಲಿ 14 ದ್ವಿತೀಯ ದರ್ಜೆಯಲ್ಲಿ 8 ಮತ್ತು ತೃತೀಯ ದರ್ಜೆಯಲ್ಲಿ 4 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ.

ಸೂರಜ್ ತಂದೆ ಮಾರುತಿ 568 ಅಂಕಗಳೊಂದಿಗೆ 90.88% ವೈಷ್ಣವಿ ತಂದೆ ಶಿವರಾಜ 564 ಅಂಕಗಳೊಂದಿಗೆ 90.24% ಪ್ರತಿಶತ ಪಡೆದಿದ್ದಾರೆ. ಸಂಸ್ಥೆಯ ಅಧ್ಯಕ್ಷರಾದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ಸಂತಸ ವ್ಯಕ್ತಪಡಿಸಿ, ತೇರ್ಗಡೆ ಹೊಂದಿದ ಎಲ್ಲಾ ವಿದ್ಯಾರ್ಥಿಗಳ ಭವಿಷ್ಯ ಉಜ್ವಲವಾಗಲಿ ಎಂದು ಶುಭ ಕೋರಿದರು.

# ವಿದ್ಯಾರ್ಥಿಗಳ ಸಾಧನೆಗೆ ಚವ್ಹಾಣ ಹರ್ಷ

• ಮಲ್ಲಮ್ಮ ನುಡಿ ವಾರ್ತೆ, ಔರಾದ



ಎಸ್ಸೆಸ್ಸೆಲ್ಸಿ ಫಲಿತಾಂಶದಲ್ಲಿ ಔರಾದ(ಬಿ) ಹಾಗೂ ಕಮಲನಗರ ತಾಲ್ಲೂಕಿನ ವಿದ್ಯಾರ್ಥಿಗಳು ಗಮನಾರ್ಹ ಸಾಧನೆ ತೋರಿರುವುದಕ್ಕೆ ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಹರ್ಷ ವ್ಯಕ್ತಪಡಿಸಿದ್ದಾರೆ.ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಕಳೆದ ವರ್ಷ ಶೇ.56 ರಷ್ಟಿದ್ದ ತಾಲ್ಲೂಕಿನ ಫಲಿತಾಂಶವು ಈ ಬಾರಿ ಶೇ.92ಕ್ಕೆ ಏರಿಕೆಯಾಗಿ, ಜಿಲ್ಲೆಯಲ್ಲಿ ಎರಡನೇ ಸ್ಥಾನಕ್ಕೆ ಏರಿದೆ. ಅನೇಕ ವಿದ್ಯಾರ್ಥಿಗಳು ಶೇ.90ಕ್ಕಿಂತ ಹೆಚ್ಚು ಅಂಕಗಳಿಂದ ಉತ್ತೀರ್ಣರಾಗಿರುವುದಕ್ಕೆ ಬಹಳಷ್ಟು ಸಂತೋಷವಾಗಿದೆ ಎಂದಿದ್ದಾರೆ. ಪರೀಕ್ಷೆಯಲ್ಲಿ ಉತ್ತೀರ್ಣರಾದ ಎಲ್ಲಾ ವಿದ್ಯಾರ್ಥಿಗಳಿಗೆ ಅಭಿನಂದನೆಗಳನ್ನು ತಿಳಿಸಿದ ಅವರು,

ನಿರೀಕ್ಷಿತ ಫಲಿತಾಂಶ ಪಡೆಯದ ವಿದ್ಯಾರ್ಥಿಗಳು ಮನೋಬಲ ಕಳೆದುಕೊಳ್ಳದೇ ಮುಂದಿನ ಅವಕಾಶಗಳಲ್ಲಿ ಉತ್ತಮ ಸಾಧನೆಗೆ ಯತ್ನಿಸಬೇಕು ಎಂದು ಸಲಹೆ ನೀಡಿದ್ದಾರೆ. ಶಿಕ್ಷಣ ಕ್ಷೇತ್ರವನ್ನು ಅಭಿವೃದ್ಧಿಪಡಿಸಬೇಕು. ಮತ್ತು ಫಲಿತಾಂಶ ಸುಧಾರಿಸಬೇಕೆಂಬ ಉದ್ದೇಶದಿಂದ ನಾನು ನಿರಂತರ ಪ್ರಯತ್ನ ವಹಿಸುತ್ತಾ ಬಂದಿದ್ದೇನೆ. ಗ್ರಾಮ ಸಂಚಾರದ ಸಂದರ್ಭದಲ್ಲಿ ಪ್ರತಿ ಶಾಲೆ–ಕಾಲೇಜುಗಳಿಗೆ ಭೇಟಿ ನೀಡಿ ಪರಿಶೀಲನೆ ಮಾಡಿದ್ದೇನೆ. ಶಿಕ್ಷಕರ ಕೊರತೆ, ವಿದ್ಯಾರ್ಥಿಗಳಿಗೆ ಅನುಗುಣ ಶಿಕ್ಷಕರಿಲ್ಲದಿರುವುದು, ವಿಷಯವಾರು ಶಿಕ್ಷಕರ ಕೊರತೆಯಂತಹ ವಿವಿಧ ಸಮಸ್ಯೆಗಳನ್ನು ತಿಳಿದುಕೊಂಡು ಸರಿಪಡಿಸಲು ಪ್ರಯತ್ನಿಸಿದ್ದೇನೆ. ಇಲಾಖೆ ಅಧಿಕಾರಿಗಳು, ಶಿಕ್ಷಕರ ಜೊತೆಗೆ ಹಲವು ಹಂತಗಳಲ್ಲಿ ಸಭೆ ನಡೆಸಿ ಅಗತ್ಯ ಸಲಹೆ ಸೂಚನೆಗಳನ್ನು ನೀಡಿದ್ದೇನೆ. ವಿದ್ಯಾರ್ಥಿಗಳ ಮನೋಬಲ ಹೆಚ್ಚಿಸಲು ಮತ್ತು ಓದಿನತ್ತ ಪ್ರೇರೇಪಿಸಲು ಪ್ರತಿ ವರ್ಷ ವಿದ್ಯಾರ್ಥಿಗಳು ಮತ್ತು ಅವರ ಪೋಷಕರನ್ನು ಸನ್ಮಾನಿಸುತ್ತಿದ್ದೇನೆ. ಶಿಕ್ಷಕರಿಗೂ ಸನ್ಮಾನ ಕಾರ್ಯಕ್ರಮವನ್ನು ಏರ್ಪಡಿಸಿ ಸರಿಯಾಗಿ ಬೋಧನೆ ಮಾಡುವಂತೆ ಪ್ರೇರಣೆ ನೀಡುವ ಕೆಲಸ ನಿರಂತರವಾಗಿ ಮುಂದುವರೆಸಿಕೊಂಡು ಬಂದಿದ್ದೇನೆ. ಈ ಎಲ್ಲ ಪ್ರಯತ್ನಗಳು, ವಿದ್ಯಾರ್ಥಿಗಳ ಪರಿಶ್ರಮ, ಶಿಕ್ಷಕರು ಮತ್ತು ಇಲಾಖೆಯ ಅಧಿಕಾರಿಗಳ ಸಮನ್ವಯತೆಯಿಂದಾಗಿ ಫಲಿತಾಂಶದಲ್ಲಿ ಗಣನೀಯ ಏರಿಕೆ ಕಂಡುಬಂದಿದೆ. ಮುಂದಿನ ದಿನಗಳಲ್ಲಿ ಇನ್ನಷ್ಟು ಯೋಜಿತ ಕ್ರಮಗಳನ್ನು ಹಾಕಿಕೊಂಡು ಶೇ.100 ರಷ್ಟು ಫಲಿತಾಂಶ ತರುವ ಗುರಿಯೊಂದಿಗೆ ಶ್ರಮಿಸಬೇಕು. ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಮಕ್ಕಳ ದಾಖಲಾತಿಯನ್ನು ಮತ್ತಷ್ಟು ಹೆಚ್ಚಿಸಲು ಪ್ರಯತ್ನಿಸಬೇಕೆಂದು ಶಾಸಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಂಬಂಧಪಟ್ಟ ಅಧಿಕಾರಿಗಳು ಮತ್ತು ಶಿಕ್ಷಕರಿಗೆ ನಿರ್ದೇಶನ ನೀಡಿದ್ದಾರೆ.

ವಿದ್ಯಾರ್ಥಿಗಳಿಗೆ ಸನ್ಮಾನ: ಪ್ರತಿ ವರ್ಷದಂತೆ ಎಸ್ಸೆಸ್ಸೆಲ್ಸಿ ಮತ್ತು ಪಿಯುಸಿಯಲ್ಲಿ ಅತಿ ಹೆಚ್ಚು ಅಂಕಗಳಿಂದ ಉತ್ತೀರ್ಣರಾದ ಮೂರು ಟಾಪರ್‌ಗಳಿಗೆ ಬಹುಮಾನ ಹಾಗೂ ಶೇ.80ಕ್ಕಿಂತ ಹೆಚ್ಚು ಅಂಕಗಳಿಂದ ಉತ್ತೀರ್ಣರಾದ ಔರಾದ(ಬಿ) ಹಾಗೂ ಕಮಲನಗರ ತಾಲ್ಲೂಕಿನ ಎಲ್ಲ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಗುವುದೆಂದು ಶಾಸಕರು ತಿಳಿಸಿದ್ದಾರೆ.

# ಶ್ರೀ ದತ್ತಗಿರಿ ಶಾಲೆಗೆ ಎಸ್‌ಎಸ್‌ಎಲ್‌ಸಿ ದಾಖಲೆಯ ಫಲಿತಾಂಶ

• ಮಲ್ಲಮ್ಮ ನುಡಿ ವಾರ್ತೆ, ಬೀದರ





ಬೀದರ ನಗರದ ಬಸವನಗರ ಕಾಲೋನಿಯ ಶ್ರೀ ದತ್ತಗಿರಿ ಮಹಾರಾಜ ಕನ್ನಡ ಮಾಧ್ಯಮ ಶಾಲೆಗೆ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ನೂರಕ್ಕೆ ನೂರರಷ್ಟು ದಾಖಲೆಯ ಫಲಿತಾಂಶ ಪಡೆದು, ಸಾಧನೆಗೈದಿದ್ದಾರೆಂದು ಶಾಲೆಯ ಪ್ರಾಚಾರ್ಯರಾದ ಶ್ರೀಮತಿ ಜಯದೇವಿ ಯದಲಾಪೂರೆಯವರು ತಿಳಿಸಿದ್ದಾರೆ.

ಬಸವಶ್ರೀ ತಂದೆ ಸಂಜುಕುಮಾರ 97%, ವೈಷ್ಣವಿ ತಂದೆ ಮಚೇಂದ್ರ 95.20%, ಶ್ರಾವಣಿ ತಂದೆ ಉಮೇಶ 94.56%, ಭವಾನಿ ತಂದೆ ಮಲ್ಲಿಕಾರ್ಜುನ 94.40%, ಸಾಯಿಪ್ರಸಾದ ತಂದೆ ನಾಗಪ್ಪಾ 94.8%, ಪೂಜಾ ತಂದೆ ಗುಂಡಪ್ಪಾ 93.44%, ಸುಪ್ರಿತಾ ತಂದೆ ಜಗದೀಶ 92.44%, ನಂದಿನಿ ತಂದೆ ವೀರಶೆಟ್ಟಿ 91.68% ಹಾಗೂ ದಿಪಿಕಾ ತಂದೆ ಮಲ್ಲಿಕಾರ್ಜುನ 90.73% ಅಂಕ ಪಡೆದು, ಜಿಲ್ಲೆಯಲ್ಲಿ ಶಾಲೆಗೆ ಕೀರ್ತಿ ತಂದಿದ್ದಾರೆ. ಪರೀಕ್ಷೆಯಲ್ಲಿ ಒಟ್ಟು 60 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದು, ಎಲ್ಲಾ ವಿದ್ಯಾರ್ಥಿಗಳು ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುತ್ತಾರೆ.

ವಿದ್ಯಾರ್ಥಿಗಳ ಈ ಸಾಧನೆಗೆ ಸಂಸ್ಥೆಯ ಗೌರವ ಅಧ್ಯಕ್ಷರಾದ ಶ್ರೀ ಶ್ರೀ 1008 ವೈರಾಗ್ಯ ಶಿಖಾಮಣಿ ಅವಧೂತಗಿರಿ ಮಹಾರಾಜರು, ಸಂಸ್ಥಾಪಕ ಅಧ್ಯಕ್ಷರಾದ ಶ್ರೀ ಶ್ರೀ 1008 ಮಹಾಮಂಡಳೇಶ್ವರ ಮಹಂತ ಸಿದ್ದೇಶ್ವರಾನಂದಗಿರಿ ಮಹಾರಾಜರು, ಶ್ರೀ.ದ.ಮ. ಆಶ್ರಮ ಟ್ರಸ್ಟ್ ರ್ದಿಪುರ ಉಪಾಧ್ಯಕ್ಷರು ಹಾಗೂ ಸಂಸ್ಥೆಯ ನಾಮನಿರ್ದೇಶನ ಸಕ್ರೀಯ ಅಧ್ಯಕ್ಷರಾದ ಅಶೋಕ ರೆಜೆಂತಲ್, ಸಂಸ್ಥೆಯ ಅಧ್ಯಕ್ಷರಾದ ಮಲ್ಲಿಕಾರ್ಜುನ ಹತ್ತಿ, ಉಪಾಧ್ಯಕ್ಷರಾದ ಶಿವರಾಜ ಪಾಟೀಲ, ಕಾರ್ಯದರ್ಶಿಗಳಾದ ರಮೇಶ ಜಿ. ದುಕಾನದಾರ್, ಜಂಟಿ ಕಾರ್ಯದರ್ಶಿಯಾದ ಸಾಯಿರಾಮ ಅಲ್ಲಾಡಿ, ಸಹ ಕಾರ್ಯದರ್ಶಿ ಪ್ರಫುಲ್ ಪಾಂಡೆ, ಖಜಾಂಚಿ ಪ್ರಭಾಕರ ಮೈಲಾಪುರೆ ಹಾಗೂ ಸಿಬ್ಬಂದಿ ವರ್ಗದವರು ವಿದ್ಯಾರ್ಥಿಗಳಿಗೆ ಅಭಿನಂದನೆಯನ್ನು ಸಲ್ಲಿಸಿದ್ದಾರೆ. ಕನ್ನಡ ಮಾಧ್ಯಮ ಶಾಲೆಯ ಶಿಕ್ಷಕ, ಶಿಕ್ಷಕಿಯರ ಪರಿಶ್ರಮದಿಂದಾಗಿ ಶಾಲೆಗೆ ದಾಖಲೆ ಫಲಿತಾಂಶ ಬಂದಿರುವುದಾಗಿ ಶಾಲೆಯ ಪ್ರಾಚಾರ್ಯರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

# ಇಂದು ಸಂಗೀತ ನೃತ್ಯೋತ್ಸವ ಕಾರ್ಯಕ್ರಮ

• ಮಲ್ಲಮ್ಮ ನುಡಿ ವಾರ್ತೆ, ಬೀದರ



ಶೋಭಾ ಕಲೆ, ಸಾಹಿತ್ಯ, ಸಂಗೀತ ಮತ್ತು ಸಾಂಸ್ಕೃತಿಕ ಟ್ರಸ್ಟ್ ವಾಲ್ದೊಡ್ಡಿ, ಬೀದರ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ಇವರ ಸಂಯುಕ್ತಾಶ್ರಯದಲ್ಲಿ 2025–26ನೇ ಸಾಲಿನ ವಿಶೇಷ ಘಟಕ ಯೋಜನೆಯಡಿ ಸಂಘ ಸಂಸ್ಥೆಗಳ ಧನಸಹಾಯದೊಂದಿಗೆ ಸಂಗೀತ ನೃತ್ಯೋತ್ಸವ ಕಾರ್ಯಕ್ರಮವನ್ನು ಏಪ್ರಿಲ್ 25, 2026 ಶನಿವಾರ ಬೆಳಿಗ್ಗೆ 10.30 ಗಂಟೆಗೆ ಪೂಜ್ಯ ಚನ್ನಬಸವ ಪಟ್ಟದೇವರ ರಂಗಮಂದಿರದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಟ್ರಸ್ಟ್‌ನ ಅಧ್ಯಕ್ಷರಾದ ಶಂಭುಲಿಂಗ ವಾಲ್ದೊಡ್ಡಿ, ಹಾಗೂ ಕಾರ್ಯದರ್ಶಿ ಸತೀಶ ವಾಲ್ದೊಡ್ಡಿ ತಿಳಿಸಿದ್ದಾರೆ.

ಕಾರ್ಯಕ್ರಮವನ್ನು ಜ್ಞಾನಸುಧಾ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಶ್ರೀಮತಿ ಪೂರ್ಣಿಮಾ ಜಿ. ಉದ್ಘಾಟಿಸುವರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶ್ರೀಮತಿ ಸಂಗೀತಾ ರಾಜಕುಮಾರ ವಾಲ್ದೊಡ್ಡಿ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಸಿದ್ರಾಮ ಸಿಂಧೆ, ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಸದಸ್ಯರಾದ ಡಾ.ಸಂಜೀವಕುಮಾರ ಅತಿವಾಳೆ, ಕರ್ನಾಟಕ ಜಾನಪದ ಅಕಾಡೆಮಿ ಸದಸ್ಯರಾದ ವಿಜಯಕುಮಾರ ಸೋನಾರೆ, ಬೀದರನ ಹೆಸರಾಂತ ಗಾಯಕರಾದ ನಾಗೇಂದ್ರ ದಂಡೆ, ಹಿರಿಯ ಸಾಹಿತಿ ಶ್ರೀಮತಿ ಇಂದುಮತಿ ಸುತಾರ, ಹೆಸರಾಂತ ಗಾಯಕಿ ಶ್ರೀಮತಿ ರೇಖಾ ಅಪ್ಪರಾವ ಸೌದಿ, ಭಾಗವಹಿಸಲಿದ್ದಾರೆ.

## ಕಂಟ್ರೋಲ್ ರೂಮ್ ಆರಂಭ

• ಮಲ್ಲಮ್ಮ ನುಡಿ ವಾರ್ತೆ, ರಾಯಚೂರು

ರಾಯಚೂರು ಜಿಲ್ಲೆಯನ್ನು ಬರಗಾಲ ಪೀಡಿತ ಪ್ರದೇಶವೆಂದು ಘೋಷಿಸಿರುವ ಹಿನ್ನಲೆಯಲ್ಲಿ ಜಿಲ್ಲೆಯ ಗ್ರಾಮೀಣ ಪ್ರದೇಶಗಳಲ್ಲಿ ತುರ್ತಾಗಿ ಕುಡಿಯುವ ನೀರಿನ ಸಮಸ್ಯೆಯನ್ನು ಪರಿಹರಿಸಲು ಜಿಲ್ಲಾ ಪಂಚಾಯತ್ ಮತ್ತು ಜಿಲ್ಲೆಯ ಎಲ್ಲಾ ತಾಲೂಕು ಪಂಚಾಯತಿಗಳಲ್ಲಿ ಕಂಟ್ರೋಲ್ ರೂಮ್ ಪ್ರಾರಂಭಿಸಿದ್ದು, ಸಾರ್ವಜನಿಕರು ಈ ಸೌಲಭ್ಯವನ್ನು ಬಳಕೆ ಮಾಡಿಕೊಳ್ಳಬಹುದಾಗಿದೆ ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ ಅವರು ಕೋರಿದ್ದಾರೆ.

ಜಿಲ್ಲಾ ಪಂಚಾಯತ್ ರಾಯಚೂರು ದೂರವಾಣಿ ಸಂಖ್ಯೆ:08532-230539, ತಾಲೂಕು ಪಂಚಾಯತ್ ರಾಯಚೂರು ಮೊಬೈಲ್ ಸಂಖ್ಯೆ: 9483203052, ತಾಲೂಕು ಪಂಚಾಯತ್ ಮಾನವಿ ದೂರವಾಣಿ ಸಂಖ್ಯೆ:08538-221551, ತಾಲೂಕು ಪಂಚಾಯತ್ ಸಿಂಧನೂರು ದೂರವಾಣಿ ಸಂಖ್ಯೆ: 08535-230148, ತಾಲೂಕು ಪಂಚಾಯತ್ ಲಿಂಗಸುಗೂರು ಮೊಬೈಲ್ ಸಂಖ್ಯೆ: 9900577921, 9945226423, 9008727961,ತಾಲೂಕು ಪಂಚಾಯತ್

# ಭಗೀರಥ ಮಹರ್ಷಿಗಳ ಹಾದಿ ನಮಗೆಲ್ಲರಿಗೂ ಆದರ್ಶ

• ಮಲ್ಲಮ್ಮ ನುಡಿ ವಾರ್ತೆ, ಕಲಬುರಗಿ



ಜೀವನದಲ್ಲಿ ಎದುರಾಗುವ ಸವಾಲುಗಳನ್ನು ಕಂಡು ದೃತಿಗೆಡದೆ, ದೃಢ ಸಂಕಲ್ಪದಿಂದ ಮುನ್ನುಗ್ಗಿದರೆ ಅಸಾಧ್ಯವಾದುದನ್ನು ಸಾಧಿಸಬಹುದು ಎಂಬುದಕ್ಕೆ ಭಗೀರಥ ಮಹರ್ಷಿಗಳೇ ಶ್ರೇಷ್ಠ ಉದಾಹರಣೆ. ಅವರ ಹಾದಿ ನಮಗೆಲ್ಲರಿಗೂ ಆದರ್ಶ ಎಂದು ಸಹಕಾರ ಸಂಘಗಳ ಹಿರಿಯ ಲೆಕ್ಕಪರಿಶೋಧಕ ರಂಗನಾಥ ಎಸ್. ಜಡಿ ತಿಳಿಸಿದರು.

ನಗರದಲ್ಲಿ ಗುರುವಾರ ಡಾ.ಎಸ್.ಎಂ ಪಂಡಿತ ರಂಗ ಪಂದಿರದಲ್ಲಿ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತ ಇಲಾಖೆ, ಮಹನಗರ ಪಾಲಿಕೆ ಹಾಗೂ ಜಿಲ್ಲಾ ಪಂಚಾಯತ್ ಇವರುಗಳ ಸಂಯುಕ್ತಾಶ್ರಯದಲ್ಲಿ ಶ್ರೀ ಭಗೀರಥ ಜಯಂತಿ ಕಾರ್ಯಕ್ರಮದಲ್ಲಿ 'ಭಗೀರಥ ಮಹರ್ಷಿಗಳ ಜೀವನ ಪಥ' ಕುರಿತು ಉಪನ್ಯಾಸ ನಿಡಿದ ಅವರು ಪುರಾಣದ ಹಿನ್ನೆಲೆಯನ್ನು ಮೆಲುಕು ಹಾಕಿದರು. ಸಗರ ಚಕ್ರವರ್ತಿಯ ಅರವತ್ತು ಸಾವಿರ ಪುತ್ರರು ಕಪಿಲ ಮುನಿಗಳ ಶಾಪಕ್ಕೆ ತುತ್ತಾಗಿ ಭಸ್ಮವಾದಾಗ ಅವರ ಆತ್ಮಕ್ಕೆ ಸದ್ಗತಿ ದೊರಕಿಸಲು ಭಗೀರಥನು ಪಟ್ಟ ಶ್ರಮ ಇತಿಹಾಸದಲ್ಲಿ ಅಚ್ಚಳಿಯದಂತಿದೆ ಎಂದರು.

ತನ್ನ ಸುಖ-ಭೋಗಗಳನ್ನು ತ್ಯಜಿಸಿ, ಘೋರ ತಪಸ್ಸನ್ನಾಚರಿಸಿ ಆಕಾಶಗಂಗೆಯನ್ನು ಧರೆಗೆ ತಂದ ಭಗೀರಥನ ಕಾರ್ಯವು ಕೇವಲ ಒಂದು ವಂಶದ ಮುಕ್ತಿಯಲ್ಲ, ಅದು ಇಡೀ ಮನುಕುಲಕ್ಕೆ ದೊ-ರೆತ ಮಹಾನ್ ಕೊಡುಗೆಯಾಗಿದೆ ಎಂದು ಹೇಳಿದರು.

ಇಂದಿನ ಯುವ ಪೀಳಿಗೆಯು ಅಲ್ಪ ಹಿನ್ನಡೆಗೂ ಅಧೀರರಾಗುತ್ತಿದ್ದಾರೆ. ಆದರೆ ಭಗೀರಥನ ಕಥೆಯು ನಮಗೆ ಸೋಲೊಪ್ಪದ ಛಲವನ್ನು ಕಲಿಸುತ್ತದೆ.


'ಭಗೀರಥ ಪ್ರಯತ್ನ' ಎಂಬ ಪದವೇ ಇಂದು ಕಠಿಣ ಪರಿಶ್ರಮಕ್ಕೆ ಪರ್ಯಾಯ ಪದವಾಗಿದೆ. ಗುರಿ ಮುಟ್ಟುವ ತನಕ ವಿಶ್ರಮಿಸದ ಅಪ್ರತಿಮ ವ್ಯಕ್ತಿತ್ವ ಅವರದ್ದು ಎಂದು ಎಂದು ತಿಳಿಸಿದ್ದರು.

ಉಪ್ಪಾರ ಸಂಘ ಜಿಲ್ಲಾ ಅಧ್ಯಕ್ಷ ಗೋವಿಂದ ಸಗರ ಅವರು ಮಾತನಾಡಿ ನಗರದಲ್ಲಿ ಶ್ರೀ ಭಗೀರಥ ಮಹರ್ಷಿ ಜಯಂತಿಯನ್ನು ಸರಳವಾಗಿ ಆಚರಿಸಲಾಗಿದ್ದು, ಮುಂದಿನ ದಿನಗಳಲ್ಲಿ ಸಮಾಜದ ಗುರುಗಳ ಸನ್ನಿಧಿಯಲ್ಲಿ ವಿಜೃಂಭಣೆಯಿಂದ ಆಚರಿಸೋಣ. ಈ ಬಾರಿ ಅದ್ದೂ-ರಿಯಾಗಿ ಆಚರಿಸಲು ಸಾಧ್ಯವಾಗದಿದ್ದಕ್ಕೆ ವಿಷಾದಿಸಿದ ಮುಖಂಡರು, ಶೀಘ್ರದಲ್ಲೇ ಕಾರ್ಯಕ್ರಮದ ದಿನಾಂಕ ಪ್ರಕಟಿಸುವುದಾಗಿ ತಿಳಿಸಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪ ನಿರ್ದೇಶಕಿ ಜಗದೀಶ್ವರಿ ಅ. ನಾಸಿ ಸ್ವಗತಿಸಿದರು. ಭಗವಂತ ಆರ್.ಡೊಣೂರ ವಂದಿಸಿದ್ದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಕಾರ್ಯಲಯದ ಪ್ರಥಮ ದರ್ಜೆ ಸಹಾಯಕ ನಾಗರಾಜ, ಭಗೀರಥ ಸೌಹಾರ್ದ ಸಹಕಾರಿ ಬ್ಯಾಂಕ್ ಅಧ್ಯಕ್ಷ ವೆಂಕಟೇಶ್ ನೀರಡಗಿ, ಸತೀಶ್ ಸಗರ, ಗೋಪಾಲ ದೊಡ್ಡಮನಿ, ಬಸವರಾಜ್ ನಾಲ್ವಾರ್, ಭೀಮರಾಯ ವಿ.ಪಿ, ಮೌನೇಶ್ ಪೂಜಾರಿ, ಭೀಮರಾಯ ರಾಮಪುರಹಳ್ಳಿ, ನರಸಪ್ಪ ಜಡಿ, ರಾಘವೇಂದ್ರ ಶಾಂತ್‌ಪುರ ಉಪಸ್ಥಿತರಿದ್ದರು.

## ಖಡಕೇಶ್ವರ ಶಾಲೆಗೆ ಉತ್ತಮ ಫಲಿತಾಂಶ



" ಕನ್ನಡ ಮಾಧ್ಯಮದಲ್ಲಿ ವಿದ್ಯಾರ್ಥಿನಿ ಅಹಿಲ್ಯಾ ದತ್ತಾತ್ರಿ 613 ಅಂಕ ಪಡೆದು ಭಾಲ್ಕಿ ನಗರದಲ್ಲೇ ಪ್ರಥಮ ಸ್ಥಾನ ಪಡೆದಿರುವುದು ಹೆಮ್ಮೆ ತರಿಸಿದೆ. ವಿದ್ಯಾರ್ಥಿಗಳ ನಿರಂತರ ಪ್ರಯತ್ನ, ಶಿಕ್ಷಕರ ಪರಿಶ್ರಮದಿಂದ ಈ ಸಾಧನೆ ಸಾಧ್ಯವಾಗಿದೆ.

**ಸುಧೀರ ನಾಯಕ ಅಧ್ಯಕ್ಷರು ಖಡಕೇಶ್ವರ ವಿದ್ಯಾ ಸಂಸ್ಥೆ ಭಾಲ್ಕಿ**

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಇಲ್ಲಿಯ ಲೆಕ್ಚರ್ ಕಾಲೋನಿಯ ಖಡಕೇಶ್ವರ ಪ್ರೌಢ ಶಾಲೆಗೆ 2025-26ನೇ ಸಾಲಿನ ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶ ಲಭಿಸಿದೆ. ವಿದ್ಯಾರ್ಥಿನಿ ಅಹಿಲ್ಯಾ ದತ್ತಾತ್ರಿ ಕಾಟಕರ್ 613 ಅಂಕ ಪಡೆದು ಶಾಲೆಗೆ ಮತ್ತು ಭಾಲ್ಕಿ ನಗರದಲ್ಲಿ ಕನ್ನಡ ಮಾಧ್ಯಮದ ವಿಭಾಗದಲ್ಲಿ ಪ್ರಥಮ ಸ್ಥಾನ ಪಡೆದು ಕೊಂಡಿದ್ದಾಳೆ ಎಂದು ಮುಖ್ಯಗುರು ಆನಂದ ಕಲ್ಯಾಣೆ ತಿಳಿಸಿದ್ದಾರೆ.

ವಿದ್ಯಾರ್ಥಿಗಳಾದ ಆಕಾಂಶಿ ಉಮೇಶ 603, ಜೀಜಾವು ಬಾಲಾಜಿ 586, ಪ್ರಗತಿ ಸಂತೋಷ 584, ವಿನಿತ್ ವಿಜಯಕುಮಾರ 572, ಶುಭಂ ಶ್ರೀಹರಿ 572 ಮತ್ತು ರೋಹಿತ ಶ್ರಾವಣ 566 ಅಂಕ ಪಡೆದು ಶಾಲೆಗೆ ಕೀರ್ತಿ ತಂದು ಕೊಟ್ಟಿದ್ದಾರೆ.

ಹರ್ಷ :

ವಿದ್ಯಾರ್ಥಿಗಳ ಸಾಧನೆಗೆ ಸಂಸ್ಥೆಯ ಅಧ್ಯಕ್ಷ ಸುಧೀರ ನಾಯಕ, ಕೋಶಾಧ್ಯಕ್ಷ ಪ್ರಭುರಾವ ಧೂಪೆ, ನಿರ್ದೇಶಕ ಅಶೋಕ ಲೋಖಂಡೆ, ಮುಖ್ಯಗುರು ಆನಂದ ಕಲ್ಯಾಣೆ ಸೇರಿದಂತೆ ಸಿಬ್ಬಂದಿ ವರ್ಗದವರು ಹರ್ಷ ವ್ಯಕ್ತ ಪಡಿಸಿದ್ದಾರೆ.

## ಸಿಲಿಂಡರ್ ಬ್ಲಾಸ್ಟ್, ಹೊತ್ತಿ ಉರಿದ ಹೋಟೆಲ್, ಬಾಲಕನಿಗೆ ಗಂಭೀರ ಗಾಯ

• ಮಲ್ಲಮ್ಮ ನುಡಿ ವಾರ್ತೆ, ಬಳ್ಳಾರಿ

ಹೋಟೆಲ್‌ನಲ್ಲಿದ್ದ ಎರಡು ಸಿಲಿಂಡರ್ ಏಕಾಏಕಿ ಬ್ಲಾಸ್ಟ್ (ಸಿಲಿಂಡರ್ ಬ್ಲಾಸ್ಟ್) ಆದ ಪರಿಣಾಮ ಹೋಟೆಲ್ ಹೊತ್ತಿ ಉರಿದ ಘಟನೆ ಜಿಲ್ಲೆಯ ಸಿರಗುಪ್ಪ ತಾಲೂಕಿನ ತೆಕ್ಕಲಕೋಟೆಯಲ್ಲಿ ನಡೆದಿದೆ.

ತೆಕ್ಕಲಕೋಟೆಯ ಈರಣ್ಣ ಎಂಬವರಿಗೆ ಸೇರಿದ ಹೋಟೆಲ್‌ನಲ್ಲಿ ತಡರಾತ್ರಿ 2 ಗಂಟೆ ಸುಮಾ-ರಿಗೆ ಅವಘಡ ಸಂಭವಿಸಿದೆ.

ಹೋಟೆಲ್‌ನಲ್ಲಿ ಈರಣ್ಣನ ಕುಟುಂಬಸ್ಥರು 9 ಜನ ಮಲಗಿದ್ದರು. 9 ಜನರ ಪೈಕಿ ಸಂಪೂರ್ಣವಾಗಿ ಓರ್ವ ಬಾಲಕನಿದ್ದಾನೆ. ಸಿಲಿಂಡರ್ ಸ್ಫೋಟದಲ್ಲಿ 10 ವರ್ಷದ ಶ್ರೀನಿವಾಸ್‌ಗೆ ಗಂಭೀರವಾಗಿದೆ.


ಗಾಯಾಳು ಬಾಲಕನನ್ನು ಬಳ್ಳಾರಿ ವಿಮ್ಸ್ ಆಸ್ಪತ್ರೆಗೆ ದಾಖಲಿಸಿ, ಚಿಕಿತ್ಸೆ ಕೊಡಿಸಲಾಗುತ್ತಿದ್ದು, ಉಳಿದವರೆಲ್ಲರೂ ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ಉರಿದಿದೆ. ಬೆಂಕಿಯ ಕೆನ್ನಾಲಿಗೆಗೆ ಸಿಕ್ಕು ಹಿ ಹೋಟೆಲ್‌ನ ವಸ್ತುಗಳೆಲ್ಲವೂ ಆ ಸುತ್ತು ಕರಕಲವಾಗಿವೆ. ಅಲ್ಲದೇ, ವ ಜೀವನೋಪಾಯಕ್ಕೆ ಇದ್ದ ವಿ ಹೋಟೆಲ್‌ಗೆ ಬೆಂಕಿ ಬಿದ್ದಿದೆ ಬಿ ಹಾಗಾಗಿ ಹೋಟೆಲ್ ಮಾಲೀಕರು ಕಂಗಾಲಾಗಿದ್ದಾರೆ.

ಸಿಲಿಂಡರ್ ಬ್ಲಾಸ್ಟ್ ಅಕ್ಕಪಕ್ಕದ ಎರಡೂರು ಹೋಟೆಲ್‌ಗಳಿಗೆ ಬೆಂಕಿ ವ್ಯಾಪಿಸಿದ ಪರಿಣಾಮ, ಟೈಯರ್ ಅಂಗಡಿಯೂ ಹೊತ್ತಿ ಆದ ಘಟನೆ ಸಂಬಂಧ ತೆಕ್ಕಲಕೋಟೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.



## ಮಹರ್ಷಿ ಭಗೀರಥ ಜಯಂತಿ: ಪುಷ್ಪ ನಮನ ಸಲ್ಲಿಕೆ




• ಮಲ್ಲಮ್ಮ ನುಡಿವಾರ್ತೆ, ಕೊಪ್ಪಳ

ಕೊಪ್ಪಳ ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಮಹರ್ಷಿ ಭಗೀರಥ ಜಯಂತಿಯನ್ನು ಜಿಲ್ಲಾಡಳಿತ ಭವನದ ಕೆಸ್ವಾನ್-2ರ ಸಭಾಂಗಣದಲ್ಲಿ ಗುರುವಾರದಂದು ಸರಳವಾಗಿ ಆಚರಿಸಲಾಯಿತು.

ಕೊಪ್ಪಳ ವಿಧಾನಸಭಾ ಕ್ಷೇತ್ರದ ಶಾಸಕರಾದ ಕೆ.ರಾಘವೇಂದ್ರ ಹಿಟ್ನಾಳ ಹಾಗೂ ಜಿಲ್ಲಾಧಿಕಾರಿಗಳಾದ ಡಾ. ಸುರೇಶ ಬಿ. ಇಟ್ನಾಳ ಅವರು ಮಹರ್ಷಿ ಭಗೀರಥರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸುವ ಮೂಲಕ ಗೌರವ ನಮನ ಸಲ್ಲಿಸಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಕರ್ಣಕುಮಾರ ಕೊಪ್ಪಳ ಜಿಲ್ಲಾ ಭಗೀರಥ ಸಮಾಜದ ಅಧ್ಯಕ್ಷರಾದ ಯಲ್ಲಪ್ಪ ಷಣ್ಮುಖಪ್ಪ ಗದ್ದಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ವೆಂಕಟೇಶ, ತಾಲ್ಲೂಕು ಅಧ್ಯಕ್ಷರಾದ ನಾಗರಾಜ, ಉಪಾಧ್ಯಕ್ಷರಾದ ಹನುಮಂತಪ್ಪ ಬೆಣಕಲ್, ಸಮಾಜದ ಮುಖಂಡರಾದ ಮಲ್ಲಿಕಾರ್ಜುನ, ಹನುಮಪ್ಪ ಕಲಿಕೇರಿ, ಎಂಕಣ್ಣ ಹೆಚ್., ಲಕ್ಷ್ಮೀಕಾಂತ ನಾಲ್ವಾಡ, ನಾಗರಾಜ ಚಳ್ಳೂರು, ಹನುಮಂತಪ್ಪ ಕಲಕೇರಿ, ಯಮನಗೌಡ ಪೋ. ಪಾಟೀಲ, ಸಿದ್ದಪ್ಪ ಕವಲೂರು, ಬಸವರಾಜ, ಮಂಜುನಾಥ ಪಾಟೀಲ, ಶರಣಪ್ಪ ಹಟ್ಟಿ, ಗುದ್ನೆಪ್ಪ ಹೊಸೂರು, ಹೊನ್ನಪ್ಪ ಗೊಡೆಕಾರ್, ಹನುಮಂತಪ್ಪ ಕಟಗಿ, ನಿಂಗಪ್ಪ, ಬಾಲಾಜಿ, ಅಶೋಕ ಸಿಂಧೋಗಿ, ರಾಮಚಂದ್ರಪ್ಪ ಕವಲೂರು ಹಾಗೂ ಮತ್ತಿತರರು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

## ಮಹರ್ಷಿ ಭಗೀರಥ ಜಯಂತಿ



• ಮಲ್ಲಮ್ಮ ನುಡಿ ವಾರ್ತೆ, ಮುದಗಲ್

ಪುರಸಭೆ, ನಾಡ ಕಾರ್ಯಾಲಯ, ಸಮುದಾಯ ಆರೋಗ್ಯ ಕೇಂದ್ರ, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ರೈತ ಸಂಪರ್ಕ ಕೇಂದ್ರ, ಗ್ರಂಥಾಲಯ ಸೇರಿದಂತೆ ವಿವಿಧಡೆ ಗುರುವಾರ ಮಹರ್ಷಿ ಭಗೀರಥ ಜಯಂತಿ ಆಚರಣೆ ಮಾಡಿದರು.

ಪುರಸಭೆ ಕಾರ್ಯಾಲಯದಲ್ಲಿ ಪುರಸಭೆ ಮಾಜಿ ಸದಸ್ಯ ಬಾಬು ಉಪ್ಪಾರ, ನಾಡ ಕಾರ್ಯಾಲಯದಲ್ಲಿ ಕಂಪ್ಯೂಟರ್ ಆಪರೇಟರ್ ಮುನೀರ್ ಪಾಷಾ, ಸಮುದಾಯ ಆರೋಗ್ಯ ಕೇಂದ್ರದಲ್ಲಿ ಬಸವರಾಜ, ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಡಾ. ಸಿದ್ದರಾಮ ಪಾಟೀಲ್, ಗ್ರಂಥಾಲಯದಲ್ಲಿ ಗ್ಯಾನಪ್ಪ ದಫೇದಾರ, ಎ ಪಿ ಎಂ ಸಿಯಲ್ಲಿ ಮೌನೇಶ, ಅಮರೇಶ ಹಾಗೂ ರೈತ ಸಂಪರ್ಕ ಕೇಂದ್ರದಲ್ಲಿ ಅಮರೇಶ ಅವರು ಮಹರ್ಷಿ ಭಗೀರಥರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ, ಪೂಜೆ ಸಲ್ಲಿಸಿ, ಪುಷ್ಪಾರ್ಚನೆ ಮಾಡಿದರು.

ಪುರಸಭೆ ಮುಖ್ಯಾ ಧಿಕಾರಿ ಪ್ರವೀಣ್ ಕುಮಾರ್ ಬೋಗಾರ್, ಸಿಬ್ಬಂದಿಗಳು ಇಂಜಿನಿಯರ್ ಪ್ರಿಯಾಂಕ, ಪವನ ಕುಮಾರ, ನಿಸಾರ್ ಅಹಮದ್, ಶರಣಪ್ಪ ಕಟ್ಟಿಮನಿ, ಬಿಲ್ಕಲೆಕ್ಟರ್ ವೀರೇಶ, ರಾಜಶೇಖರ, ತಿಪ್ಪಣ್ಣ, ಶರಣಮ್ಮ, ಶಿವಕುಮಾರ, ವೀರೇಶ ಉಪ್ಪಾರ, ಬಸವರಾಜ, ಸೇರಿದಂತೆ ಇತರರಿದ್ದರು.

## ಅವೈಜ್ಞಾನಿಕವಾಗಿ ಇಂಗ್ಲಿಷ್ ಮಾಧ್ಯಮ ಹೇರಿಕೆ ವಿರುದ್ಧ ಪ್ರತಿಭಟನೆ




• ಮಲ್ಲಮ್ಮ ನುಡಿ ವಾರ್ತೆ, ಬಳ್ಳಾರಿ

ಎಐಡಿಎಸ್‌ಓ ವಿದ್ಯಾರ್ಥಿ ಸಂಘಟನೆ ಹಾಗೂ ಸಾರ್ವಜನಿಕ ಶಿಕ್ಷಣ ಉಳಿಸಿ ಸಮಿತಿ ನೇತೃತ್ವದಲ್ಲಿ ಇಂದು ನಗರದ ರಾಯಲ್ ಸರ್ಕಲ್ ನಲ್ಲಿ ದ್ವಿ ಭಾಷಾ ನೀತಿ ಹೆಸರಿನಲ್ಲಿ ಇಂಗ್ಲಿಷ್ ಮಾಧ್ಯಮ ಹೇರಿಕೆ ವಿರುದ್ಧ ರಾಯಲ್ ಸರ್ಕಲ್ ನಲ್ಲಿ ಪ್ರತಿಭಟನೆ ನಡೆಸಲಾಯಿತು.

ಎಐಡಿಎಸ್‌ಓ ಜಿಲ್ಲಾ ಅಧ್ಯಕ್ಷರು ಕೆ ಈರಣ್ಣ ಮಾತನಾಡಿ...ರಾಜ್ಯದ 5000 ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಒಂದನೇ ತರಗತಿಯಿಂದಲೇ ಆಂಗ್ಲ ಮಾಧ್ಯಮವನ್ನು ಆರಂಭಿಸಲು ರಾಜ್ಯ ಸರ್ಕಾರವು ಆದೇಶಿಸಿದೆ. ಎಲ್ಲ ಜಿಲ್ಲೆಗಳಲ್ಲಿ ಈಗಾಗಲೇ ಸರ್ಕಾರಿ ಶಾಲೆ ಶಿಕ್ಷಕರಿಗೆ ಆಂಗ್ಲ ಮಾಧ್ಯಮ ತರಬೇತಿ ನೀಡಲಾಗುತ್ತಿದೆ. ಸರ್ಕಾರವು ಇದನ್ನು ದ್ವಿಭಾಷಾ ಮಾಧ್ಯಮ ಎಂದು ಕರೆಯುತ್ತಿದ್ದರೂ ಇಂಗ್ಲಿಷಿನಲ್ಲೇ ಪಾಠ ಮಾಡಬೇಕೆಂದು ಹಲವೆಡೆ ಶಿಕ್ಷಕರಿಗೆ ನಿರ್ದೇಶನ ನೀಡಲಾಗುತ್ತಿದೆ. ಬಳ್ಳಾರಿ ಜಿಲ್ಲೆಯ 174 ಶಾಲೆಗಳಲ್ಲಿ ಜೂನ್ ನಿಂದ ಕನ್ನಡ ಮಾಧ್ಯಮ ಇರುವುದಿಲ್ಲ, ಬದಲಿಗೆ ಕೇವಲ ಆಂಗ್ಲ ಮಾಧ್ಯಮಕ್ಕೆ ಪ್ರವೇಶ ನೀಡಲಾಗುವುದೆಂದು ಪಾಲಕರಿಗೆ ತಿಳಿಸಲಾಗಿದೆ. ಇದು ಅಕ್ಷಮ್ಯ! ಸರ್ಕಾರದ ಈ ನಡೆಯನ್ನು ಖಂಡಿಸಿದರು.

ಮಗುವಿನ ಸಮರ್ಪಕ ಬೌದ್ಧಿಕ ಮತ್ತು ಮಾನಸಿಕ ವಿಕಾಸಕ್ಕೆ ಕನಿಷ್ಠ 5ನೇ ತರಗತಿವರೆಗೂ ಮಾತೃಭಾಷೆಯಲ್ಲಿ ಶಿಕ್ಷಣ ದೊರೆಯಬೇಕು. ಸಂವಹನದ ಭಾಷೆಯೇ ಕಲಿಕೆಯ ಭಾಷೆಯಾದಾಗ ಮಗುವು ತನ್ನ ಭಾವನೆಯನ್ನು ಸಮರ್ಪಕವಾಗಿ ವ್ಯಕ್ತಪಡಿಸಲು ಮತ್ತು ವಿಷಯಗಳನ್ನು ಗ್ರಹಿಸಲು ಸಹಾಯಕವಾಗುತ್ತದೆ ಎಂಬುದು ತಜ್ಞರ ಅಭಿಪ್ರಾಯ. ಈ ಅಭಿಪ್ರಾಯವನ್ನು ಸರ್ಕಾರ ಗಾಳಿಗೆ ತೂರಿದೆ. ಕೂಡಲೇ ಈ ಅವೈಜ್ಞಾನಿಕ ನಿರ್ಧಾರವನ್ನು ಹಿಂಪಡೆಯುವಂತೆ ಎಐಡಿಎಸ್‌ಓ ಆಗ್ರಹಿಸುತ್ತದೆ.

ಸಾರ್ವಜನಿಕ ಶಿಕ್ಷಣ ಉಳಿಸಿ ಸಮಿತಿಯ ಸಲಹೆಗಾರರು ಮತ್ತು ಅಖಿಲ ಭಾರತ ಶಿಕ್ಷಣ ಉಳಿಸಿ ಸಮಿತಿಯ ಅಧ್ಯಕ್ಷರು ಆರ್.ಸೋಮಶೇಖರ್ ಮಾತನಾಡುತ್ತಾ, ಸರ್ಕಾರವು ಅತ್ಯಂತ ಅಪ್ರಜಾತಾಂತ್ರಿಕವಾಗಿ ಕರ್ನಾಟಕದ ವಿದ್ಯಾರ್ಥಿಗಳಿಂದ ಕನ್ನಡ ಭಾಷೆಯನ್ನೇ ಕಿತ್ತುಕೊಳ್ಳುತ್ತಿದೆ. ಇಂಗ್ಲಿಷ್ ಕಲಿಕೆ ಅವಶ್ಯಕ ನಿಜ. ಆದರೆ ಕನ್ನಡವನ್ನು ಕೊಂದು ಇಂಗ್ಲಿಷ್ ಕಲಿಸಲು ಹೊರಟಿರುವುದು ನಾಡಿನ ಜನತೆಗೆ ಮಾಡಿರುವ ದ್ರೋಹ ಹಾಗೂ ಕನ್ನಡಕ್ಕೆ ಮಾಡಿರುವ ಅಪಚಾರ. ನಾಡಿನ ವಿದ್ಯಾರ್ಥಿಗಳು, ಯುವಜನರು, ಪೋಷಕರು, ಸಾಹಿತಿಗಳು ಹಾಗೂ ಶಿಕ್ಷಣ ಪ್ರೇಮಿ ಜನತೆ ಕನ್ನಡವನ್ನು ರಕ್ಷಿಸಲು

ನಾಗರಿಕ ಜನರು ಧ್ವನಿಯತ್ತಬೇಕೆಂದರು.

ಪ್ರತಿಭಟನೆಯ ಅಧ್ಯಕ್ಷತೆ ಎಐಡಿಎಸ್‌ಓ ಜಿಲ್ಲಾ ಉಪಾಧ್ಯಕ್ಷರು ಎಂ.ಶಾಂತಿ ವಹಿಸಿದ್ದರು. ಹಾಗೆ ಈ ವೇಳೆ ಸಾರ್ವಜನಿಕ ಶಿಕ್ಷಣ ಉಳಿಸಿ ಸಮಿತಿಯ ಉಪಾಧ್ಯಕ್ಷರಾದ ಗುರಳ್ಳಿ ರಾಜ,

ಜೆ.ಸೌಮ್ಯ ಮತ್ತು ಗೌರಮ್ಮ, ಮಹಾಲಕ್ಷ್ಮೀ, ಭಾರತಿ, ಜಿಲ್ಲಾ ಕಾರ್ಯದರ್ಶಿ ಕಂಬಳಿ ಮಂಜುನಾಥ್, ವಿದ್ಯಾರ್ಥಿಗಳು, ಸಾರ್ವಜನಿಕರು ಭಾಗವಹಿಸಿದ್ದರು.

## ಭಕ್ತರಿಗೆ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಿ: ಇಟ್ನಾಳ

• ಮಲ್ಲಮ್ಮ ನುಡಿವಾರ್ತೆ, ಕೊಪ್ಪಳ



ಜಿಲ್ಲೆ ಸುಪ್ರಸಿದ್ಧ ಧಾರ್ಮಿಕ ಕ್ಷೇತ್ರವಾದ ಹುಲಿಗಿ ಗ್ರಾಮದ ಶ್ರೀ ಹುಲಿಗೆಮ್ಮ ದೇವಿ ದೇವಸ್ಥಾನದ 2026ರ ವಾರ್ಷಿಕ ಜಾತ್ರಾ ಮಹೋತ್ಸವದ ಅಂಗವಾಗಿ ಕ್ಷೇತ್ರಕ್ಕೆ ಆಗಮಿಸುವ ಭಕ್ತರಿಗೆ ಶುದ್ಧ ಕುಡಿಯುವ ನೀರಿನ ವ್ಯವಸ್ಥೆಯನ್ನು ಕಲ್ಪಿಸಬೇಕು ಎಂದು ಜಿಲ್ಲಾಧಿಕಾರಿಗಳಾದ ಡಾ. ಸುರೇಶ ಬಿ. ಇಟ್ನಾಳ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಮೇ 10 ರಿಂದ ಮೇ 14 ರವರೆಗೆ ಜಾತ್ರೆಗೆ ಆಗಮಿಸುವ ಭಕ್ತರಿಗೆ ಸೂಕ್ತ ಕುಡಿಯುವ ನೀರಿನ ವ್ಯವಸ್ಥೆಯನ್ನು ಹಾಗೂ ಮಹಾರಥೋತ್ಸವದ ನಂತರ ಒಂದು ತಿಂಗಳ ಕಾಲ ನಡೆಯುವ ಜಾತ್ರೆಗೆ ದೇವಸ್ಥಾನದಿಂದ 4 ಟ್ಯಾಂಕರ್‌ಗಳು, ಬಾಡಿಗೆ ರೂಪದಲ್ಲಿ 40, ಒಟ್ಟು 40 ಟ್ಯಾಂಕರ್‌ಗಳ ಮುಖಾಂತರ ಇನ್ನೂ ಹೆಚ್ಚಿನ ನೀರಿನ ಸೌಲಭ್ಯವನ್ನು ಒದಗಿಸಲು ಅನುಕೂಲವಾಗುವಂತೆ ಮುಖ್ಯ 'ಜನಸಂದಣಿ ಇರುವ ಪ್ರದೇಶದಲ್ಲಿ ಸಿಸ್ಟನ್‌ಗಳನ್ನು ಮಾಡಿ ಕುಡಿಯುವ ನೀರಿನ ವ್ಯವಸ್ಥೆ ಮಾಡಲು ಇತ್ತೀಚೆಗೆ ನಡೆದ ಸಭೆಯಲ್ಲಿ ನಿರ್ಣಯಿಸಲಾಗಿದೆ.

ಅಲ್ಲದೇ ಬಾಡಿಗೆ ರೂಪದಲ್ಲಿ ಬ್ಯಾರಲ್‌ಗಳ ವ್ಯವಸ್ಥೆ ಮಾಡಿಕೊಂಡು, ವಾಹನ ನಿಲುಗಡೆ ಪ್ರದೇಶಗಳಲ್ಲಿ, ಶಿವಪುರ ರಸ್ತೆ, ಗವಿಮಠದ ಹತ್ತಿರ, ಹಳೇ ಮತ್ತು ಹೊಸ ತುಂಗಭದ್ರಾ ಪ್ರೌಢಶಾಲೆ ಮೈದಾನ, ಪ್ರಾಥಮಿಕ ಶಾಲೆ ಮೈದಾನ, ಕೋರಮಂಡಲ್ ಇಂಟರ್‌ನ್ಯಾಶನಲ್ ಫರ್ಟಿಲೈಸರ್ ಫ್ಯಾಕ್ಟರಿ ಮೈದಾನ, ನಂದಿ ಸರ್ಕಲ್, ಹೊಸ ಅಂಬೇಡ್ಕರ್ ಕಾಲೋನಿ ಮುಂದೆ, ರೈಲ್ವೆ ಗೇಟ್ ಹತ್ತಿರ, ರೈಲ್ವೇ ಸ್ಟೇಷನ್ ಸರ್ಕಲ್ ಹತ್ತಿರ ಹಾಗೂ ಸತ್ಯನಾರಾಯಣ ದೊನ್ನಿ ಬಿಲ್ಡಿಂಗ್ ಹತ್ತಿರ, ದೇವಸ್ಥಾನದ ಮತ್ತು ದೇವರ ದರ್ಶನಕ್ಕೆ ಕ್ಯೂಲೈನ್‌ನಲ್ಲಿ ಹೋಗುವ ಭಕ್ತರಿಗೆ ಅವಶ್ಯಕತೆಗನುಗುಣವಾಗಿ ಟ್ಯಾಂಕರ್‌ಗಳನ್ನು ನಿಯೋಜಿಸಿಕೊಂಡು ಕುಡಿಯುವ ನೀರಿನ ವ್ಯವಸ್ಥೆ ಮಾಡಲು ಸಹ ನಿರ್ಣಯಿಸಲಾಗಿದ್ದು, ನೀರಿನ ಪೈಪ್ ಲೈನ್ ಲೀಕೇಜ್ ಆಗದಂತೆ ನಿರ್ವಹಣೆ ಮಾಡಲು ನಾನ್-ಪೋರ್ಟಬಲ್ ನೀರು ಬಂದಲ್ಲಿ ಅದನ್ನು ಭಕ್ತರ ಬಳಕೆಗೆ ನೀಡಬಾರದು. ನೀರಿನ ಗುಣಮಟ್ಟವನ್ನು ಪ್ರತಿನಿತ್ಯ ಪರೀಕ್ಷಿಸಿ ಶುದ್ಧ ನೀರು ಮಾತ್ರ ಭಕ್ತರಿಗೆ ಬಳಕೆ ಮಾಡಲು ಹಾಗೂ ಕಲುಷಿತ ನೀರಿನಿಂದ ಯಾವುದೇ ರೀತಿಯ ಇನ್‌ಫೆಕ್ಷನ್ ಆಗದಂತೆ ಹ್ಯಾಲೋಜನ್ ಮಾತ್ರೆಯನ್ನು ನೀರಿನಲ್ಲಿ ಬಳಸಲು ಹಾಗೂ ಇದರ ಬಗ್ಗೆ ಪ್ರಮಾಣ ಪತ್ರ ಒದಗಿಸಲು ಹುಲಿಗಿ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳಬೇಕು.

ನೀರಿನ ಅರವಟ್ಟಿಗೆಗಳ ವ್ಯವಸ್ಥೆಗಾಗಿ ಸಿಬ್ಬಂದಿಗಳನ್ನು ನಿಯೋಜನೆ ಮಾಡಿಕೊಂಡು, ದೇವಸ್ಥಾನದಿಂದ ಭಕ್ತರಿಗೆ ಅನುಕೂಲವಾಗುವ ಕಡೆಗಳಲ್ಲಿ ವ್ಯವಸ್ಥಿತವಾಗಿ ಕುಡಿಯುವ ನೀರಿನ ವ್ಯವಸ್ಥೆ ಮಾಡಬೇಕು. ಒಟ್ಟಾರೆ ಹುಲಿಗಿ ಗ್ರಾಮದ ಶ್ರೀ ಹುಲಿಗೆಮ್ಮ ದೇವಿ ದೇವಸ್ಥಾನದ 2026ರ ವಾರ್ಷಿಕ ಜಾತ್ರಾ ಮಹೋತ್ಸವಕ್ಕೆ ಆಗಮಿಸುವ ಭಕ್ತರಿಗೆ ಯಾವುದೇ ರೀತಿಯ ಕುಡಿಯುವ ನೀರಿನ ಸಮಸ್ಯೆಗಳಾಗದಂತೆ ನೋಂಡಿಕೊಳ್ಳುವಂತೆ ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿಗಳು, ಹುಲಿಗಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಮತ್ತು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಕಾರ್ಯಪಾಲಕ ಅಭಿಯಂತರರಿಗೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿದ್ದಾರೆ.

## ಕಾರ್ ಬೈಕ್ ಭೀಕರ ಅಪಘಾತ: ಸೂರಿ ಸಾವು ಚಾಲಕ ಪರಾರಿ



• ಮಲ್ಲಮ್ಮ ನುಡಿ ವಾರ್ತೆ, ಬಳ್ಳಾರಿ

ಜಿಲ್ಲೆಯ ಗೋನಾಳ್ ಗ್ರಾಮದ ಸಮೀಪ ಬುಧವಾರ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಬೈಕ್ ಸವಾರನಾದ ಸೂರಿ (32) ಸ್ಥಳದಲ್ಲೇ ಸಾವನ್ನಪ್ಪಿದ ದುರ್ಘಟನೆ ನಡೆದಿದೆ.

ಸಂಜೀವರಾಯನಕೋಟೆ ಗ್ರಾಮದಲ್ಲಿ ವಿವಾಹವಾಗಿದ್ದ ಸೂರಿ ಅವರು ತಮ್ಮ ಬೈಕ್‌ನಲ್ಲಿ ಸಾಗುತ್ತಿದ್ದ ವೇಳೆ, ವೇಗವಾಗಿ ಬಂದ ಕಾರೊಂದು ಡಿಕ್ಕಿ ಹೊಡೆದ ಪರಿಣಾಮ ಗಂಭೀರ ಗಾಯಗೊಂಡು ಸ್ಥಳದಲ್ಲೇ ಪ್ರಾಣ ಕಳೆದುಕೊಂಡಿದ್ದಾರೆ ಎಂದು ತಿಳಿದು ಬಂದಿದೆ.

ಅಪಘಾತದ ತೀವ್ರತೆಗೆ ಸೂರಿ ಅವರಿಗೆ ಯಾವುದೇ ರಕ್ಷಣೆ ಸಿಗದೇ ಸ್ಥಳದಲ್ಲೇ ಮೃತಪಟ್ಟಿದ್ದು,

ಘಟನೆ ನಂತರ ಕಾರು ಚಾಲಕ ಪರಾರಿಯಾಗಿರುವುದು ಮತ್ತಷ್ಟು ಆತಂಕಕ್ಕೆ ಕಾರಣವಾಗಿದೆ.

ಘಟನಾ ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಪ್ರಕರಣ ದಾಖಲಿಸಿಕೊಂಡು ಪರಾರಿಯಾದ ಚಾಲಕನಿಗಾಗಿ ಶೋಧ ಕಾರ್ಯ ಮುಂದುವರಿಸಿದ್ದಾರೆ.

ಈ ದುರ್ಘಟನೆಗೆ ಸಂಬಂಧಿಸಿದಂತೆ ಹೆಚ್ಚಿನ ಮಾಹಿತಿ ಇನ್ನಷ್ಟೇ ಲಭ್ಯವಾಗಬೇಕಿದೆ.

# ಯುವಕ ಕಾಣೆ; ಪತ್ತೆಗೆ ಮನವಿ



• ಮಲ್ಲಮ್ಮ ನುಡಿ ವಾರ್ತೆ, ಬಳ್ಳಾರಿ

ಬಳ್ಳಾರಿ ತಾಲ್ಲೂಕಿನ ಶಂಕರಬಂಡೆ ಗ್ರಾಮದ ರೂಪನಗುಡಿ ರಸ್ತೆಯ ಈಶ್ವರ ಗುಡಿ ಹತ್ತಿರದ 1ನೇ ವಾರ್ಡ್‌ನ ಹುಬ್ಬಳ್ಳಿ ನಾಗನಗೌಡ ಎನ್ನುವ 28 ವರ್ಷದ ಯುವಕ ಏ.20 ರಂದು ಸ್ನೇಹಿತನ ಮದುವೆಗೆ ಹೋಗಿಬರುವುದಾಗಿ ಹೇಳಿ ಮರಳಿ ಮನೆಗೆ ಬಾರದೇ ಕಾಣೆಯಾಗಿರುವ ಕುರಿತು ಬಳ್ಳಾರಿ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪತ್ತೆಗೆ ಸಹಕರಿಸಬೇಕೆಂದು ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಮನವಿ ಮಾಡಿದ್ದಾರೆ.

ಚಹರೆ ಗುರುತು: ಎತ್ತರ 5.8 ಅಡಿ, ಕೋಲು ಮುಖ, ಗೋಧಿ ಮೈ ಬಣ್ಣ, ಸಾಧಾರಣ ಮೈ ಕಟ್ಟು, ಕಪ್ಪು ಕೂದಲು ಹೊಂದಿದ್ದು, ಬಲಗೈ ಗೆ ಶಿವನ ಅಚ್ಚೆ ಹಾಕಿಸಿಕೊಂಡಿರುತ್ತಾನೆ.

ಕಾಣೆಯಾದ ಸಂದರ್ಭದಲ್ಲಿ ಅರ್ಧ ತೋಳಿನ ನೀಲಿ ಬಣ್ಣದ ಅಂಗಿ, ಕಪ್ಪು ಬಣ್ಣದ ಜೀನ್ಸ್ ಪ್ಯಾಂಟ್ ಧರಿಸಿರುತ್ತಾನೆ. ಕನ್ನಡ ಮತ್ತು ತೆಲುಗು ಭಾಷೆ ಮಾತನಾಡುತ್ತಾನೆ.

ಯುವಕನ ಬಗ್ಗೆ ಯಾವುದೇ ಮಾಹಿತಿ ದೊರೆತಲ್ಲಿ ಬಳ್ಳಾರಿ ಗ್ರಾಮೀಣ ಪೊಲೀಸ್ ಠಾಣೆಯ ದೂ.08392-276461, ಮೊ.9480803049 ಅಥವಾ ಬಳ್ಳಾರಿ ಪೊಲೀಸ್ ಕಂಟ್ರೋಲ್ ರೂಂ ದೂ.08392-258100 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ಕೋರಿದ್ದಾರೆ.

# ಇಂದು ವಿದ್ಯುತ್ ವ್ಯತ್ಯಯ

• ಮಲ್ಲಮ್ಮ ನುಡಿ ವಾರ್ತೆ, ಬಳ್ಳಾರಿ

ಬಳ್ಳಾರಿ ಗ್ರಾಮೀಣ ಜೆಸ್ಕಾಂ ವ್ಯಾಪ್ತಿಯ 110/11 ಕೆ.ವಿ ಸೋಮಸಮುದ್ರ ಉಪ-ಕೇಂದ್ರದ ವಿದ್ಯುತ್ ವಿತರಣಾ ಕೇಂದ್ರದಲ್ಲಿ 4ನೇ ಮಾಸಿಕ ನಿರ್ವಹಣೆ ಮತ್ತು ದುರಸ್ತಿ ಕಾರ್ಯ ಕೈಗೊಂಡಿರುವುದರಿಂದ ಏ.25 ರಂದು ಬೆಳಿಗ್ಗೆ 08 ರಿಂದ ಮಧ್ಯಾಹ್ನ 03 ಗಂಟೆಯವರೆಗೆ 110/11ಕೆ.ವಿ ಸೋಮಸಮುದ್ರ ವಿದ್ಯುತ್ ಉಪ-ಕೇಂದ್ರ ಮತ್ತು 33/11ಕೆ.ವಿ ಗುಡದೂರು ವಿದ್ಯುತ್ ಉಪಕೇಂದ್ರದಿಂದ ವಿದ್ಯುತ್ ಸರಬರಾಜಾಗುವ ವಿವಿಧ 11ಕೆ.ವಿ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ವಿದ್ಯುತ್ ವ್ಯತ್ಯಯವಾಗುವ ಪ್ರದೇಶಗಳು:

ಎಫ್-1 ಎನ್.ಜೆ.ವೈ ಬಾಲಾಜಿ ನಗರ ಕ್ಯಾಂಪ್ ಮಾರ್ಗದ ರ್ಲಗುಂದಿ, ವಿಜಯನಗರ ಕ್ಯಾಂಪ್, ಜಾಲಿಬೆಂಜಿ, ಬಾಲಾಜಿ ನಗರ ಕ್ಯಾಂಪ್, ಜ್ಯಾಲಿಬೆಂಜಿ. ಎಫ್-11 ಐ.ಪಿ ಸೆಟ್ ಫೀಡರ್ ಸೋಮಸಮುದ್ರ ಮಾರ್ಗದ ಸೋಮಸಮುದ್ರ ವಕ್ರಾಣಿ ಕ್ಯಾಂಪ್, ಲಕ್ಷಿ ನಗರ ಕ್ಯಾಂಪ್, ವೀರಾಂಜಿನೇಯ ಕ್ಯಾಂಪ್, ಕೋಳೂರು, ಮಧುರೆ, ಕೊಳಗಲ್ಲು, ಭಾಗ್ಯನಗರ ಕ್ಯಾಂಪ್, ಮಲ್ಲಾರೆಡ್ಡಿ ಕ್ಯಾಂಪ್, ಕೃಷಿ ಪ್ರದೇಶಗಳು.

ಎಫ್-10 ಶ್ರೀಧರಗಡ್ಡೆ ಎನ್.ಜೆ.ವೈ ಫೀಡರ್ ಮಾರ್ಗದ ಸೋಮಸಮುದ್ರ, ವಕ್ರಾಣಿ ಕ್ಯಾಂಪ್, ಲಕ್ಷಿ ನಗರ ಕ್ಯಾಂಪ್, ವೀರಾಂಜಿನೇಯ ಕ್ಯಾಂಪ್, ಕೋಳೂರು, ಮಧುರೆ, ಭಾಗ್ಯನಗರ ಕ್ಯಾಂಪ್, ಮಲ್ಲಾರೆಡ್ಡಿ ಕ್ಯಾಂಪ್, ಕೋಳೂರು ಕ್ರಾಸ್, ದಮ್ಮೂರು, ಡಿ.ಕಗ್ಗಲ್, ವಿ.ಟಿ.ಕ್ಯಾಂಪ್.

ಎಫ್-4 ಐ.ಪಿ ಸೆಟ್ ರ್ಲಗುಂದಿ ಫೀಡರ್ ಮಾರ್ಗದ ರ್ಲಗುಂದಿ, ಬಾಲಾಜಿನಗರ ಕ್ಯಾಂಪ್, ಜ್ಯಾಲಿಬೆಂಜಿ, ಶ್ರೀಧರಗಡ್ಡ, ವಿಜಯನಗರ ಕ್ಯಾಂಪ್ ಕೃಷಿ ಪ್ರದೇಶಗಳು. ಎಫ್-5 ಡಾಕ್ಟರ್ ಕ್ಯಾಂಪ್ ಮಾರ್ಗದ ಶ್ರೀಧರಗಡ್ಡೆ, ಗುಡಾರ್ ನಗರ, ಎಸ್‌ಆರ್‌ಕೆ ಲೇಔಟ್ 1 ಮತ್ತು 2 ಪ್ಯೂಪಿಲ್ ಟ್ರೀ ಸ್ಕೂಲ್, ಬಸವೇಶ್ವರ ಲೇಔಟ್, ಎನ್.ಆರ್ ರಾಮಮೂರ್ತಿ ಮತ್ತು ಡಾಕ್ಟರ್ ಕ್ಯಾಂಪ್.

ಎಫ್-10 ಸಿಟಿ ಫೀಡರ್ ಮಾರ್ಗದ ವಕ್ರಾಣಿ ಕ್ಯಾಂಪ್. ಎಫ್-01 ಡಿ.ಕಗ್ಗಲ್ ಐಪಿ ಮಾರ್ಗದ ಡಿ.ಕಗ್ಗಲ್ ಕೃಷಿ ಪ್ರದೇಶಗಳು. ಎಫ್-02 ಗುಡುದೂರು ಐಪಿ ಮಾರ್ಗದ ಗುಡುದೂರು ಕೃಷಿ ಪ್ರದೇಶಗಳು. ಎಫ್-03 ಹಂದಿಹಾಳ್ ಐಪಿ ಮಾರ್ಗದ ಹಂದಿಹಾಳ್ ಚಾನಾಳ್ ಕೃಷಿ ಪ್ರದೇಶಗಳು. ಎಫ್-04 ಗುಡುದೂರು ಎನ್.ಜೆ.ವೈ ಮಾರ್ಗದ ಹಂದಿಹಾಳ್, ಚಾನಾಳ್, ಗುಡುದೂರು ಗ್ರಾಮಗಳು.

ಎಫ್-05 ಚಾನಾಳ್ ಐಪಿ ಮಾರ್ಗದ ಚಾನಾಳ್ ಕೃಷಿ ಪ್ರದೇಶಗಳು. ಎಫ್-06 ತಾಳೂರು ಐಪಿ ಮಾರ್ಗದ ಹಡ್ಲಿಗಿ, ಹೀರೆ ಹಡ್ಲಿಗಿ, ಬರಸಕೋಡು, ತಾಳೂರು ಕೃಷಿ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಹಾಗಾಗಿ ಸಾರ್ವಜನಿಕರು, ವಿದ್ಯುತ್ ಗ್ರಾಹಕರು ಸಹಕರಿಸಬೇಕು ಎಂದು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಾವದಗಿಯಲ್ಲಿ ಸಿಡಿಲು ಬಡಿದು ಇಬ್ಬರ ಸಾವು



• ಮಲ್ಲಮ್ಮ ನುಡಿ ವಾರ್ತೆ, ಭಾಲ್ಕಿ

ತಾಲೂಕಿನ ನಾವದಗಿ ಗ್ರಾಮದ ಹೊಲ ಒಂದರಲ್ಲಿ ಕೆಲಸ ಮಾಡುತ್ತಿರುವ ಇಬ್ಬರು ಯುವಕರು ಗುರುವಾರ ಸಿಡಿಲು ಬಡಿದು ಮೃತ ಪಟ್ಟಿದ್ದಾರೆ. ಮೃತರು ನಾವದಗಿ ಗ್ರಾಮದ ರೇವಣಸಿದ್ದ ಹನಮಂತ (28) ಮತ್ತು ಜರ್ಗಿಯ ಯಲ್ಲಾಲಿಂಗ (28). ಮೃತ ಯುವಕರು, ಇಬ್ಬರು ಯುವಕರು ಗುರುವಾರ ಹೊಲದಲ್ಲಿ ಕೆಲಸ ಮಾಡುತ್ತಿರುವ ಸಂದರ್ಭದಲ್ಲಿ ಮಳೆ ಬೀಳುತ್ತಿದೆ ಎಂದು ಹೊಲದಲ್ಲಿರುವ ಮಾವಿನ ಗಿಡದ ಕೆಳಗೆ ಕುಳಿತಿದ್ದರು. ಈ ಸಂದರ್ಭದಲ್ಲಿ ಜೋರಾಗಿ ಸಿಡಿಲು ಬಡಿದು ಇಬ್ಬರೂ ಸ್ಥಳದಲ್ಲಿಯೇ ಮೃತಪಟ್ಟಿದ್ದಾರೆ.ಈ ಕುರಿತು ಖಟಕ ಚಿಂಚೋಳಿ ಪೊಲೀಸರು ಸ್ಥಳಕ್ಕೆ ಭೇಟಿನೀಡಿ ಪರಿಶೀಲಿಸಿದ್ದಾರೆ.

# ಪ್ರತಿಭಾವಂತ ವಿದ್ಯಾರ್ಥಿನಿಗೆ ಸನ್ಮಾನಿಸಿದ ಶಿಕ್ಷಣ ಇಲಾಖೆ




• ಮಲ್ಲಮ್ಮ ನುಡಿ ವಾರ್ತೆ, ಭಾಲ್ಕಿ

ತಾಲೂಕಿನ ಶಿಕ್ಷಣ ಇಲಾಖೆಯ ಪತ್ರಾಂಕಿತ ವ್ಯವಸ್ಥಾಪಕರಾದ ಶಿವಕುಮಾರ್ ಪೂಲಾರಿ ಹಾಗೂ ಬಿಸಿ ಊಟ ಅಧಿಕಾರಿಗಳಾದ ಮಲ್ಲಿನಾಥ್ ಸಜ್ಜನ್, ಕ್ಷೇತ್ರ ಶಿಕ್ಷಣಾಧಿಕಾರಿ ಕಚೇರಿಯ ನಮ್ಮ ಸಿಬ್ಬಂದಿ ಅಹಲ್ಯಾ ದತ್ತಾತ್ರಿ ಕಾಟ್ಟರ್ ಅವರು 10ನೇ ತರಗತಿಯಲ್ಲಿ ಉತ್ತಮ ಸಾಧನೆ ಗೈದ ಪ್ರಯುಕ್ತ ಸನ್ಮಾನಿಸಿ, ಮುಂದಿನ ಶಿಕ್ಷಣಕ್ಕಾಗಿ ಶುಭ ಕೋರಿದರು. ಈ ಸಂದರ್ಭದಲ್ಲಿ ಕುಟುಂಬಸ್ಥರು ಉಪಸ್ಥಿತರಿದ್ದರು.

### ಫ್ರಂಟ್‌ಲೈನ್ ಶಾಲೆಯಲ್ಲಿ ಸಾಧನಾ ಸಮಾರಂಭ

# ಎಸ್‌ಎಸ್‌ಎಲ್‌ಸಿಯಲ್ಲಿ ಸಾಧನೆಗೈದ ವಿದ್ಯಾರ್ಥಿಗಳಿಗೆ ಸನ್ಮಾನ



• ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್

ಪಟ್ಟಣದ ಜಿ. ಶ್ರೀನಿವಾಸರೆಡ್ಡಿ ಮೆಮೋರಿಯಲ್ (ಫ್ರಂಟ್‌ಲೈನ್) ಶಾಲೆಯ ವಿದ್ಯಾರ್ಥಿಗಳು ಈ ಬಾರಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಅತ್ಯುತ್ತಮ ಫಲಿತಾಂಶ ಸಾಧಿಸಿ ಜಿಲ್ಲೆಯ ಹಾಗೂ ರಾಜ್ಯದ ಗಮನ ಸೆಳೆದ ಹಿನ್ನೆಲೆಯಲ್ಲಿ ಶುಕ್ರವಾರ ಶಾಲೆಯಲ್ಲಿ ಭವ್ಯವಾದ ಸಾಧನಾ ಸಮಾವೇಶವನ್ನು ಆಯೋಜಿಸಲಾಯಿತು.

ಕಾರ್ಯಕ್ರಮದಲ್ಲಿ ಉತ್ತಮ ಅಂಕಗಳೊಂದಿಗೆ ಉತ್ತೀರ್ಣರಾದ ವಿದ್ಯಾರ್ಥಿಗಳನ್ನು ಶಾಲೆಯ ಆಡಳಿತ ಮಂಡಳಿಯವರು ಸನ್ಮಾನಿಸಿ ಗೌರವಿಸಿದರು. ವಿಶೇಷವಾಗಿ ಕುಮಾರಿ ಪ್ರೇರಣಾ ಅವರು 99.52% ಅಂಕಗಳೊಂದಿಗೆ ಯಾದಗಿರಿ ಜಿಲ್ಲೆಗೆ ಪ್ರಥಮ ಸ್ಥಾನ ಹಾಗೂ ರಾಜ್ಯಕ್ಕೆ ನಾಲ್ಕನೇ ಸ್ಥಾನ ಪಡೆದು ಶಾಲೆ ಮತ್ತು ಜಿಲ್ಲೆಗೆ ಕೀರ್ತಿ ತಂದಿದ್ದಾರೆ. ಇವರ ಮುಂದಿನ ವಿದ್ಯಾಭ್ಯಾಸಕ್ಕೆ ಉತ್ತೇಜನ ನೀಡುವ ಉದ್ದೇಶದಿಂದ ಶಾಲೆಯ ವತಿಯಿಂದ 50,000 ಪಾರಿತೋಷಿಕ ನೀಡಿ ಸನ್ಮಾನಿಸಲಾಯಿತು.ಇದೇ ಸಂದರ್ಭದಲ್ಲಿ ಪ್ರಜ್ವಲ್ (97.44%), ವಿಷ್ಣು (96.8%), ಭುವನಾ (95.82%), ಶುಭಶ್ರೀ (95.52%), ಟಿ. ನಂದಿತಾ (95.36%), ಅಕ್ಷರ (95.04%) ಹಾಗೂ ಅಲ್ಕಿಯಾಸ್ (95.04%) ಸೇರಿದಂತೆ ಅನೇಕ ವಿದ್ಯಾರ್ಥಿಗಳಿಗೆ ಸನ್ಮಾನಿಸಲಾಯಿತು. ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಶಿಕ್ಷಣ ಸಂಯೋಜಕರಾದ ರವೀಂದ್ರ ಚೌಹಣ್, ಸಮೂಹ ಸಂಪನ್ಮೂಲ ವ್ಯಕ್ತಿ ಬಾಲಪ್ಪ ಸಿರಿಗೆಂ ಭಾಗವಹಿಸಿ ವಿದ್ಯಾರ್ಥಿಗಳಿಗೆ ಶುಭಾಶಯ ಕೋರಿದರು. ಶಾಲೆಯ ಅಧ್ಯಕ್ಷರಾದ ರವೀಂದ್ರ ರೆಡ್ಡಿ ಪಾಟೀಲ ಹಾಗೂ ಅವರ ಧರ್ಮಪತ್ನಿ ಮಂಜುಳಾ ರೆಡ್ಡಿ, ಶಾಲೆಯ ವ್ಯವಸ್ಥಾಪಕರಾದ ಅಖಿಲೇಶ್ ರೆಡ್ಡಿ ಮತ್ತು ಅವರ ಧರ್ಮಪತ್ನಿ ಸೇರಿದಂತೆ ಶಾಲಾ ಮುಖ್ಯೋಪಾಧ್ಯಾಯರಾದ ಶ್ರೀಮತಿ ವಿಜಯಾ, ಬೋಧಕ ವೃಂದ ಹಾಗೂ ಪೋಷಕರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಮಾತನಾಡಿದ ಶಾಲೆಯ ವ್ಯವಸ್ಥಾಪಕರಾದ ಅಖಿಲೇಶ್ ರೆಡ್ಡಿ ಅವರು, "ನಮ್ಮ ಶಾಲೆಯ ವಿದ್ಯಾರ್ಥಿಗಳು ತೋರಿದ ಈ ಸಾಧನೆ ನಮ್ಮೆಲ್ಲರಿಗೂ ಹೆಮ್ಮೆಯ ಸಂಗತಿ. ವಿದ್ಯಾರ್ಥಿಗಳ ಪರಿಶ್ರಮ, ಶಿಕ್ಷಕರ ಮಾರ್ಗದರ್ಶನ ಹಾಗೂ ಪೋಷಕರ ಸಹಕಾರದಿಂದ ಈ ಸಾಧನೆ ಸಾಧ್ಯವಾಗಿದೆ. ಮುಂದಿನ ದಿನಗಳಲ್ಲಿಯೂ ಇನ್ನಷ್ಟು ಉತ್ತಮ ಫಲಿತಾಂಶಗಳನ್ನು ತರುವ ವಿಶ್ವಾಸ ನಮ್ಮಲ್ಲಿದೆ," ಎಂದು ಹೇಳಿದರು.

ಜಿಲ್ಲೆಯ ಒಟ್ಟು ಫಲಿತಾಂಶ ಹಾಗೂ ಗುರುಮಠಕಲ್ ತಾಲೂಕಿನ ವಿದ್ಯಾರ್ಥಿಗಳ ಸಾಧನೆ ಶಿಕ್ಷಣ ಕ್ಷೇತ್ರದಲ್ಲಿ ಹೊಸ ಭರವಸೆಯನ್ನು ಮೂಡಿಸಿದ್ದು, ಫ್ರಂಟ್‌ಲೈನ್ ಶಾಲೆಯ ಈ ಯಶಸ್ಸು ಇತರ ಶಾಲೆಗಳಿಗೆ ಮಾದರಿಯಾಗಿದೆ.

# ಸ್ವಯಂಚಾಲಿತ ಪ್ರಶ್ನೆ ಪತ್ರಿಕೆ ರಚನಾ ವ್ಯವಸ್ಥೆ ಕುಲಾಧಿಪತಿ ಅವರಿಂದ ಚಾಲನೆ




• ಮಲ್ಲಮ್ಮ ನುಡಿ ವಾರ್ತೆ, ಕಲಬುರಗಿ

ಖಾಜಾ ಬಂದಾನವಾಜ ವಿಶ್ವವಿದ್ಯಾಲಯದ ಕುಲಾಧಿಪತಿ ಜನಾಬ ಡಾ. ಸಯ್ಯದ್ ಮುಹಮ್ಮದ ಅಲಿ ಅಲ್-ಹುಸೈನಿ ಸಾಹೇಬರು ಈ ಪರೀಕ್ಷೆ ವಿಭಾಗದ ಅತ್ಯಾಧುನಿಕ ಕಟ್ಟಡವನ್ನು ಅಧಿಕೃತವಾಗಿ ಉದ್ಘಾಟಿಸಿದರು.

ಉದ್ಘಾಟನಾ ಸಮಾರಂಭದಲ್ಲಿ ನಿರ್ದೇಶಕರಾದ ಡಾ. ಸಯ್ಯದ್ ಮುಸ್ತಫಾ ಅಲ್-ಹುಸೈನಿ, ಕುಲಪತಿಗಳಾದ ಪ್ರೊ. ಅಲಿ ರಝಾ ಮೂಸವಿ, ಪ್ರೋ-ಕುಲಪತಿಗಳಾದ ಪ್ರೊ. ಅಶ್ಫಾಕ್ ಅಹ್ಮದ್, ರಿಜಿಸ್ಟ್ರಾರ್ ಶ್ರೀ ಮಿರ್ ವಿಲಾಯತ್ ಅಲಿ ಸೇರಿದಂತೆ ವಿವಿಧ ವಿಭಾಗಗಳ ಡೀನ್‌ಗಳು ಮತ್ತು ಹಿರಿಯ ಶೈಕ್ಷಣಿಕ ಅಧಿಕಾರಿಗಳು ಉಪಸ್ಥಿತರಿದ್ದರು.ಈ ಕಾರ್ಯಕ್ರಮವನ್ನು ಪರೀಕ್ಷಾ ನಿಯಂತ್ರಕರೂ ಹಾಗೂ IQAC ನಿರ್ದೇಶಕರೂ ಆಗಿರುವ ಡಾ. ಎಂ. ಎ. ಬಸೀರ್ ಅವರ ನೇತೃತ್ವದಲ್ಲಿ ಆಯೋಜಿಸಲಾಗಿದ್ದು, ಸಹಾಯಕ ಪರೀಕ್ಷಾ ನಿಯಂತ್ರಕ (ACOE) ಡಾ. ಅಮ್ರೀನ್ ಸಬಾ ಹಾಗೂ ವಿಶೇಷ ಕರ್ತವ್ಯಾಧಿಕಾರಿಗಳಾದ (OSDs) ಡಾ. ಎಂ. ಎ. ಮುಜೀಬ್ ಮತ್ತು ಶ್ರೀ ಜಮೀರ್ ಅವರ ಸಂಯೋಜನೆಯಲ್ಲಿ ನೆರವೇರಿತು.

ಹೊಸದಾಗಿ ಸ್ಥಾಪಿತವಾದ ಈ ಸೌಲಭ್ಯದಲ್ಲಿ ಡಿಜಿಟಲ್ ಮೌಲ್ಯಮಾಪನ ವ್ಯವಸ್ಥೆ ಹಾಗೂ ಭಾರತದ ಮೊದಲ ಸಾಫ್ಟ್‌ವೇರ್ ಆಧಾರಿತ ಸ್ವಯಂಚಾಲಿತ ಪ್ರಶ್ನೆಪತ್ರಿಕೆ ರಚನಾ ವ್ಯವಸ್ಥೆಯನ್ನು ಪರಿಚಯಿಸಲಾಗಿದೆ. ಇದು ಶೈಕ್ಷಣಿಕ ನಿಷ್ಠೆ, ಗೌಪ್ಯತೆ ಹಾಗೂ ಪರೀಕ್ಷಾ ಭದ್ರತೆಯನ್ನು ಮತ್ತಷ್ಟು ಬಲಪಡಿಸುವ ದಿಸೆಯಲ್ಲಿ ಮಹತ್ವದ ಹೆಜ್ಜೆಯಾಗಿದೆ.

ವಿಶ್ವವಿದ್ಯಾಲಯದ ಅಧಿಕಾರಿಗಳು ಈ ಅಭಿವೃದ್ಧಿಯನ್ನು ಪರೀಕ್ಷಾ ಆಡಳಿತ ಮತ್ತು ಸಂಸ್ಥೆಯ ಸುಶಾಸನದಲ್ಲಿ ಹೊಸ ಮಾನದಂಡಗಳನ್ನು ಸ್ಥಾಪಿಸುವ ಪರಿವರ್ತನಾ ಉಪಕ್ರಮವೆಂದು ವಿವರಿಸಿದ್ದಾರೆ.

# ಜನ್ಮದಿನ ಪ್ರಯುಕ್ತ ನೂತನ ರಕ್ತ ಕೇಂದ್ರ ಉದ್ಘಾಟನೆ

• ಮಲ್ಲಮ್ಮ ನುಡಿ ವಾರ್ತೆ, ಹುಣಸೂರು



ತಾಲೂಕಿನ ಬಿಳಿಕೆರೆ ಹೋಬಳಿ ಮನಗನಹಳ್ಳಿ ಪಂಚಾಯ್ ದೊಡ್ಡ ಗೌಡನಹಳ್ಳಿ ಫಾರೂಕ್ ಅಕಾಡೆಮಿ ಆಫ್ ಮೆಡಿಕಲ್ ಎಜುಕೇಶನ್ ಹಾಸ್ಪಿಟಲ್ ಅಂಡ್ ರಿಸರ್ಚ್ ಇನ್‌ಸ್ಟಿಟ್ಯೂಟ್ (FAME-H&RI), ಸಂಸ್ಥೆಯ ಅಧ್ಯಕ್ಷರ ಜನ್ಮದಿನದ ಅಂಗವಾಗಿ, ರಕ್ತ ಕೇಂದ್ರವನ್ನು ನೂತನ ಟೇಪ್ ಕತ್ತರಿಸುವ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿತು. ಫಾರೂಕ್ ಅಕಾಡೆಮಿ ಆಫ್ ಮೆಡಿಕಲ್ ಎಜುಕೇಶನ್ ಹಾಸ್ಪೆಲ್ ಅಂಡ್ ರಿಸರ್ಚ್ ಇನ್ಸಿಟ್ಯೂಟ್ ಸಂಸ್ಥೆಯ ಮಾಜಿ ವಿಧಾನ ಪರಿಷತ್ ಸದಸ್ಯರಾದ ಹಾಗೂ ಸಂಸ್ಥೆ ಅಧ್ಯಕ್ಷರು ಡಾ. ಬಾವಾ ಮೊಹಮ್ಮದ್ ಫಾರೂಖ್ ಟೇಪ್ ಕತ್ತರಿಸುವ ಮೂಲಕ ಉದ್ಘಾಟಿಸಿದ್ದಾರೆ

ನಂತರ ಕಾರ್ಯಕ್ರಮದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ ಈ ಕೇಂದ್ರವು ತುರ್ತು ವೈದ್ಯಕೀಯ ಸೇವೆಗಳಿಗೆ ಬೆಂಬಲ ನೀಡುವುದಲ್ಲದೆ, ಸುತ್ತಮುತ್ತಲಿನ ಸಮುದಾಯಗಳ ಆರೋಗ್ಯ ಅಗತ್ಯಗಳನ್ನು ಪೂರೈಸುವಲ್ಲಿ ಮಹತ್ವದ ಪಾತ್ರ ವಹಿಸುವ ನಿರೀಕ್ಷೆಯಿದೆ. ಎಂದು ತಿಳಿಸಿದರು

ಈ ಉಪಕ್ರಮವು ಫಾರೂಕ್ ಅಕಾಡೆಮಿಯ ಹಾಫ್ ಆಫ್ ಮೆಡಿಕಲ್ ಎಜುಕೇಶನ್ ಹಾಸ್ಪೆಲ್ ಅಂಡ್ ರಿಸರ್ಚ್ ಇನ್ಸಿಟ್ಯೂಟ್ ಸಂಸ್ಥೆ ಆರೋಗ್ಯ ಸೇವೆಗಳನ್ನು ಬಲಪಡಿಸುವ ಮಹತ್ವದ ಮೈಲಿಗಲ್ಲಾಗಿದ್ದು, ಅಗತ್ಯವಿರುವ ರೋಗಿಗಳಿಗೆ ಸುರಕ್ಷಿತ ಮತ್ತು ಗುಣಮಟ್ಟದ ರಕ್ತದ ಸಮಯೋಚಿತ ಲಭ್ಯತೆಯನ್ನು ಖಚಿತಪಡಿಸುತ್ತದೆ. ಹಾಗೂ ಈ ರಕ್ತಕೇಂದ್ರದ ಸ್ಥಾಪನೆಯು ಹುಣಸೂರು, ಕೆ.ಆರ್. ನಗರ ಹಾಗೂ ಪಿರಿಯಾಪಟ್ಟಣದಂತಹ ಸಮೀಪದ ಪ್ರದೇಶಗಳಿಗೆ ಅತ್ಯಂತ ಪ್ರಯೋಜನಕಾರಿಯಾಗಲಿದೆ, ಏಕೆಂದರೆ ಅಲ್ಲಿ ರಕ್ತ ಕೇಂದ್ರ ಸೌಲಭ್ಯಗಳ ಲಭ್ಯತೆ ಸೀಮಿತವಾಗಿದೆ. ಎಂದು ತಿಳಿಸಿದರು

ಕಾರ್ಯಕ್ರಮದಲ್ಲಿ ಸಂಸ್ಥೆಯ ನಿರ್ದೇಶಕರಾದ ಬಿ. ಹೆಚ್. ರಿಜ್ವಾನ್, ಸಂಸ್ಥೆಯ ಡೀನ್ ಡಾ. ಕಿರಣ್ ಎಂ. ನಾಯಕ್, ರಕ್ತ ಕೇಂದ್ರಾಧಿಕಾರಿ ಡಾ. ಮಂಜುನಾಥ ಹಾಗೂ ಇತರ ಎಲ್ಲಾ ಸಂಸ್ಥೆಯ ಸಿಬ್ಬಂದಿಯ ಹಾಜರಿದ್ದರು

# ಸರಕಾರಿ ಪ್ರೌಢ ಶಾಲೆಯ ಎಸ್‌ಎಸ್‌ಎಲ್‌ಸಿಯಲ್ಲಿ ಶೇ. 100 ಫಲಿತಾಂಶ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಅಕ್ಷರ ಕಲಿಸುವ ಗುರುಗಳು ಮತ್ತು ಹರಸುವ ಪೋಷಕರ ಬೆಂಬಲವಿದ್ದರೆ ಸರಕಾರಿ ಶಾಲೆಯ ಮಕ್ಕಳು ಏನನ್ನೂ ಸಾಧಿಸಬಲ್ಲರು ಎಂಬುದಕ್ಕೆ ಬಳಿಚಕ್ರ ಗ್ರಾಮದ ಸರಕಾರಿ ಪ್ರೌಢಶಾಲೆಯೇ ಸಾಕ್ಷಿ. ಈ ಬಾರಿಯ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಈ ಶಾಲೆ ಶೇ. 100 ಕ್ಕೆ, ಶೇ. 100 ಫಲಿತಾಂಶ ಪಡೆದು ಜಿಲ್ಲೆಯ ಗಮನ ಸೆಳೆದಿದೆ. ಶಾಲೆಯ ಒಟ್ಟು 69 ವಿದ್ಯಾರ್ಥಿಗಳು ಹೆಚ್ಚು ಅಂಕ ಗಳಿಸಿ ವಿಶೇಷ ಶ್ರೇಣಿ'ಯಲ್ಲಿ ತೇರ್ಗಡೆಯಾಗಿದ್ದಾರೆ.

ತಾಲೂಕಿನ ಬಳಿಚಕ್ರ ಗ್ರಾಮದ ಸರ್ಕಾರಿ ಪ್ರೌಢಶಾಲಾ ಮಕ್ಕಳ ಎಸ್ ಎಸ್ ಎಲ್ ಸಿ ಫಲಿತಾಂಶ ಪಡೆದ ಮಕ್ಕಳ ವಿವರ: ಮಹೇಶ್ ಕುಮಾರ ತಂದೆ ತಾಯಪ್ಪ

593/625 94.88 ಶೇ. ಮಂಜುಳಾ ತಂದೆ ಮಾರ್ತಾಂಡಪ್ಪ 563 /625 89%, ಲಕ್ಷ್ಮಿ ತಂದೆ ವೆಂಕಟೇಶ್ 559/625. 89%, ಅಂಕಗಳು ಪಡೆದು ಉನ್ನತ ಶ್ರೇಣಿಯಲ್ಲಿ ಪಾಸಾಗಿದ್ದು, 32 ವಿದ್ಯಾರ್ಥಿಗಳು ಪ್ರಥಮ ಸ್ಥಾನದಲ್ಲಿ ಪಾಸ್ ಆಗಿದ್ದು, 17 ವಿದ್ಯಾರ್ಥಿಗಳು ದ್ವಿತೀಯ ಸ್ಥಾನ ಪಡೆದು ಮತ್ತು15 ವಿದ್ಯಾರ್ಥಿಗಳು ತೃತೀಯ ಸ್ಥಾನ ಪಡೆದು, ಒಟ್ಟು ಶಾಲೆಯ ಫಲಿತಾಂಶ ಶೇ.100 ಕ್ಕೆ, ಶೇ.100 ಪಡೆದು ಜಿಲ್ಲೆಗೆ ಉತ್ತಮ ಶಾಲೆಯಾಗಿ ಫಲಿತಾಂಶ ನೀಡಿದೆ. ಈ ಸಾಧನೆಗೆ ಖಆಒಆ ಅಧ್ಯಕ್ಷ ಸಿದ್ದರಾಮ್ ಬೋಯಿನ್, ಶಾಲೆಯ ಪ್ರಭಾರಿ ಮುಖ್ಯ ಗುರುಗಳು ಬನ್ನಪ್ಪ ಮೈಲಾಪುರ .ಶಿಕ್ಷಣ ಪ್ರೇಮಿ ತಾಯಪ್ಪ ಬೊಮ್ಮಣ್ಣೋರ್,ಮಶಪ್ಪ ತಾತಳಗೇರಾ.ಡಾ॥ ದೇವಿಂದ್ರಬೋಮ್ಮಣ, ಶಂಕರಗೌಡ ಪಾಟೀಲ ,ಮಾಜಿ ತಾಲೂಕು ಪಂಚಾಯತಿ ಸದಸ್ಯ ಹಣಮಂತ ಬೋಯಿನ್, ಶಾಲೆಯ ಶಿಕ್ಷಕರು ಮತ್ತು ಗ್ರಾಮದ ಹಿರಿಯರು ಹಾಗೂ ಶಿಕ್ಷಣ ಪ್ರೇಮಿಗಳು ಸಾಧಕ ಮಕ್ಕಳಿಗೆ ಶುಭಹಾರೈಸಿದ್ದಾರೆ..

# ಗ್ರಾಹಕರ ಜಾಗೃತಿಯಿಂದ ಮಾತ್ರ ಶೋಷಣೆ ಮುಕ್ತ ಸಮಾಜ ಸಾಧ್ಯ: ಮಾಲತಿ

• ಮಲ್ಲಮ್ಮ ನುಡಿ ವಾರ್ತೆ, ಕಲಬುರಗಿ



ಗ್ರಾಹಕರು ಕೇವಲ ವಸ್ತುಗಳನ್ನು ಖರೀದಿಸುವವರಾಗದೆ, ತಮ್ಮ ಹಕ್ಕುಗಳ ಬಗ್ಗೆ ಜಾಗೃತರಾದಾಗ ಮಾತ್ರ ಸಮಾಜದಲ್ಲಿ ಬದಲಾವಣೆ ಸಾಧ್ಯ. ಯಾವುದೇ ಅನ್ಯಾಯ ನಡೆದರೂ ಅದನ್ನು ಪ್ರಶ್ನಿಸುವ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ಕಲಬುರಗಿ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ (ಪ್ರಭಾರಿ) ಅಧ್ಯಕ್ಷರಾದ ಮಾಲತಿ ರೇಶ್ಮಿ ಹೇಳಿದರು.

ಶುಕ್ರವಾರ ನಗರದ ಹೊಸ ಐವಾನ-ಎ-ಶಾಹಿ ಅತಿಥಿ ಗೃಹದ ಸಭಾಂಗಣದಲ್ಲಿ ಆಯೋಜಿಸಿದ ಆಹಾರ ನಾಗರಿಕ

ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಕರ್ನಾಟಕ ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ ಕಲಬುರಗಿ ಪೀಠ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ ಕಲಬುರ್ಗಿ ಇವರ ಸಂಯುಕ್ತ ಆಶ್ರಯದಲ್ಲಿ "ಸುರಕ್ಷಿತ ಉತ್ಪನ್ನಗಳು ಆತ್ಮ ವಿಶ್ವಾಸದ ಗ್ರಾಹಕರು" ಧ್ಯೇಯ ಒಳಗೊಂಡ

ವಿಶ್ವ ಗ್ರಾಹಕರ ಹಕ್ಕುಗಳ ದಿನಾಚರಣೆ 2026 ಕಾರ್ಯಕ್ರಮವನ್ನು ಜ್ಯೋತಿ ಬೆಳಗಿಸುವುದರ ಮೂಲಕ ಉದ್ಘಾಟಿಸಿ ಮಾತನಾಡಿದರು.

ಇಂದಿನ ದಿನಗಳಲ್ಲಿ ಗ್ರಾಹಕರು ತಾವು ಬಳಸುವ ಆಹಾರ ಪದಾರ್ಥಗಳ ಗುಣಮಟ್ಟದ ಬಗ್ಗೆ ಹೆಚ್ಚಿನ ಎಚ್ಚರಿಕೆ ವಹಿಸುವುದು ಅತ್ಯಗತ್ಯ. ಮಾರುಕಟ್ಟೆಯಲ್ಲಿ ಸಿಗುವ ಕಲಬೆರಕೆ ಹಾಗೂ ಯೂರಿಯಾ ಮಿಶ್ರಿತ ಎಣ್ಣೆಯ ಬಳಕೆಯಿಂದ ಹೃದಯಾಘಾತದಂತಹ ಮಾರಕ ಕಾಯಿಲೆಗಳು ಹೆಚ್ಚುತ್ತಿವೆ. ಹೀಗಾಗಿ ಗ್ರಾಹಕರು ಅರಿವು ಬೆಳೆಸಿಕೊಂಡು ಶುದ್ಧ ಆಹಾರಕ್ಕೆ ಆದ್ಯತೆ ನೀಡಬೇಕು ಎಂದು ಕರೆ ನೀಡಿದರು.

ಆಹಾರದ ಸುರಕ್ಷತೆಯ ದೃಷ್ಟಿಯಿಂದ ಗ್ರಾಹಕರು ತಾವೇ ಸ್ವತಃ ಶುದ್ಧ ಎಣ್ಣೆಯನ್ನು ಮನೆಯಲ್ಲೇ ತಯಾರಿಸಿಕೊಳ್ಳಲು ಎಣ್ಣೆ ಉತ್ಪಾದನೆಗೆ ಸರ್ಕಾರದಿಂದ ಸಬ್ಸಿಡಿ ಸೌಲಭ್ಯ ದೋರೆಯುತ್ತಿದ್ದು, ಇಂತಹ ಅವಕಾಶಗಳನ್ನು ನೀಡುತ್ತಿದ್ದು, ಶೇಂಗಾ ಅಥವಾ ಕುಸುಬಿ ಬೀಜಗಳನ್ನು ಬಳಸಿ ಎಣ್ಣೆ ತೆಗೆಯುವ ಸಣ್ಣ ಘಟಕಗಳನ್ನು ಕೇವಲ 25 ರಿಂದ 30 ಸಾವಿರ ರೂಪಾಯಿಗಳ ಹೂಡಿಕೆಯಲ್ಲಿ (ಸರ್ಕಾರದ ಸಬ್ಸಿಡಿ ಕಳೆದು) ಸ್ಥಾಪಿಸಬಹುದು.ಸರ್ಕಾರದ ನೆರವಿನಿಂದ ಎಪಿಎಂಸಿ ಮೂಲಕ ಇಂತಹ ಯೋಜನೆಗಳ ಬಗ್ಗೆ ಮಾಹಿತಿ ಮತ್ತು ರಿಯಾಯಿತಿ ದೊರೆಯಲಿದ್ದು, ಸಣ್ಣ ಘಟಕಗಳ ಸ್ಥಾಪಪಿಸಿಕೊಂಡು ರೈತರು ಮತ್ತು ಸಾರ್ವಜನಿಕರು ಇದರ ಸದುಪಯೋಗ ಪಡೆಯಬೇಕು. 1986ರ ಹಳೆಯ ಕಾಯ್ದೆಗೆ ಹೋಲಿಸಿದರೆ 2019ರ ಹೊಸ ಕಾಯ್ದೆಯು ಗ್ರಾಹಕರಿಗೆ ಹೆಚ್ಚಿನ ಶಕ್ತಿ ನೀಡಿದೆ.

ಸಂಧಾನ ನ್ಯಾಯಾಲಯದ ಹೊರಗಡೆ ಗ್ರಾಹಕರು ಮತ್ತು ಕಂಪನಿಗಳು ಮಾತುಕತೆಯ ಮೂಲಕ ವಿವಾದಗಳನ್ನು ಇತ್ಯರ್ಥಪಡಿಸಿಕೊಳ್ಳಲು ಇದರಲ್ಲಿ ಅವಕಾಶವಿದೆ. ವಿಶೇಷವಾಗಿ ವಿಮೆ ಕಂಪನಿಗಳ ಜೊತೆಗಿನ ವಿವಾದಗಳು ಇಂದು ಸುಲಭವಾಗಿ ಬಗೆಹರಿಯುತ್ತಿವೆ. ಸರ್ಕಾರಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುವವರು ಸಹ ವೈದ್ಯಕೀಯ ನಿರ್ಲಕ್ಷ್ಯದ ವಿರುದ್ಧ ಗ್ರಾಹಕ ನ್ಯಾಯಾಲಯದ ಮೊರೆ ಹೋಗಬಹುದು ಸುಪ್ರೀಂ ಕೋರ್ಟ್ ತೀರ್ಪು ಸಹ ಬಂದಿದೆ. ಬಡವರಿಗಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ವತಿಯಿಂದ ಉಚಿತವಾಗಿ ವಕೀಲರ ನೆರವು ನೀಡಲಾಗುತ್ತದೆ.ಅನ್ಯಾಯಕ್ಕೊಳಗಾದವರು ಗೊಂದಲಕ್ಕೀಡಾಗದೆ ಪ್ರಾಧಿಕಾರವನ್ನು ಸಂಪರ್ಕಿಸಿ ನ್ಯಾಯ ಪಡೆಯಬಹುದು ಉಚಿತ ವಕೀಲರ ಸೌಲಭ್ಯ ಸಹ ದೊರೆಯಲಿದೆ ಎಂದರು.

ಕಾರ್ಯಕ್ರಮದ ಉಪನ್ಯಾಸಕರಾಗಿ ಆಗಮಿಸಿದ ಮಹಾತ್ಮಗಾಂಧಿಜೀ ಗ್ರಾಹಕರ ಹಿತರಕ್ಷಣಾ ವೇದಿಕೆಯ ಕಾರ್ಯದರ್ಶಿಗಳು, ವಕೀಲರು ಹಾಗೂ ಕಲಬುರಗಿ ಜಿಲ್ಲಾ ಗ್ರಾಹಕರ ರಕ್ಷಣಾ ಪರಿಷತ್ತಿನ ಸದಸ್ಯರಾದ ವೈಜನಾಥ ಝಳಕಿ "ಸುರಕ್ಷಿತ ಉತ್ಪನ್ನಗಳು, ಆತ್ಮವಿಶ್ವಾಸದ ಗ್ರಾಹಕರು" ಎಂಬ ಧ್ಯೇಯವಾಕ್ಯದಡಿ ಮಾತನಾಡಿ, ಸಂವಿಧಾನ ನಮಗೆ ನೀಡಿರುವ ಹಕ್ಕು ಮತ್ತು ಕರ್ತವ್ಯಗಳ ಬಗ್ಗೆ ಅರಿವಿರಲಿ. ಸಣ್ಣ ಅನ್ಯಾಯಗಳನ್ನೂ ಸಹಿಸಬೇಡಿ ನಮ್ಮ ಹಕ್ಕನ್ನು ನಾವು ಹೆಮ್ಮೆಯಿಂದ ಚಲಾಯಿಸೋಣ. ಒಬ್ಬ ಜಾಗೃತ ಗ್ರಾಹಕ ಇಡುವ ಮೊದಲ ಹೆಜ್ಜೆ ಇಡೀ ಸಮಾಜಕ್ಕೆ ದಾರಿದೀಪವಾಗುತ್ತದೆ ಎಂದು ಅವರು ಹೇಳಿದರು.

ಕಲ್ಯಾಣ ಕರ್ನಾಟಕದ ಏಳು ಜಿಲ್ಲೆಗಳಿಗೆ ಕೇಂದ್ರಸ್ಥಾನವಾಗಿರುವ ಕಲಬುರಗಿಯಲ್ಲಿ ಕೇವಲ ಒಂದು ಸರ್ಕಾರಿ ಆಹಾರ ಸುರಕ್ಷತಾ ಪ್ರಯೋಗಾಲಯ ಮಂಜೂರಾಗಿದೆ. ಆದರೆ, ಈ ಲ್ಯಾಬ್ ಪ್ರಸ್ತುತ ಬಸ್ ನಿಲ್ದಾಣದ ಬಳಿಯಿರುವ ಸಣ್ಣ ಪತ್ರಾಶೆಡ್‌ನಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಕಲ್ಯಾಣ ಕರ್ನಾಟಕ ಭಾಗದಲ್ಲಿ ಆಹಾರ ಸುರಕ್ಷತೆ-ಯ ಸ್ಥಿತಿ ಶೋಚನೀಯವಾಗಿದೆ. ಗ್ರಾಹಕರು ತಮ್ಮ ಹಕ್ಕುಗಳ ಬಗ್ಗೆ ಜಾಗೃತರಾಗದಿದ್ದರೆ ಆರೋಗ್ಯ ಮತ್ತು ಆರ್ಥಿಕ ಸಂಕಷ್ಟ ತಪ್ಪಿದ್ದಲ್ಲ ಎಂದು ಕಳವಳ ವ್ಯಕ್ತಪಡಿಸಿದರು. ಹಾಗೂ ಸರ್ಕಾರ ಕೂಡಲೇ ಕಲಬುರಗಿಯಲ್ಲಿ ಸುಸಜ್ಜಿತ ಆಹಾರ ಪರೀಕ್ಷಾ ಪ್ರಯೋಗಾಲಯ ಸ್ಥಾಪಿಸಿ, ದಕ್ಷ ಅಧಿಕಾರಿಗಳನ್ನು ನೇಮಿಸಬೇಕೆಂದು ಸಮಸ್ತ ನಾಗರಿಕರ ಪರವಾಗಿ ಮನವಿ ಮಾಡಿದರು.

# ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ನೇರ ಸಂದರ್ಶನ

• ಮಲ್ಲಮ್ಮ ನುಡಿ ವಾರ್ತೆ, ರಾಯಚೂರು

ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ವತಿಯಿಂದ ರಾಯಚೂರಿನ ಎಲ್.ವಿ.ಡಿ ಕಾಲೇಜಿನಲ್ಲಿ ಏಪ್ರಿಲ್ 30ರ ಬೆಳಗ್ಗೆ 10ಗಂಟೆಯಿಂದ ಸಂಜೆ 4ಗಂಟೆವರೆಗೆ ನೇರ ಸಂದರ್ಶನ ಆಯೋಜಿಸಲಾಗಿದ್ದು, ಆಸಕ್ತ ಅಭ್ಯರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗಿಯಾಗುವಂತೆ ಕೋರಲಾಗಿದೆ.ನೇರ ಸಂದರ್ಶನದಲ್ಲಿ ಖಾಸಗಿ ಕಂಪನಿಗಳು ಭಾಗವಹಿಸಿ ತಮ್ಮಲ್ಲಿ ಖಾಲಿ ಇರುವ ಹುದ್ದೆಗಳನ್ನು ನೇರವಾಗಿ ಭರ್ತಿ ಮಾಡಿಕೊಳ್ಳಲಿದ್ದಾರೆ.ಅರ್ಹತೆಗಳು: ಎಸ್.ಎಸ್.ಎಲ್.ಸಿ, ಪಿ.ಯು.ಸಿ ಹಾಗೂ ಎಲ್ಲಾ ಪದವೀಧರ ಆಸಕ್ತ 18 ರಿಂದ 30 ವರ್ಷಗಳ ವರೆಗಿನ ಅಭ್ಯರ್ಥಿಗಳು ಈ ಮೇಳದಲ್ಲಿ ಭಾಗವಹಿಸಬಹುದಾಗಿದೆ.

ವಿದ್ಯಾರ್ಹತೆಯ ಅಂಕಪಟ್ಟಿಗಳ ಜೆರಾಕ್ಸ್ ಪ್ರತಿಗಳು ಮತ್ತು ತಮ್ಮ ಬಯೋಡೆಟಾ, ಆಧಾರ್ ಕಾರ್ಡ್ ಪ್ರತಿ, ಭಾವಚಿತ್ರಗನ್ನು ಸಲ್ಲಿಸಬೇಕು. ನೇರ ಸಂದರ್ಶನದಲ್ಲಿ ಭಾಗವಹಿಸಲು ಯಾವುದೇ ಶುಲ್ಕವಿರುವುದಿಲ್ಲ, ಬದಲಾಗಿ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗಬಹುದು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಬಾಲಾಜಿ ಕಾಂಪ್ಲೆಕ್ಸ್, ನೆಲ ಮಹಡಿ, ಗೂಡ್ ಶೆಡ್ ರಸ್ತೆ, ಸ್ಟೇಷನ್ ಏರಿಯಾ, ರಾಯಚೂರು ಹಾಗೂ ದೂರವಾಣಿ ಸಂಖ್ಯೆ 08532-231684, 9916931616, 9008211750ಗೆ ಕಚೇರಿ ಸಮಯದಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿ ನವೀನ ಕುಮಾರ್ ಸಂಗೇಪಾಗ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪಂಚಾಯತ್ ರಾಜ್ ದಿನಾಚರಣೆ

• ಮಲ್ಲಮ್ಮ ನುಡಿ ವಾರ್ತೆ ಕಾರವಾರ

ಗ್ರಾಮ ಪಂಚಾಯತ್ ಮಟ್ಟದಲ್ಲಿ ತೆರಿಗೆ ವಸೂಲಾತಿ, ಮಹಾತ್ಮ ಗಾಂಧಿ ನರೇಗಾ ಯೋಜನೆ, ಎಸ್.ಬಿ.ಎಮ್., ವಸತಿ ಹಾಗೂ ಎನ್.ಆರ್.ಎಲ್.ಎಮ್ ಸೇರಿದಂತೆ ಎಲ್ಲ ಯೋಜನೆಗಳ ಪರಿಣಾಮಕಾರಿ ಅನುಷ್ಠಾನದಲ್ಲಿ ಪಂಚಾಯತ್ ರಾಜ್ ಕುಟುಂಬದ ಪರಿಶ್ರಮ ಅಭಿನಂದನಾರ್ಹ ಎಂದು ತಾಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿ ರಾಜೇಶ್ ಧನವಾಡಕರ್ ಹೇಳಿದರು.

ಅವರು ಶುಕ್ರವಾರ ಯಲ್ಲಾಪುರ ತಾಲೂಕು ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾ ಪಂಚಾಯತ್, ತಾಲೂಕು ಪಂಚಾಯತ್ ಹಾಗೂ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘ, ಯಲ್ಲಾಪುರ ತಾಲೂಕು ಘಟಕದ ಸಂಯುಕ್ತ ಆಶ್ರಯದಲ್ಲಿ ನಡೆದ ರಾಷ್ಟ್ರೀಯ ಪಂಚಾಯತ್ ರಾಜ್ ದಿನಾಚರಣೆಯ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದರು.

## ರಾಜಕುಮಾರ್ ಅವರ 97ನೇ ಜಯಂತೋತ್ಸವ

# ರಾಜಕುಮಾರ್ ಅವರ ಸರಳತೆ ಜೀವನದಲ್ಲಿ ಅಳವಡಿಸಿಕೊಳ್ಳಿ: ವರ್ಮಾ



• ಮಲ್ಲಮ್ಮ ನುಡಿ ವಾರ್ತೆ, ರಾಯಚೂರು

ವರನಟ ಡಾ.ರಾಜಕುಮಾರ್ ಅವರು ಕರ್ನಾಟಕ ಮಾತ್ರವಲ್ಲದೇ ಇಡೀ ದೇಶದ ಹೆಮ್ಮೆಯಾಗಿದ್ದರು. ಅವರ ನಿಷ್ಠೆ, ಪ್ರಾಮಾಣಿಕತೆ, ಸರಳತೆಯನ್ನು ನಮ್ಮ ನಿತ್ಯಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ರಾಯಚೂರು ತಹಶಿಲ್ದಾರ್ ಸುರೇಶ ವರ್ಮ ಅವರು ಹೇಳಿದರು.

ಏಪ್ರಿಲ್ 24ರ ಶುಕ್ರವಾರ ದಂದು ನಗರದ ಕನ್ನಡ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ವರನಟ ಡಾ.ರಾಜಕುಮಾರ್ ಅವರ 97ನೇ ಜನ್ಮ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಡಾ. ರಾಜಕುಮಾರ್ ಅವರು ಕೇವಲ ಒಬ್ಬ ನಟ ಅಲ್ಲ. ಅವರು ಆದರ್ಶ ವ್ಯಕ್ತಿ ಯಾಗಿ ಕಾಣುತ್ತಾರೆ. ಗೋಕಾಕ ಚಳುವಳಿ ಮುಖಾಂತರ ಕನ್ನಡ ನಾಡಿಗೆ ಅವರು ಕೊಟ್ಟಂತಹ ಕೊಡುಗೆ ದೊಡ್ಡದು. ಮೇರು ನಟರಾಗಿದ್ದಾರೆ. ಅವರು, ಸಾಮಾಜಿಕ ಸಮಸ್ಯೆಗಳ ನಿವಾರಣೆಯ ಕಥಾಹಂದರದ ಹಲವಾರು ಚಲನಚಿತ್ರಗಳನ್ನು ನಮಗೆ ನೀಡಿದ್ದಾರೆ.

ಕನ್ನಡ ಅಭಿಮಾನವನ್ನು ತೋರಿದ್ದಾರೆ. ಅವರಂತೆ ನಾವೆಲ್ಲರೂ ನಾಡು–ನುಡಿಯ ಬಗ್ಗೆ ಅಭಿಮಾನವನ್ನು ಹೊಂದಬೇಕು. ಅವರ ಜೀವನದ ಸಾಮಾಜಿಕ ಕಾಳಜಿಯನ್ನು ಅರಿಯಬೇಕು. ಅಲ್ಲದೆ ಅವರ ಮಗನಾದ ಡಾ.ಪುನೀತ್ ರಾಜ್ ಕುಮಾರ್ ಅವರು ಸಹ ನಟನೆ ಸೇರಿದಂತೆ ಆನೇಕ ಸಾಮಾಜಿಕ ಕಾರ್ಯಗಳನ್ನು ಮಾಡಿದ್ದಾರೆ ಎಂದರು. ವರನಟ ಡಾ.ರಾಜಕುಮಾರ್ ಅವರು ಸಾಮಾಜಿಕ ಸಂದೇಶ ಸಾರುವಂತಹ ಚಿತ್ರಗಳಲ್ಲಿ ನಟಿಸುವ ಮೂಲಕ ದಾದಾ ಸಾಹೇಬ್ ಫಾಲ್ಕೆಯಂತಹ ದೇಶದ ಅತ್ಯುನ್ನತ ಅನೇಕ ಪ್ರಶಸ್ತಿಯನ್ನು ಪಡೆದುಕೊಂಡು ಕನ್ನಡಿಗರ ಮನೆ ಮಾತಾಗಿದ್ದಾರೆ. ಕನ್ನಡ ನಾಡು – ನುಡಿಯ ಅಸ್ಮಿತೆಯಾಗಿರುವ ಡಾ.ರಾಜಕುಮಾರ್ ಅವರು, ತಮ್ಮ ಚಲನಚಿತ್ರಗಳ ಮೂಲಕ ಸಮಾಜ ಸುಧಾರಣೆಗೆ ಅಪಾರ ಕೊಡುಗೆಯನ್ನು ನೀಡಿದ್ದಾರೆ ಎಂದರು.

# ಅಧಿಕಾರಿ ಮೇಲೆ ಹಲ್ಲೆ, ಕ್ರಮಕ್ಕೆ ಆಗ್ರಹ

• ಮಲ್ಲಮ್ಮ ನುಡಿವಾರ್ತೆ, ಸಿಂಧನೂರು



ರಾಯಚೂರು ಜಿಲ್ಲೆಯ ಸಿಂಧನೂರು ತಾಲ್ಲೂಕಿನ ಕಂದಾಯ ಇಲಾಖೆಯ ನೌಕರರಾದ ಹನುಮನಗೌಡ ಗ್ರಾಮ ಆಡಳಿತ ಅಧಿಕಾರಿ ಗೊಣ್ಣಿಗನೂರು ಇವರು, ದಿನಾಂಕ 23.04.2026 ರಂದು ಕರ್ತವ್ಯದ ಮೇಲೆ ರಾಯಚೂರು ಜಿಲ್ಲೆಯ ಸಿಂಧನೂರು ತಾಲ್ಲೂಕಿನ ಮಲದಿನ್ನಿ (ಡಿ) ಗ್ರಾಮಕ್ಕೆ ಜೋಳಬೆಳೆಯ ಮರು ಸಮೀಕ್ಷೆಗೆ ಸ್ಥಳ ಪರಿಶೀಲನೆ ಕಾರ್ಯಕ್ಕೆ ತೆರಳಿದ ಸಮಯದಲ್ಲಿ, ಅಲ್ಲಿನ ಯಮುನಪ್ಪ ತಾಯಿ ಕರಿಯಮ್ಮ ಸಾ॥ ಬೆಳಗುರ್ಕಿ ಎನ್ನುವ ವ್ಯಕ್ತಿಯು ತನ್ನ ಹೊಲದಲ್ಲಿ ಬೆಳೆದ ಬೆಳೆಗೆ ಪರಿಹಾರ ಬಾರದೇ ಇರುವುದಕ್ಕೆ, ನೀನು ನೀಡಿರುವ ವರದಿಯೇ ಕಾರಣವೆಂದು ಆರೋಪಿಸಿ, ಏಕಾಏಕಿ ಕರ್ತವ್ಯ ನಿರತರಾದ ಹನುಮನಗೌಡ ಗ್ರಾಮ ಆಡಳಿತ ಅಧಿಕಾರಿ ಗೊಣ್ಣಿಗನೂರು ಇವರಿಗೆ, ಮನಬಂದಂತೆ ಅವಾಚ್ಯ ಶಬ್ದಗಳಿಂದ ನಿಂದನೆ ಮಾಡಿ ಪಿಕಾಶಿಯಿಂದ ತಲೆಗೆ ಹೊಡೆದು ದೈಹಿಕ ಹಲ್ಲೆ ಮಾಡಿರುತ್ತಾನೆ. ಎಂದು ಆರೋಪಿಸಿ ರಾಜ್ಯ ಸರ್ಕಾರ ತಾಲೂಕು ನೌಕರರು ಸಂಘದ ವತಿಯಿಂದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ತಾಲೂಕು ತಹಶೀಲ್ದಾರ್ ಅರುಣ್ ಕುಮಾರ್ ಎಚ ದೇಸಾಯಿ ಅವರ ಮೂಲಕ ಮನವಿ ಪತ್ರ ಸಲ್ಲಿಸಿ ಪ್ರತಿಭಟನೆ ನಡೆಸಿದರು

ನಂತರ ಪ್ರತಿಭಟನೆ ಉದ್ದೇಶಿಸಿ ಮಾತನಾಡಿದ ತಾಲೂಕು ನೌಕರರು ಸಂಘದ ತಾಲೂಕು ಅಧ್ಯಕ್ಷ ಚಂದ್ರಶೇಖರ ಹಿರೇಮಠ ಅವರು ತಾಲೂಕಿನ ನೌಕರರಾದ ಹನುಮನಗೌಡ ಇವರ ಮೇಲೆ ಆದ ಹಲ್ಲೆ ಮತ್ತು ಸರ್ಕಾರಿ ಕೆಲಸಕ್ಕೆ ಅಡ್ಡಿಪಡಿಸಿ ಜೀವ ಬೆದರಿಕೆ ಹಾಕಿರುವುದನ್ನು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ತೀವ್ರವಾಗಿ ಖಂಡಿಸುತ್ತದೆ ಎಂದು ಹೇಳಿದರು

ತಪ್ಪಿತಸ್ಥರಾದ ಯಮುನಪ್ಪ ತಾಯಿ ಕರಿಯಮ್ಮ ಸಾ ಬೆಳಗುರ್ಕಿ ವಿರುದ್ಧ ಸೂಕ್ತ ಕಠಿಣ ಕಾನೂನು ಕ್ರಮ ಜರುಗಿಸಿ, ಮುಂದ ಇಂತಹ ಘಟನೆಗಳು ಮರುಕಳಿಸದಂತೆ ಹಾಗೂ ಸರ್ಕಾರಿ ನೌಕರರಿಗೆ ಮುಕ್ತವಾಗಿ ಸಾರ್ವಜನಿಕರಿಗೆ ಸರ್ಕಾರಿ ಸೇವೆ ಸಲ್ಲಿಸಲು ಸರ್ಕಾರ ಅಗತ್ಯ ಕಾನೂನನ್ನು ರೂಪಿಸಿ ನೌಕರರ ರಕ್ಷಣೆಗೆ ಸರ್ಕಾರ ದಿಟ್ಟ ನಿರ್ದಾರವನ್ನ ಕೈಗೊಳ್ಳುವ ಮೂಲಕ ರಾಜ್ಯದ ಸರ್ಕಾರಿ ನೌಕರರ ಮನೋಧೈರ್ಯವನ್ನು ಹೆಚ್ಚಿಸಲು ಈ ಮೂಲಕ ಸಮಸ್ತ ಸರ್ಕಾರಿ ನೌಕರರ ಪರವಾಗಿ ಸಂಘವು ಒತ್ತಾಯಿಸುತ್ತದೆ.

ಈ ಸಂದರ್ಭದಲ್ಲಿ. ಅನಂದ ಮೋಹನ್ ನೌಕರರ ಕಾರ್ಯದರ್ಶಿ. ವೀರನಗೌಡ ಖಜಾಂಚಿ.

ಸೈಫಿಸಿಯುಲ್ಲಾ ಖಾದ್ರಿ, ಪ್ರತಿಭಟನೆಯಲ್ಲಿ ಪಾಲ್ಗೊಂಡು ಎಲ್ಲರೂ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಎಸ್ಎಸ್ಎಲ್ಸಿ ಫಲಿತಾಂಶ: ಜಿಲ್ಲೆಗೆ ಪ್ರಥಮ ಅನುಷಾ ಸೋಮರಡ್ಡಿ

• ಮಲ್ಲಮ್ಮ ನುಡಿವಾರ್ತೆ, ಕೊಪ್ಪಳ



ಶೈಕ್ಷಣಿಕ ವರ್ಷ 2025 26ನೇ ಸಾಲಿನ ಎಸ್ ಎಸ್ ಎಲ್ ಸಿ ಪರೀಕ್ಷೆ ಫಲಿತಾಂಶ ಪ್ರಕಟಗೊಂಡಿದ್ದು ಅನುಷಾ ಸೋಮರೆಡ್ಡಿ 622 ಅಂಕಗಳನ್ನು ಪಡೆಯುವುದರೊಂದಿಗೆ ಜಿಲ್ಲೆಯಲ್ಲಿಯೇ ಪ್ರಥಮ ಸ್ಥಾನ ತನ್ನದಾಗಿಸಿಕೊಂಡಿರುತ್ತಾಳೆ.

ಜಿಲ್ಲೆಯ ಕುಕನೂರು ಎಸ್ ಎಫ್ ಎಸ್ ಪ್ರೌಢಶಾಲೆಯ ವಿದ್ಯಾರ್ಥಿನಿಯಾದ ಅನುಷಾ ಸೋಮರೆಡ್ಡಿ 625ಕ್ಕೆ 622 ಅಂಕಗಳನ್ನು ಪಡೆದು 99.52% ಪಡೆಯುವುದರೊಂದಿಗೆ ಪ್ರಥಮ ಸ್ಥಾನ ತನ್ನದಾಗಿರಿಸಿಕೊಂಡಿದ್ದಾಳೆ ಹಾಗೂ ಕನಕಗಿರಿಯ ಮುರಾರ್ಜಿ ದೇಸಾಯಿ ವಸತಿ ಶಾಲೆಯ ನಾಗರಾಜ 621 ಅಂಕ ಪಡೆದು 99.36 ಪ್ರತಿಶತ ಪಡೆದುಕೊಂಡರೆ ತೃತೀಯ ಸ್ಥಾನದಲ್ಲಿ ತಳಕಲ್ ಗ್ರಾಮದ ಬಾಲಕಿಯರ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿನಿ ಶ್ವೇತಾ 621 ಅಂಕ ಪಡೆದು 99.36 %ದೊಂದಿಗೆ ತೃತೀಯ ಸ್ಥಾನ ತನ್ನದಾಗಿಸಿಕೊಂಡಿದ್ದಾಳೆ. ಯಲಬುರ್ಗಾ ತಾಲೂಕಿನ ಹೊಸಳ್ಳಿ ಗ್ರಾಮದ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಯ ಶುಭ ಪ್ರಿಯ 620 ಅಂಕ ಪಡೆದು 99.20% ಯಾಗಿದ್ದರೆ, ಕುಷ್ಟಗಿ ತಾಲೂಕಿನ ಕಾಟಾಪುರದ ಮುರಾರ್ಜಿ ದೇಸಾಯಿ ವಸತಿ ಶಾಲೆಯ ಅಭಿ ಹನಕುಂಟಿ ಸಹ 620 ಅಂಕದೊಂದಿಗೆ 99.20% ಪಡೆದುಕೊಂಡು ಸಾಧನೆಗೈದಿರುತ್ತಾರೆ.

ಉತ್ತಮ ಸಾಧನೆಗೈದ ವಿದ್ಯಾರ್ಥಿನಿಯರಿಗೆ ಪಾಲಕರು, ಶಾಲಾ ಶಿಕ್ಷಕರು ಹಾಗೂ ಆಡಳಿತ ವರ್ಗದವರು ಅಭಿನಂದನೆ ವ್ಯಕ್ತಪಡಿಸಿರುತ್ತಾರೆ.

# ಭಗೀರಥ ಮಹರ್ಷಿಯ ಆದರ್ಶಗಳನ್ನು ಮೈಗೂಡಿಸಿಕೊಳ್ಳಿ: ಸಂಸದ ನಾಯಕ




• ಮಲ್ಲಮ್ಮ ನುಡಿವಾರ್ತೆ, ರಾಯಚೂರು

ಪ್ರಯತ್ನ ಹಾಗೂ ಸಾಧನೆಯ ದ್ಯೋತಕವಾದ ಭಗೀರಥ ಮಹರ್ಷಿಯ ಆದರ್ಶಗಳನ್ನು ಎಲ್ಲರೂ ಜೀವನದಲ್ಲಿ ಮೈಗೂಡಿಸಿಕೊಳ್ಳಬೇಕು ಎಂದು ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ್ ನಾಯಕ ಅವರು ಹೇಳಿದರು. ಏಪ್ರಿಲ್ 23ರ ಗುರುವಾರ ದಂದು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ಶ್ರೀ ಭಗೀರಥ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಭಗೀರಥರು ಪೌರಾಣಿಕ ಪುರುಷರು. ಸಮಾಜದಲ್ಲಿ ಇಂದಿಗೂ ಕಠಿಣ ಪರಿಶ್ರಮಕ್ಕೆ ಭಗೀರಥ ಯತ್ನ ಎಂದೇ ಉದಾಹರಣೆ ನೀಡಲಾಗುತ್ತದೆ. ಭಗೀರಥರು ಎಂದರೆ ಸಾಧನೆಯ ದ್ಯೋತಕವಾಗಿದ್ದು, ಸಾಕ್ಷತ್ ಗಂಗೆಯನ್ನು ಧರೆಗಿಳಿಸಿದ ಮಹಾಪುರುಷರು ಎಂದು ಬಣ್ಣಿಸಿದರು.

ಯಾವುದೇ ಕೆಲಸ ಮಾಡಬೇಕಾದರೆ ಏಕಾಗ್ರತೆಯಿಂದ ಮಾಡಬೇಕು. ಅದಕ್ಕೆ ಶ್ರೀ ಭಗೀರಥ ಮಜರ್ಷಿ ಉದಾಹರಣೆಯಾಗಿದ್ದಾರೆ. ಪೋಷಕರು ಮಕ್ಕಳಿಗೂ ಉತ್ತಮ ಶಿಕ್ಷಣವನ್ನು ನೀಡುವ ಮೂಲಕ ಸಮಾಜವನ್ನು ಬದಲಾವಣೆ ಮಾಡಬೇಕು. ಸರ್ಕಾರದ ವಿವಿಧ ಸೌಲಭ್ಯಗಳನ್ನು ಸರಿಯಾಗಿ ಬಳಕೆ ಮಾಡಿಕೊಳ್ಳಬೇಕು. ಸಮಾಜಕ್ಕೆ ಬೇಕಾಗುವ ನೆರವು ನೀಡಲಾಗುತ್ತದೆ ಎಂದರು. ಈ ವೇಳೆ ರಾಯಚೂರು ತಹಶಿಲ್ದಾರ್ ಸುರೇಶ ವರ್ಮ ಅವರು ಮಾತನಾಡಿ, ಶ್ರೀ ಭಗೀರಥ ಜಯಂತಿ ಕರ್ನಾಟಕದಲ್ಲಿ ಅತ್ಯಂತ ದೊಡ್ಡ ಪ್ರಮಾಣದಲ್ಲಿ ಜಯಂತಿ ರಾಯಚೂರಿನಲ್ಲಿ ಆಚರಣೆ ಮಾಡಲಾಗುತ್ತಿದೆ. ಭಾರತದ ಇತಿಹಾಸದಲ್ಲಿ ಬಹುಸಂಖ್ಯೆ ಜನ ಸಂಖ್ಯೆಕ್ಕಿಂತ ಕಡಿಮೆ ಜನ ಸಂಖ್ಯೆ ಇರುವವರು ಸಾಧನೆ ಮಾಡಿದ್ದಾರೆ. ಜಯಂತಿ ಕೇವಲ ಒಂದು ದಿನಕ್ಕೆ ಸೀಮಿತಗೊಳ್ಳದೆ. ವರ್ಷ ವಿಡೀ ಅವರ ತತ್ವ, ಆಚಾರ ವಿಚಾರಗಳನ್ನು ಅಳವಡಿಸಿಕೊಳ್ಳಬೇಕು ಎಂದರು.

ಈಶ್ವರಿ ವಿಶ್ವವಿದ್ಯಾಲಯದ ಜಿಲ್ಲಾ ಸಂಚಾಲಕರಾದ ಸ್ಮಿತ್ ಅಮ್ಮನವರು ಮಾತನಾಡಿ, ಜೀವನದಲ್ಲಿ ಏನನ್ನಾದರೂ ಸಾಧಿಸಲು ಮಹರ್ಷಿ ಭಗೀರಥರಂತಹ ಪ್ರಯತ್ನ ಅಗತ್ಯವಿದೆ. ಭಗೀರಥರು ತಪಸ್ಸು ಮಾಡಿ ಗಂಗೆಯನ್ನು ಭೂಮಿಗೆ ತಂದ ಮಹಾಪುರುಷ. ಅವರ ಸಾಧನೆ, ಜೀವನಗಾಥೆಯನ್ನು ಪ್ರತಿಯೊಬ್ಬರೂ ಅರಿತು ತಮ್ಮ ಜೀವನದಲ್ಲಿ ಅವರ ಛಲ ಆದರ್ಶಗಳನ್ನು ರೂಢಿಸಿಕೊಳ್ಳಬೇಕು. ರಾಯಚೂರು ನಗರವನ್ನು ಪ್ಲಾಸ್ಟಿಕ್ ಮುಕ್ತ ನಗರವಾಗಿ ಮಾಡಲು ಪ್ರತಿಯೊಬ್ಬರೂ ಶ್ರಮಿಸಬೇಕು ಎಂದರು. ಬಾಗಲಕೋಟೆಯ ಉಪನ್ಯಾಸಕರು ಹಾಗೂ ಯೋಗ ಶಿಕ್ಷಕರಾದ ರಾಘವೇಂದ್ರ ನೀಲನ್ನವರ ಅವರು ಶ್ರೀ ಭಗೀರಥ ಜಯಂತಿ ಕುರಿತು ವಿಶೇಷ ಉಪನ್ಯಾಸ ನೀಡಿದರು. ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನ: ಶ್ರೀ ಭಗೀರಥ ಜಯಂತಿ ಅಂಗವಾಗಿ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳಾದ ರೇಖಾ, ಕೃತಿಕಾ, ತ್ರಿವೇಣಿ, ಅಂಜಲಿ, ಶ್ರೀನಿವಾಸ್ ಹಾಗೂ ಪವಿತ್ರ ಎಂಬುವರಿಗೆ ವಿವಿಧ ಗಣ್ಯರಿಂದ ಸನ್ಮಾನಿಸಿ ಗೌರವಿಸಲಾಯಿತು. ವಿವಿಧ ಗಣ್ಯ–ರಿಂದ ಮಾಲಾರ್ಪಣೆ: ಶ್ರೀ ಭಗೀರಥ ಜಯಂತಿ ಅಂಗವಾಗಿ ನಗರದ ಶ್ರೀ ಲಕ್ಷ್ಮೀ ವೆಂಕಟೇಶ್ವರ ದೇವಸ್ಥಾನದ ಆವರಣದಲ್ಲಿ ರಾಯಚೂರು ನಗರ ಕ್ಷೇತ್ರದ ಶಾಸಕ ಡಾ.ಶಿವರಾಜ ಎಸ್.ಪಾಟೀಲ್, ರಾಯಚೂರು ಗ್ರಾಮೀಣ ಕ್ಷೇತ್ರದ ಶಾಸಕ ಬಸನಗೌಡ ದದ್ದಲ್, ಕೃಷಿ ಮಾರುಕಟ್ಟೆ ಅಧ್ಯಕ್ಷ ಮಲ್ಲಿಕಾರ್ಜುನಗೌಡ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಷು ಗಿರಿ., ರಾಯಚೂರು ಸಹಾಯಕ ಆಯುಕ್ತರಾದ ಡಾ.ಹಂಪಣ್ಣ ಸಜ್ಜನ್ ಅವರು ಸೇರಿದಂತೆ ವಿವಿಧ ಗಣ್ಯರಿಂದ ಮಾಲಾರ್ಪಣೆ ಮಾಡಿ, ಗೌರವ ಸಲ್ಲಿಸಲಾಯಿತು

# ಹವಾಮಾನ ಮುನ್ಸೂಚನೆ ರೈತರಿಗೆ ಕೃಷಿ ಇಲಾಖೆಯಿಂದ ಸಲಹೆ

• ಮಲ್ಲಮ್ಮ ನುಡಿವಾರ್ತೆ, ಕೊಪ್ಪಳ

ಹವಾಮಾನ ಮುನ್ಸೂಚನೆ ಹಿನ್ನೆಲೆಯಲ್ಲಿ ಕೊಪ್ಪಳ ಜಿಲ್ಲೆಯ ರೈತರಿಗೆ ಕೃಷಿ ಇಲಾಖೆಯಿಂದ ಪ್ರಮುಖ ಸಲಹೆಗಳನ್ನು ನೀಡಲಾಗಿದೆ.

ಭಾರತೀಯ ಹವಾಮಾನ ಇಲಾಖೆ, ಬೆಂಗಳೂರು ಇವರ ಮುನ್ಸೂಚನೆಯ ಪ್ರಕಾರ ಕೊಪ್ಪಳ ಜಿಲ್ಲೆಯಲ್ಲಿ ಮುಂದಿನ ಐದು ದಿನಗಳವರೆಗೆ ಭಾಗಶಃ ಮೋಡಕವಿದ ವಾತಾವರಣ ಇರಲಿದೆ. ಈ ಅವಧಿಯಲ್ಲಿ ಗರಿಷ್ಠ ಉಷ್ಣಾಂಶ 39 ರಿಂದ 40'ಸೆಲ್ಸಿಯಸ್ ಹಾಗೂ ಕನಿಷ್ಠ ಉಷ್ಣಾಂಶ 24 ರಿಂದ 25'ಸೆಲ್ಸಿಯಸ್ ಇರುವ ಸಾಧ್ಯತೆ ಇದೆ. ಗರಿಷ್ಠ ಆರ್ದ್ರತೆ 61□63% ಮತ್ತು ಕನಿಷ್ಠ ಆರ್ದ್ರತೆ 27 ರಿಂದ 29% ಇರಬಹುದು. ಗಾಳಿಯ ವೇಗವು ಗಂಟೆಗೆ 4.0 ರಿಂದ 6.0 ಕಿ.ಮೀ. ವೇಗದಲ್ಲಿ ಬೀಸುವ ಸಾಧ್ಯತೆ ಇದೆ.

ಈ ಮುನ್ಸೂಚನೆಯ ಪ್ರಕಾರ ಉಷ್ಣಾಂಶ ಹೆಚ್ಚಾಗುವ ಸಾಧ್ಯತೆ ಇರುವುದರಿಂದ ಜಿಲ್ಲೆಯ ರೈತರು ಮತ್ತು ಸಾರ್ವಜನಿಕರು ಶಾಖ ಅಲೆ ವಿರುದ್ಧ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು. ತಾಪಮಾನ ಏರಿಕೆಯಿಂದ ಕೀಟಬಾಧೆ ಹೆಚ್ಚಾಗುವ ಸಾಧ್ಯತೆ ಇರುವುದರಿಂದ ರೈತರು ಬೆಳಗಿನ ಜಾವದಲ್ಲಿ ನಿಯಂತ್ರಣ ಕ್ರಮಗಳನ್ನು ಕೈಗೊಳ್ಳುವುದು ಸೂಕ್ತ.

ಏಪ್ರಿಲ್ ಅಥವಾ ಮೇ ತಿಂಗಳಲ್ಲಿ ಮೊದಲ ಮಳೆ ಬಿದ್ದ ತಕ್ಷಣ ಉಳುಮೆ ಮಾಡಲು ಹದ ಸಿಗುತ್ತದೆ. ಜಮೀನನ್ನು ಸಮತಟ್ಟಾಗಿಸಿ, ಹದ ಸಿಕ್ಕಾಗ ಉಳುಮೆ ಮಾಡಿದರೆ ಮಣ್ಣು ಸಡಿಲವಾಗಿ ಮಳೆ ನೀರು ಭೂಮಿಯಲ್ಲೇ ಇಂಗುತ್ತದೆ. ಇದರಿಂದ ಹೆಚ್ಚುವರಿ ಮಳೆಯ ಸಮಯದಲ್ಲಿ ಅಂತರ್ಜಲ ಮಟ್ಟವೂ ಹೆಚ್ಚಾಗುತ್ತದೆ. ಹಿಂಗಾರು ಹಂಗಾಮಿನ ಬೆಳೆಗಳನ್ನು ಕಟಾವು ಮಾಡಿದ ನಂತರ ಭೂಮಿಯಲ್ಲಿ ತೇವಾಂಶ ಕಡಿಮೆ ಇರುತ್ತದೆ. ಬೇಸಿಗೆಯಲ್ಲಿ ಮಳೆ ಬಂದರೆ, ಹಸಿಯಾದ ಮಣ್ಣನ್ನು ಕ್ಟರ್ ಅಥವಾ ನೇಗಿಲಿನಿಂದ ಇಳಿಜಾರಿಗೆ ಅಡ್ಡವಾಗಿ ಉಳುಮೆ ಮಾಡಬೇಕು.

ಮಾಗಿ ಉಳುಮೆಯ ಪ್ರಯೋಜನಗಳು: ಮಣ್ಣು ಸಡಿಲವಾಗುವುದರಿಂದ ಮಳೆ ನೀರು ಭೂಮಿಯಲ್ಲಿ ಹೆಚ್ಚು ಇಂಗುತ್ತದೆ. ಬೆಳೆ ಅವಶೇಷಗಳು ಮಣ್ಣಿನಲ್ಲಿ ಬೆರೆತು ಸಾವಯವ ಗೊಬ್ಬರವಾಗುತ್ತವೆ. ಕೀಟಗಳು ಮತ್ತು ರೋಗಕಾರಕ ಜೀವಿಗಳು ಸೂರ್ಯನ ತಾಪಕ್ಕೆ ನಾಶವಾಗುತ್ತವೆ. ಮಣ್ಣು ಕೊಚ್ಚಿಹೋಗುವುದನ್ನು ತಡೆಯಬಹುದು ಹಾಗೂ ನೀರು ಜಮೀನಿನಲ್ಲೇ ಉಳಿಯುತ್ತದೆ. ಕರಕೆ ಮತ್ತು ಜೇಕೆ ಮೊದಲಾದ ಬಹುವಾರ್ಷಿಕ ಕಳೆಗಳನ್ನು ನಿಯಂತ್ರಿಸಬಹುದು.

ಈ ಪ್ರಯೋಜನಗಳನ್ನು ಪಡೆಯಲು ಮಧ್ಯಮದಿಂದ ಆಳವಾದ ಕಪ್ಪು ಮಣ್ಣಿನಲ್ಲಿ ಪ್ರತಿ 2 ರಿಂದ 3 ವರ್ಷಕ್ಕೊಮ್ಮೆ ಹಾಗೂ ಕೆಂಪು ಅಥವಾ ಮಿಶ್ರಿತ ಕಪ್ಪು ಮಣ್ಣಿನಲ್ಲಿ ಪ್ರತಿ ವರ್ಷ ಆಳವಾದ ಮಾಗಿ ಉಳುಮೆ ಮಾಡುವುದು ಸೂಕ್ತ.

ಉಷ್ಣಾಂಶ ಹೆಚ್ಚುತ್ತಿರುವುದರಿಂದ ಮತ್ತು ಮಳೆಯ ಕೊರತೆಯಿಂದ, ಬೆಳೆಗಳ ಸುತ್ತ ಮಲ್ಚಿಂಗ್ ಮಾಡಿ ಮಣ್ಣಿನ ತೇವಾಂಶವನ್ನು ಉಳಿಸಿಕೊಳ್ಳಬೇಕು. ಹಿಂಗಾರು ಬೆಳೆ ಕಟಾವಿನ ನಂತರ ಮಣ್ಣಿನ ಪರೀಕ್ಷೆ ಮಾಡಿಸಿಕೊಳ್ಳುವುದು ಅಗತ್ಯ. ಮಣ್ಣಿನ ಮಾದರಿಯನ್ನು ಸಂಗ್ರಹಿಸುವಾಗ ಬದುವಿನ ಮಣ್ಣು, ಅತಿಯಾಗಿ ಹಸಿ ಮಣ್ಣು ಅಥವಾ ಮಳೆಯಾದ ತಕ್ಷಣದ ಮಣ್ಣು ಬಳಸಬಾರದು.

ಬೆಳೆ ಅವಶೇಷಗಳನ್ನು ಸುಡದೇ, ಅವನ್ನು ಸಾವಯವ ಗೊಬ್ಬರ ಅಥವಾ ಕೊಟ್ಟಿಗೆ ಗೊಬ್ಬರ ತಯಾರಿಸಲು ಬಳಸಬೇಕು. ಉಗ್ರಾಣ ಕೀಟಗಳ ಹಾನಿ ತಪ್ಪಿಸಲು ಧಾನ್ಯಗಳಲ್ಲಿ 11 ರಿಂದ 12% ತೇವಾಂಶ, ದ್ವಿದಳ ಧಾನ್ಯಗಳಲ್ಲಿ 8% ಮತ್ತು ಎಣ್ಣೆ ಬೀಜಗಳಲ್ಲಿ 9% ತೇವಾಂಶವನ್ನು ಕಾಯ್ದುಕೊಳ್ಳಬೇಕು.

ಭತ್ತದ ಬೆಳೆಗೆ ಸಂಬಂಧಿಸಿದಂತೆ, ಕೊಯ್ಲಿಗೆ ಮುನ್ನ ಹೊಲದಿಂದ ನೀರನ್ನು ಹೊರಹಾಕಬೇಕು. ಕೊಯ್ಲು ಹಂತದಲ್ಲಿದ್ದರೆ ಸಂಯೋಜಿತ ಕೊಯ್ಲು ಯಂತ್ರಗಳನ್ನು ಬಳಸುವುದು ಉತ್ತಮ. ಭತ್ತದ ಒಣ ಹುಲ್ಲಿನ ನಿರ್ವಹಣೆಗೆ ಬೇಲರ್ ಉಪಕರಣ ಬಳಸಬೇಕು. ಯಾವುದೇ ಕಾರಣಕ್ಕೂ ಭತ್ತದ ಒಣ ಹುಲ್ಲನ್ನು ಬೆಂಕಿ ಹಚ್ಚಿ ಸುಡಬಾರದೆಂದು ಜಂಟಿ ಕೃಷಿ ನಿರ್ದೇಶಕರು ರೈತರಲ್ಲಿ ಮನವಿ ಮಾಡಿರುತ್ತಾರೆ.

ಹೆಚ್ಚಿನ ಮಾಹಿತಿಗಾಗಿ ಹತ್ತಿರ ರೈತ ಸಂಪರ್ಕ ಕೇಂದ್ರ, ಸಹಾಯಕ ಕೃಷಿ ನಿರ್ದೇಶಕರ ಕಛೇರಿ, ಕೃಷಿ ವಿಸ್ತರಣ ಘಟಕ ಅಥವಾ ಕೃಷಿ ವಿಜ್ಞಾನ ಕೇಂದ್ರವನ್ನು ಸಂಪರ್ಕಿಸಲು ಕೊಪ್ಪಳ ಜಂಟಿ ಕೃಷಿ ನಿರ್ದೇಶಕರಾದ ಜಿ.ಟಿ ಕೃಷ್ಣಮೂರ್ತಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪೋಲೀಸರ ಕಾರ್ಯಾಚರಣೆ ಮೋಟಾರ್ ಸೈಕಲ್ ವಶ, ಆರೋಪಿ ಅಂದರ್




• ಮಲ್ಲಮ್ಮ ನುಡಿವಾರ್ತೆ, ಕುರುಗೋಡು

ಬಳ್ಳಾರಿ ಎಸ್ಪಿ ಡಾ.ಸುಮನ್‌ಡಿ.ಪನ್ನೇಕರ್, ಹೆಚ್ಚುವರಿ ಪೋಲೀಸ್ ಅಧಿಕ್ಷಕರಾದ ನವೀನ್‌ಕುಮಾರ್ ಇವರ ಮಾರ್ಗದರ್ಶನದಲ್ಲಿ ತೋರಣಗಲ್ಲು ಡಿವೈಎಸ್‌ಪಿ ಪ್ರಸಾದ್‌ಗೋಖಲೆ, ಕುರುಗೋಡು ಸರ್ಕಲ್ ಇನ್ಸ್‌ಪೆಕ್ಟರ್ ಎಸ್‌ಎಂ.ಬಾಳನಗೌಡ ಇವರ ನೇತೃತ್ವದಲ್ಲಿ ಕುಡುತಿನಿ ಪಿಎಸ್‌ಐ.ಶಾಂತಮೂರ್ತಿ, ತನಿಖಾವಿಭಾಗದ ಪಿಎಸ್‌ಐ. ವಾಣಿ, ಪಿಎಸ್‌ಐ.ತೇಜೋವಿಕಾಸ್ ಹಾಗು ಸಿಬ್ಬಂದಿತಂಡದವರಾದ ಪಿ.ಮಂಜುನಾಥ, ಕರಿಬಸಪ್ಪ, ಅಬ್ದುಲ್‌ಇಸಾಕ್ ಇವರ ಮಿಂಚಿನ ಕಾರ್ಯಾಚರಣೆ ನಡೆಸಿ ಮೋಟಾರ್‌ಸೈಕಲ್ ಕಳ್ಳತನ ಪ್ರಕರಣದಲ್ಲಿ ಭಾಗಿಯಾಗಿರುವ ಕುಖ್ಯಾತ ಕಳ್ಳನನ್ನು ಬಂದಿಸಿ ಅವರಿಂದ 3 ಮೋಟಾರ್‌ಸೈಕೆಲ್‌ಗಳನ್ನು ಜಪ್ತಿಮಾಡಿ, ವಶಪಡಿಸಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ. ಸದರಿ ಆರೋಪಿಯನ್ನು ನ್ಯಾಯಾಂಗ ಬಂದನಕ್ಕೆ ಒಪ್ಪಿಸಲಾಗಿದೆ.

ಸದರಿ ಪ್ರಕರಣದಲ್ಲಿ ಆರೋಪಿಯನ್ನು ಹಾಗು ಕಳುವಾದ ಮೋಟಾರ್‌ಸೈಕಲ್‌ಗಳನ್ನು ಪತ್ತೆಕಾರ್ಯದಲ್ಲಿ ಭಾಗವಹಿಸಿದ ಎಲ್ಲಾ ಪೋಲೀಸ್ ಅಧಿಕಾರಿಗಳು ಹಾಗು ಸಿಬ್ಬಂದಿತಂಡದವರನ್ನು ಜಿಲ್ಲಾ ಎಸ್ಪಿ ಸುಮನ್‌ಡಿ.ಪನ್ನೇಕರ್ ಅವರು ಶ್ಲಾಘಿಸಿ, ಸೂಕ್ತ ಬಹುಮಾನವನ್ನು ಘೋಷಿಸಿದ್ದಾರೆ.

# ಉಸಿರಿದ್ದರೆ ಪ್ರವಚನ, ಜೀವ ಉಳಿಸಲು ಗವಿಶ್ರೀ ಮುಂದಾಗಲಿ: ವೀರಭದ್ರಪ್ಪ

• ಮಲ್ಲಮ್ಮ ನುಡಿವಾರ್ತೆ, ಕೊಪ್ಪಳ




ಈ ಸಮಾಜ ನೂರಾರು ಕಾಲ ಸುಖವಾಗಿರಬೇಕಾದರೆ ಗುಡಿ ಕೈಗಾರಿಕೆಗಳು ಇರಬೇಕೆಂದು ಗಾಂಧೀಜಿ ಹೇಳಿದ ಮಾತು ಉಲ್ಲೇಖ ಮಾಡಿ ನಾಡಿನ ಹಿರಿಯ ಸಾಹಿತಿ, ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಪುರಸ್ಕೃತರಾದ ಕುಂ. ವೀರಭದ್ರಪ್ಪ ಅವರು ಮಾತನಾಡಿದರು. ನಾನು ಹಿರೇಬಗನಾಳ, ಹಾಲವರ್ತಿ ಎನ್ನುವ ಕಾರ್ಖಾನೆ ಬಾಧಿತ ಹಳ್ಳಿಗಳಿಗೆ ಹೋಗಿ ಜನರನ್ನು ಮಾತನಾಡಿಸಿದಾಗ ಅವರ ಮುಖದಲ್ಲಿ ಲವಲವಿಕೆ ಇಲ್ಲ. ಆ ಜನ ಬದುಕುವ ಆಸೆಯನ್ನೇ ಬಿಟ್ಟವರಂತೆ ಕಂಡರು. ಜನ ಯಾವುದೇ ಪಕ್ಷದ ಮುಖಂಡರನ್ನೂ ನಂಬುವ ಸ್ಥಿತಿಯಲ್ಲಿ ಇಲ್ಲ. ಒಂದು ರೀತಿ ಬಸವಳಿದು, ಬೇಸರಗೊಂಡು ನಮ್ಮನ್ನು ಯಾರು ಕಾಪಾಡುತ್ತಾರೆ ಎಂದು ಮುಗಿಲು ನೋಡುತ್ತಿದ್ದಾರೆ. ಇಲ್ಲಿನ ಗವಿಶ್ರೀಗಳು ಪ್ರವಚನ ಮಾಡುವುದಾದರೆ ಮೊದಲು ಈ ಜನರ ಜೀವ ಉಳಿಸಲಿ. ಸರ್ಕಾರದ ವಿರುದ್ಧ ಧ್ವನಿ ಎತ್ತಲಿ. ಈ ಹೋರಾಟ ಆರಂಭ ಮಾಡಿದ ಗವಿಶ್ರೀ ತಾರ್ಕಿಕ ಅಂತ್ಯವನ್ನು ಅವರೆ ಕಾಣಿಸಬೇಕು, ಯಾಕೆ ಹಿಂದಡಿ ಇಟ್ಟರು ಎನ್ನುವದು ನಿಗೂಢವಾಗಿದೆ ಎಂದರು.

ಬಾಧಿತ ಹಳ್ಳಿ ಪ್ರದೇಶ ಸುಟ್ಟ ಮಸಣವಾಗಿ ಕಪ್ಪಿಟ್ಟಂತೆ ಕಾಣುತ್ತಿದೆ. ಅಲ್ಲಿಗೆ ಹೋದ ವೈದ್ಯರು ಇಲ್ಲಿರಬೇಡಿ, ದನಕರು ಕಟ್ಟಬೇಡಿ ಎಂದು ಸಲಹೆ ನೀಡುತ್ತಾರೆ. ಮತ್ತೆ ಈ ಜನ ಎಲ್ಲಿಗೆ ಹೋಗಬೇಕು.? ಸರ್ಕಾರದ ಹತ್ತಿರ ಇದಕ್ಕೆ ಉತ್ತರ ಇದೆಯೇ? ಗಂಗಾ ಸ್ನಾನ, ತುಂಗಾ ಪಾನ ಎನ್ನುವ ಮಾತಿನಂತೆ ತುಂಗಾ ಪಾನ ಮಾಡಬೇಡಿ ಎಂದು ಸರ್ಕಾರ ಎಚ್ಚರಿಸುವ ಮಟ್ಟಿಗೆ ನೀರು ಮಾಲಿನ್ಯ ಮಾಡಿದ್ದು ಇದೇ ಫ್ಯಾಕ್ಟರಿಗಳಲ್ಲವೆ ಎಂದು ಪ್ರಶ್ನೆ ಮಾಡಿದರು. ಹಳ್ಳಿಯ ಒಬ್ಬ ಮಹಿಳೆ ಮಕ್ಕಳಿಗೆ ಇಂತಹ ರೋಗ ಬಂದರೆ ನಮ್ಮ ಶವಗಳಿಗೆ ಸಂಸ್ಕಾರ ಮಾಡಲು ಯಾರಿರುತ್ತಾರೆ. ಇಲ್ಲಿಗೆ ಅಧಿಕಾರಿಗಳು, ರಾಜಕಾರಣಿಗಳು ಬರುತ್ತಾರೆ. ಅಯ್ಯೋ ಪಾಪ ಎನ್ನುತ್ತಾರೆ. ಮುಂದೆ ಹೋಗಿ ಮರೆತು ಬಿಡುತ್ತಾರೆ. ನಮ್ಮನ್ನು ಈ ಕಷ್ಟದಿಂದ ಪಾರು ಮಾಡುವವರು ಯಾರು ಎಂದು ನಮ್ಮನ್ನೇ ಕೇಳುತ್ತಾರೆ. ತಾಯಿ ಎದೆಹಾಲು ನಂಜಾಗಿ ಕೊಲುವಡೆ ಮತ್ತಾರಿಗೇಳಲಿ ಎನ್ನುವ ಶರಣರ ವಚನ ಉಲ್ಲೇಖ ಮಾಡಿ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡರು.

ಆಳಂದ ವಿರಕ್ತ ಮಠದ ಶ್ರೀ ಕೋರಣೇಶ್ವರ ಸ್ವಾಮೀಜಿ ಸಾನಿಧ್ಯವಹಿಸಿ ಮಾತನಾಡಿ, ಈ ಹೋರಾಟ ಅತ್ಯಂತ ಸಾರ್ಥಕ, ಸಾತ್ವಿಕವಾಗಿದ್ದು. ಜೀವ, ಆರೋಗ್ಯ, ಭೂಮಿ, ಕೃಷಿ ಉಳಿಸಿಕೊಳ್ಳಲು ನಡೆಸಿದ ನಿಮ್ಮ ಹೋರಾಟ ಗದುಗಿನ ತೋಂಟದ ಶ್ರೀ ಸಿದ್ದಲಿಂಗ ಸ್ವಾಮಿಗಳೆ ಪ್ರೇರಣೆಯಾಗಿದ್ದಾರೆ. ಇಲ್ಲಿ ಜಾನುವಾರುಗಳು ನೀರು ಇಲ್ಲದೆ, ಬಸಾಪುರ ಕೆರೆಯನ್ನು ಬಲ್ಡೋಟ ನುಂಗಿದಾಗ ಗೋರಕ್ಷಕರು ಎಲ್ಲಿದ್ದರು, ಈಗಲಾದರೂ ಮುಂದೆ ಬರಬೇಕು, ಅವರಿಗೆ ಈ ಗೋವುಗಳು ನೆನಪಾಗುವುದಿಲ್ಲವೇ? ದೇವರ ದಾಸಿಮಯ್ಯನ ವಚನ ಉಲ್ಲೇಖ ಮಾಡಿ ಇಳೆ ನಿಮ್ಮ ದಾನ, ಬೆಳೆ ನಿಮ್ಮ ದಾನ, ಸುಳಿದು ಸೂಸುವ ಗಾಳಿ ನಿಮ್ಮ ದಾನ ಎಂದಿರುವಂತೆ, ಈ ಸರ್ಕಾರಗಳು ಕಂಪನಿ ಕಾರ್ಖಾನೆಗಳ ದಾನವೇ ಎನ್ನುವಂತೆ ನಡೆದುಕೊಳ್ಳುತ್ತಿವೆ. ಬಗನಾಳ ಮಹಿಳೆಯೋರ್ವರು ನೋವು ತೋಡಿಕೊಂಡು ಬೆಳಿಗೆದ್ದು ಬಾಯಿಂದ ಉಗಿದಾಗ ಬರೀ ಕಪ್ಪು ಉಗುಳು ಬರುತ್ತದೆ. ಮೂಗಿನಿಂದಲೂ ಕಪ್ಪು ದ್ರವವೇ ಬರುತ್ತದೆಂದು ಹೆಳುತ್ತಾರೆ. ಸರ್ಕಾರಗಳು ಬದಲಾದರೂ ಅವರ ಧೋರಣೆ ಬದಲಾಗಲಿಲ್ಲ. ಎಲ್ಲಾ ಧೋರಣೆಗಳು ನಿಸರ್ಗ ನಾಶ ಮಾಡುವುದೆ ಆಗಿದೆ. ನಾನು ಈ ಹೋರಾಟಕ್ಕಾಗಿ ಹಲವು ಸ್ವಾಮಿಗಳೊಂದಿಗೆ ಇಲ್ಲಿಯೆ ಇದ್ದು ಹೋರಾಡಲು ಸಿದ್ಧ. ಗವಿಶ್ರೀ ಮುಂದೆ ನಿಲ್ಲುವ ಕಾಲ ಇದು ಎಂದರು.

ಧಾರವಾಡ ಪರಿಸರ, ಮಹಿಳಾಪರ ಬರಹಗಾರರಾದ ಶಾರದಾ ಗೋಪಾಲ್ ಅತ್ಯಂತ ಭಾವುಕರಾಗಿ ಮಾತನಾಡಿ, ಮೂರು ವರ್ಷದ ಮಗುವಿಗೆ ಪಾರ್ಶ್ವವಾಯು, ಹುಟ್ಟುವಾಗಲೇ ಹೃದಯರಂಧ್ರ, ಏನಿದು ಆಶ್ಚರ್ಯ ಮಹಿಳೆಯರು ಗರ್ಭದರಿಸುತ್ತಿಲ್ಲ. ಅಂಗವಿಕಲ ಮಕ್ಕಳು, ವೈವಾಹಿಕ ಸಂಬಂಧಗಳಿಗೆ ಹಿನ್ನಡೆ, ಯಾರೂ ಸಂಬಂಧ ಬೆಳೆಸಲು ಮುಂದೆ ಘರುತ್ತಿಲ್ಲ. ತವರು ಮನೆಯಲ್ಲಿ ಮಕ್ಕಳು, ಮಡದಿ ಎಷ್ಟೊಂದು ಸಮಸ್ಯೆಗಳು ಇಲ್ಲಿವೆ. ಈ ಸಮಸ್ಯೆ ಯಾರಿಂದಾಗಿದೆಯೋ ಅವರು ಸದಾಕಾಲ ಮೌನವಾಗಿದ್ದಾರೆ. ನಮಗೇನೂ ಗೊತ್ತಿಲ್ಲ ಎನ್ನುವ ನಡೆ. ಮತ್ತೆ ಯಾವಾಗ ಈ ಕಷ್ಟ ಪರಿಹಾರವಾಗುವುದು. ಎಂದು ಕಣ್ಣೀರಾದರು.

ಕಲಬುರಗಿ ವಿವಿ ವಿಶ್ರಾಂತ ಉಪಕುಲಪತಿ ಡಾ. ಪ್ರತಾಪ ಸಿಂಗ್ ತಿವಾರಿ, ಗವಿಸಿದ್ದೇಶ್ವರ ಮಹಾ ವಿದ್ಯಾಲಯದ ನಿವೃತ್ತ ಪ್ರಾಚಾರ್ಯ ಕಲಬುರಗಿ ನಿವಾಸಿ ಎಸ್.ಎಲ್.ಮಾಲಿಪಾಟೀಲ್, ಹಿರಿಯ ಸಾಹಿತಿ ಎಚ್.ಎಸ್. ಪಾಟೀಲ್, ಬೆಂಬಲಿಸಿ ಮಾತನಾಡಿದರು.

ಪ್ರಾಸ್ತಾವಿಕವಾಗಿ ಸಂಚಾಲಕ ಮಲ್ಲಿಕಾರ್ಜುನ ಬಿ. ಗೋನಾಳ ಮಾತನಾಡಿದರು. ಪ್ರಧಾನ ಸಂಚಾಲಕ ಅಲ್ಲಮಪ್ರಭು ಬೆಟ್ಟದೂರು ಅಧ್ಯಕ್ಷೀಯ ಭಾಷಣ ಮಾಡಿದರು.

ಕಾರ್ಯಕ್ರಮವನ್ನು ಮಂಜುನಾಥ ಜಿ. ಗೊಂಡಬಾಳ ನಿರ್ವಹಿಸಿದರು. ಸ್ವಾಗತವನ್ನು ರಾಜೇಶ ಸಸಿಮಠ ಮಾಡಿದರು. ವಂದನಾರ್ಪಣೆಯನ್ನು ಸೌಮ್ಯ ನಾಲ್ವಾಡ ಮಾಡಿದರು.

ಸಮಾವೇಶದಲ್ಲಿ ಡಾ. ಮಂಜುನಾಥ ಸಜ್ಜನ್, ಜ್ಯೋತಿ ಎಂ. ಗೊಂಡಬಾಳ, ಸರೋಜಾ ಬಾಕಳೆ, ಮಾಲಾ ಬಡಿಗೇರ, ಸಾವಿತ್ರಿ ಮುಜುಮದಾರ, ವಿದ್ಯಾ ನಾಲ್ವಾಡ, ವಿಜಯ ದೊರೆರಾಜು, ಭೀಮಸೇನ ಕಲಕೇರಿ, ಮೂಕಪ್ಪ ಮೇಸ್ತ್ರಿ ಬಸಾಪುರ, ಮಂಜುನಾಥ ಕೆಂಚನಗೌಡ್ರ ಹಾಲವರ್ತಿ, ಗವಿಸಿದ್ದರೆಡ್ಡಿ, ಬಸವರಾಜ ಪೂಜಾರ ಕಾಸನಕಂಡಿ, ಮಹಾದೇವಪ್ಪ ಮಾವಿನಮಡು, ವಿಜಯ ಮಹಾಂತೇಶ ಹಟ್ಟಿ, ಸಿ.ಬಿ. ಪಾಟೀಲ್, ಉಮೇಶ ಗಣಪಾ ಕುಣಿಕೇರಿ, ಮಂಜುನಾಥ ಪಾಟೀಲ್, ಗವಿಸಿದ್ದಪ್ಪ ಹಲಗಿ, ಶರಣು ಶೆಟ್ಟರ್, ಡಿ.ಎಂ. ಬಡಿಗೇರ, ಶರಣು ಗಡ್ಡಿ, ಶರಣು ಪಾಟೀಲ್, ಯಮನೂರಪ್ಪ ಹಾಲಳ್ಳಿ ಅನೇಕರಿದ್ದರು. ಅತಿಥಿಗಳು ಕೆಲವು ಗ್ರಾಮಕ್ಕೆ ಭೇಟಿ ನೀಡಿ ಪರಿಸ್ಥಿತಿ ತಿಳಿದುಕೊಂಡರು, ಅದನ್ನು ರಾಜ್ಯ ರಾಷ್ಟ್ರೀಯ ಮಟ್ಟದಲ್ಲಿ ಪ್ರಸಾರ ಮಾಡುವದಾಗಿ ಹೇಳಿದರು.

# ಎಸ್.ಎಸ್ ಎಲ್.ಸಿ ಫಲಿತಾಂಶ ಸೇಕ್ರೆಡ್ ಹಾರ್ಟ್ ಶಾಲೆ ಅತ್ಯುತ್ತಮ ಫಲಿತಾಂಶ



• ಮಲ್ಲಮ್ಮ ನುಡಿವಾರ್ತೆ, ಕುರುಗೋಡು

ಗ್ರಾಮೀಣ ಭಾಗದ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುತ್ತಿರುವ ಪಟ್ಟಣದ ಸೇಕ್ರೆಡ್ ಹಾರ್ಟ್ ಆಂಗ್ಲ ಮಾಧ್ಯಮ ಪ್ರೌಢಶಾಲೆ ಯು

2025–26 ನೇ ಸಾಲಿನ ಮಾರ್ಚ್ ನಲ್ಲಿ ನಡೆದ ಎಸ್.ಎಸ್.ಎಲ್. ಸಿ ವಾರ್ಷಿಕ ಪರೀಕ್ಷೆಯಲ್ಲಿ ಅತ್ಯುತ್ತಮ ಫಲಿತಾಂಶ ಪಡೆದು ಗಮನ ಸೆಳೆದಿದೆ.

ಶಾಲೆಯ ವಿದ್ಯಾರ್ಥಿನಿ ಸಿ.ವೈ ನಂದಿನಿ 596 ಅಂಕ (95.36%) ಪಡೆದು ಶಾಲೆಗೆ ಪ್ರಥಮ ಸ್ಥಾನ ಪಡೆದರೆ, ದ್ವಿತೀಯ ಸ್ಥಾನವನ್ನು ಬಾಲ್ ರಾಜ್ 590 ಅಂಕ (94.40%), ಅಂಕ ಗಳಿಸಿದ್ದಾರೆ, ತೃತೀಯ ಸ್ಥಾನ ಎಂ.ಅನುಶ್ರೀ 575 ಅಂಕ (92%) ಅಂಕಗಳನ್ನು ಪಡೆದುಕೊಂಡು ಶಾಲೆಗೆ ಕೀರ್ತಿ ತಂದಿದ್ದಾರೆ. ಅಲ್ಲದೇ ಈ ಸಾಲಿನಲ್ಲಿ ಒಟ್ಟು 85 ಮಕ್ಕಳು ಪರೀಕ್ಷೆಗೆ ಹಾಜರಿದ್ದು 17 ಮಕ್ಕಳು ಡಿಸ್ಟಿಕ್ಷನ್ ನಲ್ಲಿ ಉತ್ತೀರ್ಣರಾಗಿದ್ದಾರೆ. ಇನ್ನುಳಿದಂತೆ 49 ಮಕ್ಕಳು ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾಗಿದ್ದಾರೆ. ದ್ವಿತಿಯ ದರ್ಜೆ 12 ಮಕ್ಕಳು ಪಡೆದಿದ್ದಾರೆ. 6 ವಿದ್ಯಾರ್ಥಿಗಳು ತೃತೀಯ ದರ್ಜೆಯಲ್ಲಿ ಉತ್ತೀರ್ಣರಾಗಿದ್ದು ಒಬ್ಬ ವಿದ್ಯಾರ್ಥಿನಿ ಅನುತೀರ್ಣರಾಗಿದ್ದಾಳೆ

ಈ ಸಂದರ್ಭದಲ್ಲಿ ಪತ್ರಿಕೆಯೊಂದಿಗೆ ಮುಖ್ಯೋಪಧ್ಯಾಯಿನಿ ಸಿಸ್ಟರ್ ವೆರೋನಿಕಂ ಮಾತನಾಡಿ ಕಳೆದ ಹಲವು ವರ್ಷಗಳಿಂದಲೂ ನಮ್ಮ ಶಾಲೆಯ ಫಲಿತಾಂಶದಲ್ಲಿ ಪ್ರಗತಿ ಕಂಡು ಬರುತ್ತಿದ್ದು ವಿದ್ಯಾರ್ಥಿಗಳ ಶ್ರಮ, ಶಿಕ್ಷಕರ ಗುಣಮಟ್ಟದ ಶಿಕ್ಷಣದಿಂದ ಹಾಗೂ ಪೋಷಕರ ಸಹಕಾರದಿಂದ ಉತ್ತಮ ಫಲಿತಾಂಶ ಪಡೆಯಲು ಸಾಧ್ಯವಾಯಿತು. ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ಫಲಿತಾಂಶ ಪಡೆಯಲು ಪ್ರಮಾಣಿಕ ಪ್ರಯತ್ನ ನೆಡೆಸಲಾಗುತ್ತದೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಸಿಸ್ಟರ್ ಸೋನಾ, ದೈಹಿಕ ಶಿಕ್ಷಕ ಷಣ್ಮುಖ, ನಾಗಪ್ಪ, ಶಿವಕುಮಾರ್, ರವಿ, ,ಬಸವರಾಜ್ ಸೇರಿದಂತೆ ಇನ್ನಿತರ ಶಿಕ್ಷಕರು ಉಪಸ್ಥಿತರಿದ್ದರು.

## ತಾಪಮಾನ ಹೆಚ್ಚಳ: ಕಾರ್ಮಿಕರು, ವ್ಯಾಪಾರಸ್ಥರು, ಸುರಕ್ಷತೆ ಅನುಸರಿಸಲು ಮನವಿ

• ಮಲ್ಲಮ್ಮ ನುಡಿ ವಾರ್ತೆ, ರಾಯಚೂರು

ಪ್ರಸ್ತುತ ಬೇಸಿಗೆ ಹಿನ್ನಲೆಯಲ್ಲಿ ಸೂರ್ಯನ ಶಾಖದಿಂದ ತಾಪಮಾನ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿರುವುದರಿಂದ ಹೀಟ್ ವೇವ್ ಸ್ಟ್ರೋಕ್ (ಶಾಖದ ಹೊಡೆತ) ದಿಂದಾಗಿ ಕಾರ್ಮಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ಸಾಧ್ಯತೆಯಿರುವುದರಿಂದ ಕಟ್ಟಡ ಮತ್ತು ಇತರ ನಿರ್ಮಾಣ ಕಾರ್ಮಿಕರ, ಬೀದಿ ಬದಿ ವ್ಯಾಪಾರಸ್ಥರ, ವಾಹನ ಚಾಲಕರ ಮತ್ತು ಇತರೆ ವರ್ಗದ ಎಲ್ಲಾ ಕೆಲಸಗಾರರ ಆರೋಗ್ಯವನ್ನು ಕಾಪಾಡುವ ಮತ್ತು ಸುರಕ್ಷತೆ ಅನುಸರಿಸಬೇಕೆಂದು ಜಿಲ್ಲಾಧಿಕಾರಿಗಳು ಆಗಿರುವ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರಾದ ನಿತೀಶ್ ಕೆ. ಅವರು ಕೋರಿದ್ದಾರೆ.

ಜಿಲ್ಲಾಡಳಿತ ಮತ್ತು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರವು ಮುಂಜಾಗ್ರತಾ ಕ್ರಮವಾಗಿ ಹೊರಗಡೆ ಕೆಲಸ ನಿರ್ವಹಿಸುವ ಕಟ್ಟಡ ಮತ್ತು ಇತರ ನಿರ್ಮಾಣ ಕಾರ್ಮಿಕರ, ಬೀದಿ ಬದಿ ವ್ಯಾಪಾರಸ್ಥರ, ವಾಹನ ಚಾಲಕರ ಮತ್ತು ಇತರೆ ವರ್ಗದ ಎಲ್ಲಾ ಕೆಲಸಗಾರರ ಆರೋಗ್ಯವನ್ನು ಕಾಪಾಡುವ ಮತ್ತು ಸುರಕ್ಷತೆಯನ್ನು ಒದಗಿಸುವ ದೃಷ್ಟಿಯಿಂದ ರಾಯಚೂರು ಜಿಲ್ಲೆಯ ಎಲ್ಲಾ ಕಟ್ಟಡ ಮತ್ತು ಇತರೆ ನಿರ್ಮಾಣದಾರ ಮತ್ತು ಇತರೆ ಉದ್ದಿಮೆಗಳ ಮಾಲಿಕರಿಗೆ ಮತ್ತು ಕಾರ್ಮಿಕರಿಗೆ ಈ ಕೆಳಕಂಡ ಸಲಹೆ–ಸೂಚನೆಗಳನ್ನು ನೀಡಿ ಮುಂದಿನ ದಿನಗಳಲ್ಲಿ ತಮ್ಮ ಸುರಕ್ಷತೆಯನ್ನು ಕಾಪಾಡುವ ಹಿನ್ನಲೆಯಲ್ಲಿ ಜಿಲ್ಲಾಡಳಿತದೊಂದಿಗೆ ಸಹಕರಿಸುವಂತೆ ತಿಳಿಸಿದ್ದಾರೆ.

ಕೆಲಸದ ಸ್ಥಳದಲ್ಲಿ ಕಾರ್ಮಿಕರಿಗೆ ತಂಪಾದ ಕುಡಿಯುವ ನೀರು ಮತ್ತು ಎಲೆಕ್ಟ್ರೋಲೈಟ್ ಪೂರಕಗಳ ವ್ಯವಸ್ಥೆಯನ್ನು ಮಾಲೀಕರು ಮಾಡಬೇಕು. ಡಿ–ಹೈಡ್ರೇಟೆಡ್ ಆಗದಿರಲು ಕಾರ್ಮಿಕರು ಮತ್ತು ಎಲ್ಲರೂ ಪ್ರತಿ 20 ನಿಮಿಷಗಳಿಗೊಮ್ಮೆ ಅಥವಾ ಹೆಚ್ಚು ಭಾರಿ ನೀರನ್ನು ಕುಡಿಯುವಂತೆ ಹಾಗೂ ಕೆಲಸದ ಮಧ್ಯದಲ್ಲಿ ವಿಶ್ರಾಂತಿ ಪಡೆದು ಕೆಲಸ ಮಾಡಲು ಗಮನ ವಹಿಸಬೇಕು.

## ಪಟ್ಟಣದ ಬಾಲಕಿಯರ ಶಾಲೆ 94.5% ಫಲಿತಾಂಶ

• ಮಲ್ಲಮ್ಮ ನುಡಿ ವಾರ್ತೆ ಹುಣಸಗಿ

ಹುಣಸಗಿ ಪಟ್ಟಣದ ಸರ್ಕಾರಿ ಬಾಲಕಿಯರ ಪ್ರೌಢ ಶಾಲೆಯ 2026ನೇ ಸಾಲಿನ ಎಸ್‌ಎಸ್‌ಎಲ್‌ಸಿ ಫಲಿತಾಂಶ ಪ್ರಕಟವಾಗಿದ್ದು, ಶಾಲೆ ಈ ಬಾರಿ 94.5% ಫಲಿತಾಂಶ ಸಾಧಿಸಿ ಗಮನಾರ್ಹ ಯಶಸ್ಸು ದಾಖಲಿಸಿದೆ.

ಪರೀಕ್ಷೆಗೆ ಕುಳಿತ 74 ವಿದ್ಯಾರ್ಥಿನಿಯರಲ್ಲಿ ಎಲ್ಲರೂ ಹಾಜರಾಗಿದ್ದು, 5 ಮಂದಿ ಡಿಸ್ಟಿಂಕ್ಷನ್, 35 ಮಂದಿ ಪ್ರಥಮ ಶ್ರೇಣಿ, 17 ಮಂದಿ ದ್ವಿತೀಯ ಶ್ರೇಣಿ ಹಾಗೂ 13 ಮಂದಿ ಉತ್ತೀರ್ಣರಾಗಿದ್ದಾರೆ. ಕೇವಲ 4 ಮಂದಿ ಅನುತ್ತೀರ್ಣರಾಗಿದ್ದಾರೆ.

ವಿಶೇಷವಾಗಿ ಗಣಿತ, ವಿಜ್ಞಾನ ಹಾಗೂ ಹಿಂದಿ ವಿಷಯಗಳಲ್ಲಿ ಶೇಕಡಾ 100 ಫಲಿತಾಂಶ ದೊರೆತಿರುವುದು ಶಾಲೆಯ ಶೈಕ್ಷಣಿಕ ಗುಣಮಟ್ಟವನ್ನು ತೋರಿಸುತ್ತದೆ.

ಶಾಲೆಯ ಪ್ರಥಮ ಸ್ಥಾನವನ್ನು ಕುಮಾರಿ ಸೌಜನ್ಯ ಚೆನ್ನಪ್ಪ (588 ಅಂಕ 94.08%) ಪಡೆದುಕೊಂಡಿದ್ದು, ದ್ವಿತೀಯ ಸ್ಥಾನವನ್ನು ಕು. ಚಂದನ ಶ್ರೀಮಂತ್ (579 ಅಂಕ 92.64%) ಹಾಗೂ ತೃತೀಯ ಸ್ಥಾನವನ್ನು ಕುಮಾರಿ ಜಯಶ್ರೀ ಮಲ್ಲಣ್ಣ ಡಂಗಿ (569 ಅಂಕ 91.04%) ಪಡೆದಿದ್ದಾರೆ.

ಈ ಸಾಧನೆಗೆ ಎಸ್‌ಡಿಎಂಸಿ ಅಧ್ಯಕ್ಷ ಶ್ರೀ ಸಿದ್ರಾಮಪ್ಪ ಮುದುಗಲ್, ಮುಖ್ಯ ಗುರು ಶ್ರೀ ವಿಠ್ಠಲ್ ಬಿ ಚೌಹಾನ್, ಎಸ್‌ಡಿಎಂಸಿ ಸದಸ್ಯರು, ಶಿಕ್ಷಕರು ಹಾಗೂ ಪಟ್ಟಣದ ನಾಗರಿಕರು ಸಂತಸ ವ್ಯಕ್ತಪಡಿಸಿದ್ದಾರೆ.

## ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಜಮೀನು ಖರೀದಿಸಲು ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ, ಬಳ್ಳಾರಿ

ಜಿಲ್ಲಾ ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ಹಾಗೂ ಇದರ ಅಧೀನದಲ್ಲಿ ಬರುವ ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ, ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ, ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮಗಳಿಂದ ಕೇಂದ್ರ ಕಚೇರಿ ವಾರ್ಷಿಕ ಗುರಿಗಳ ಪ್ರಕಾರ ಜಿಲ್ಲೆಯಾದ್ಯಾಂತ ಭೂ ಮಾಲೀಕರಿಂದ ಜಮೀನಗಳನ್ನು ಖರೀದಿಸಲು ಅರ್ಹ ಮಹಿಳಾ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಈ ಯೋಜನೆಗೆ ಅರ್ಜಿ ಸಲ್ಲಿಸಲು ಏ.30 ರಂದು ಕೊನೆಯ ದಿನವಾಗಿದೆ.ಈ ಹಿಂದೆ ಜಿಲ್ಲಾ ಕಚೇರಿಯಲ್ಲಿ ಇರುವ ಪ್ರಸ್ತಾವನೆಗಳನ್ನು ರದ್ದು ಪಡಿಸಲು ಹಾಗೂ ಹೊಸ ಪ್ರಸ್ತಾವನೆಗಳನ್ನು ಪಡೆಯಲು ಜಿಲ್ಲಾಧಿಕಾರಿಯವರಿಂದ ಅನುಮೋದನೆ ಪಡೆಯಲಾಗಿದೆ.


ಭೂ ಮಾಲೀಕರ ಪ್ರಸ್ತಾವನೆಗಳ ನಿಯಮ: ಭೂ ಮಾಲೀಕರು ಖುದ್ದಾಗಿ ನಮೂನೆ–1 ರ ಒಪ್ಪಿಗೆ ಪತ್ರವನ್ನು ಜಿಲ್ಲಾ ಕಚೇರಿಗೆ ಸಲ್ಲಿಸಬೇಕು. ಅಗತ್ಯ ಎಲ್ಲಾ ದಾಖಲಾತಿಗಳನ್ನು ಸಲ್ಲಿಸಬೇಕು.

ಫಲಾನುಭವಿಗಳ ನಿಯಮ: ಭೂ ರಹಿತ ಕೃಷಿ ಕಾರ್ಮಿಕ ಮಹಿಳಾ ಪತ್ರವನ್ನು ಕಡ್ಡಾಯವಾಗಿ ಸಲ್ಲಿಸಬೇಕು. ಜಮೀನು ಇಲ್ಲದೇ ಇರುವ ಬಗ್ಗೆ ದೃಢೀಕರಣ ಪತ್ರ ಸಲ್ಲಿಸಬೇಕು. ಜಾತಿ ಪ್ರಮಾಣ ಪತ್ರ, ಆದಾಯ ಪತ್ರ, ರೇಷನ್ ಕಾರ್ಡ್, ಆಧಾರ್ ಕಾಡ್, ಗುರುತಿನ ಚೀಟಿ ಹಾಗೂ ಇತರೆ ದಾಖಲೆಗಳನ್ನು ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಡಾ.ಬಿ.ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರ ಕಚೇರಿ ಅಥವಾ ಮೊ.8050854106 ಗೆ ಸಂಪರ್ಕಿಸಬಹುದು ಎಂದು ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸರ್ಕಾರಿ ಆದರ್ಶ ವಿದ್ಯಾಲಯ: ಎಸ್ ಎಸ್ ಎಲ್ ಸಿ ಫಲಿತಾಂಶ ಶೇ. 100

• ಮಲ್ಲಮ್ಮ ನುಡಿ ವಾರ್ತೆ ಬಸವನಬಾಗೇವಾಡಿ



ತಾಲೂಕಿನ ಸರ್ಕಾರಿ ಆದರ್ಶ ವಿದ್ಯಾಲಯ ಹುಣಶ್ಯಾಳ ಪಿಬಿ ಎಸ್ ಎಸ್ ಎಲ್ ಸಿ ವಾರ್ಷಿಕ ಫಲಿತಾಂಶ ಶೇಕಡ ನೂರರಷ್ಟು ಆಗಿದೆ. ವಿದ್ಯಾನೀ ಹೂಗಾರ( 617) ಶೇ. 98.72 ಪ್ರಥಮ, ಸಂಜು ಮ ಕೋನರೆಡ್ಡಿ(607) ಶೇ. 97.12 ದ್ವಿತೀಯ, ಸ್ಪಂದನ ಮ ಪೂಜಾರಿ 604 ಶೇ 96.65 ತೃತೀಯ ಸ್ಥಾನ ಗಳಿಸಿದ್ದಾರೆ. ಡಿಸ್ಟಿಂಕ್ಷನ್ 42 ಪ್ರಥಮ ಸ್ಥಾನದಲ್ಲಿ 24 ಮಕ್ಕಳು ಪಾಸಾಗಿ ವಿದ್ಯಾಲಯಕ್ಕೆ ಕೀರ್ತಿ ತಂದಿದ್ದಾರೆ. ಪ್ರಾಂ. ಎಸ್ ಟಿ ಹರಿಜನ, ಎಸ್ ಡಿ ಎಮ್ ಸಿ ಅಧ್ಯಕ್ಷ ಆನಂದ ಸಜ್ಜನ ಸೇರಿದಂತೆ ಪದಾಧಿಕಾರಿಗಳು ಅಭಿನಯಿಸಿದ್ದಾರೆ.

## ಎಸ್‌ಯುಸಿಐ ಪಕ್ಷದ 78ನೇ ಸಂಸ್ಥಾಪನಾ ವರ್ಷಾಚರಣೆ




• ಮಲ್ಲಮ್ಮ ನುಡಿ ವಾರ್ತೆ, ಬಳ್ಳಾರಿ

ಇಂದು ಎಸ್. ಯು. ಸಿ. ಐ (ಕಮ್ಯುನಿಸ್ಟ್ ) ಪಕ್ಷದ 78ನೇ ಸಂಸ್ಥಾಪನಾ ವರ್ಷಾಚರಣೆ ಸಂದರ್ಭದಲ್ಲಿ ಪಕ್ಷದ ಕಛೇರಿಯಲ್ಲಿ ಸಭೆಯನ್ನು ಆಯೋಜಿಸಲಾಗಿತ್ತು. ಸಭೆಯ ಮುನ್ನ ಪಕ್ಷದ ಸಂಸ್ಥಾಪಕರು, ಮಹಾನ್ ಮಾರ್ಕ್ಸ್ ವಾದಿ ಚಿಂತಕರಾದ ಕಾ. ಶಿವದಾಸ್ ಘೋಷ್ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಲಾಯಿತು.

ಎಸ್. ಯು. ಸಿ. ಐ (ಕಮ್ಯುನಿಸ್ಟ್ )ಪಕ್ಷದ ರಾಜ್ಯ ಸಮಿತಿ ಸದಸ್ಯರಾದ ಕಾ. ಬಿ. ರವಿ ಅವರು ಮುಖ್ಯ ಭಾಷಣಕಾರರಾಗಿ ಮಾತನಾಡುತ್ತಾ " ಇಂದು ಜಗತ್ತಿನಾದ್ಯಂತ ಬಂಡವಳಶಾಹಿ ವ್ಯವಸ್ಥೆ ತೀವ್ರತರ ಬಿಕ್ಕಟ್ಟಿನಲ್ಲಿ ಸಿಲುಕಿದೆ. ಬಿಕ್ಕಟ್ಟಿನಿಂದ ಹೊರಬರಲು ಶಸ್ತ್ರಾಸ್ತ್ರ ವ್ಯಾಪಾರವನ್ನು ಉತ್ತೇಜಿಸುತ್ತಾ, ಯುದ್ಧಗಳನ್ನು ಸೃಷ್ಟಿಸುತ್ತಿದೆ. ಕಾರ್ಪೊರೇಟ್ ಕಂಪನಿಗಳ ಲಾಭ ದಾಹಕ್ಕಾಗಿ ದೇಶಗಳ ಸಾರ್ವಭೌಮತೆಯನ್ನೇ ಹೊಸಕಿ ಹಾಕಲಾಗುತ್ತಿದೆ. ಇರಾನ್ ಮೇಲೆ ಅಮೇರಿಕಾ ನಡೆಸಿದ ಯುದ್ಧ ದಾಳಿ, ಪ್ಯಾಲೇಸ್ತೇನ್ ನಲ್ಲಿ ಇಸ್ರೇಲ್ ನಡೆಸಿರುವ ನರಮೇಧ ನಮ್ಮ ಕಣ್ಣ ಮುಂದಿನ ಉದಾಹರಣೆಗಳಾಗಿವೆ. ಇಂದು ಜಗತ್ತಿನಾದ್ಯಂತ ಶಾಂತಿ ನೆಲಸಬೇಕಾದರೆ, ದುಡಿಯುವ ಜನರ ಶೋಷಣೆಗೆ ಅಂತ್ಯ ಹಾಡಬೇಕಾದರೆ, ಬಂಡವಾಳಶಾಹಿ–ಸಾಮ್ರಾಜ್ಯಶಾಹಿ ವ್ಯವಸ್ಥೆಯನ್ನು ಕೊನೆಗಾಣಿಸಬೇಕು. ಕಾರ್ಮಿಕ ವರ್ಗದ ಕ್ರಾಂತಿಯನ್ನು ನೆರವೇರಿಸಿ, ಸಮಾಜವಾದಿ ವ್ಯವಸ್ಥೆಯನ್ನು ಸ್ಥಾಪಿಸಬೇಕು. ಇಂತಹ ಕ್ರಾಂತಿಯನ್ನು ಸಾಕಾರಗೊಳಿಸಲು ಎಸ್.ಯು.ಸಿ.ಐ (ಸಿ) ಪಕ್ಷವನ್ನು, ಕಾರ್ಮಿಕ ವರ್ಗದ ಮಹಾನ್ ನಾಯಕರಾದ ಕಾ. ಶಿವದಾಸ್ ಘೋಷ್ ಅವರು ಕಟ್ಟಿ ಬೆಳೆಸಿದ್ದಾರೆ. ಹಾಗಾಗಿ ಈ ಪಕ್ಷವನ್ನು ಬಲಪಡಿಸಲು, ಶೋಷಿತ ಜನರ ಹೋರಾಟ ತೀವ್ರಗೊಳಿಸಲು ಮುಂಬರಬೇಕು" ಎಂದರು.

ಜಿಲ್ಲಾ ಕಾರ್ಯದರ್ಶಿ ಕಾ. ರಾಧಾಕೃಷ್ಣ ಉಪಾಧ್ಯಕ್ಷ ಅವರು ಭಾಷಣಕಾರರಾಗಿ ಆಗಮಿಸಿದ್ದರು.

ಅಧ್ಯಕ್ಷತೆಯನ್ನು ಜಿಲ್ಲಾ ಸೆಕ್ರೆಟೇರಿಯೇಟ್ ಸದಸ್ಯರಾದ ಕಾ. ಮಂಜುಳಾ ಅವರು ವಹಿಸಿದ್ದರು.

ಜಿಲ್ಲಾ ಸಮಿತಿ ಸದಸ್ಯರಾದ ಕಾ. ದೇವದಾಸ್, ಕಾ. ನಾಗಲಕ್ಷ್ಮಿ, ಡಾ.ಪ್ರಮೋದ್, ಕಾ. ಸೋಮಶೇಖರ ಗೌಡ, ಕಾ. ಶಾಂತಾ, ಕಾ. ಗೋವಿಂದ್, ಕಾ. ಈಶ್ವರಿ ಉಪಸ್ಥಿತರಿದ್ದರು. ಪಕ್ಷದ ಕಾರ್ಯಕರ್ತರು, ಬೆಂಬಲಿಗರು, ಭಾಗವಹಿಸಿದ್ದರು.

## ಕುಮಟಾ: ವಿದ್ಯುತ್ ವ್ಯತ್ಯಯ

• ಮಲ್ಲಮ್ಮ ನುಡಿ ವಾರ್ತೆ, ಕಾರವಾರ,

ಏ.24(ಕರ್ನಾಟಕವಾರ್ತೆ):–ಹೆಸ್ಕಾಂ, ಕುಮಟಾ ಉಪವಿಭಾಗದ ಗ್ರಾಮೀಣ ಶಾಖೆಯ 11ಕೆ.ವಿ ಬಾಡ ಮತ್ತು 11ಕೆ.ವಿ ಮಾಸುರ ಮಾರ್ಗದಲ್ಲಿ 11ಕೆ.ವಿ ಮಾರ್ಗದ ವಾಹಕ ಬದಲಾವಣೆ ಕಾಮಗಾರಿ ಇರುವುದರಿಂದ ಏ.25 ರಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 5 ಗಂಟೆ ವರೆಗೆ ವಿದ್ಯುತ್ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಕುಮಟಾ ಹೆಸ್ಕಾಂ, ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರು(ವಿ)ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಡತನದಲ್ಲಿ ಅರಳಿದ ಪ್ರತಿಭೆ: ಸಂಜನಾ ಕಾಳೆ 616/625 ಅಂಕಗಳ ಸಾಧನೆ

• ಮಲ್ಲಮ್ಮ ನುಡಿ ವಾರ್ತೆ, ಹುಣಸಗಿ



ಸಮೀಪದ ಗೆದ್ದಲಮರಿ ಗ್ರಾಮದ ವಿದ್ಯಾರ್ಥಿನಿ ಸಂಜನಾ ದೇವಪ್ಪ ಕಾಳೆ, ರಾಜನಕೋಳೂರುದಲ್ಲಿನ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಯಲ್ಲಿ ವಿದ್ಯಾಭ್ಯಾಸ ಮಾಡುತ್ತಿದ್ದು, ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ 625ರಲ್ಲಿ 616 ಅಂಕಗಳನ್ನು ಪಡೆದು ವಿಶಿಷ್ಟ ಸಾಧನೆ ಮಾಡಿ ಗಮನ ಸೆಳೆದಿದ್ದಾಳೆ.ಕನ್ನಡ ವಿಷಯದಲ್ಲಿ ಶೇ.100ರಷ್ಟು ಅಂಕಗಳಾದ 125/125 ಗಳಿಸಿರುವ ಸಂಜನಾ, ಹಿಂದಿ ಹಾಗೂ ಸಮಾಜ ವಿಜ್ಞಾನ ವಿಷಯಗಳಲ್ಲಿ ತಲಾ 100/100 ಅಂಕಗಳನ್ನು ಪಡೆದು ತನ್ನ ಪ್ರತಿಭೆಯನ್ನು ಮತ್ತೊಮ್ಮೆ ಸಾಬೀತುಪಡಿಸಿದ್ದಾಳೆ.

ತಂದೆ ದೇವಪ್ಪ ಕಾಳೆ ಹಾಗೂ ತಾಯಿ ಶ್ರೀದೇವಿ ದೇವಪ್ಪ ಕಾಳೆ ಅವರ ಪುತ್ರಿಯಾಗಿರುವ ಈಕೆ, ಗ್ರಾಮೀಣ ಭಾಗದ ಕಡು ಬಡತನದ ನಡುವೆಯೇ ಅಚಲ ಪರಿಶ್ರಮ, ದೃಢಸಂಕಲ್ಪದ ಮೂಲಕ ಈ ಸಾಧನೆ ಸಾಧಿಸಿರುವುದು ಪ್ರಶಂಸನೀಯವಾಗಿದೆ.

ಗ್ರಾಮೀಣ ಹಿನ್ನಲೆಯಲ್ಲಿ ಬೆಳೆದಿದ್ದರೂ, ಉತ್ತಮ ಶಿಕ್ಷಣದ ಮೇಲಿನ ಆಸಕ್ತಿ ಹಾಗೂ ಶಿಕ್ಷಕರ ಮಾರ್ಗದರ್ಶನದಿಂದ ಉನ್ನತ ಸಾಧನೆ ಮಾಡಿದ ಸಂಜನಾ, ಇತರ ವಿದ್ಯಾರ್ಥಿಗಳಿಗೆ ಮಾದರಿಯಾಗಿದ್ದಾಳೆ ಎಂದು ಗ್ರಾಮಸ್ಥರು ಅಭಿಪ್ರಾಯಪಟ್ಟಿದ್ದಾರೆ.

ವಿದ್ಯಾರ್ಥಿನಿಯ ಈ ಸಾಧನೆಗೆ ಗೆದ್ದಲಮರಿ ಗ್ರಾಮದ ಗುರುಹಿರಿಯರು, ಮೌನೇಶ್ ಕಾಳೆ, ಉಪನ್ಯಾಸಕರು ಹಾಗೂ ಊರಿನ ಸಾರ್ವಜನಿಕರು ಹರ್ಷ ವ್ಯಕ್ತಪಡಿಸಿ ಅಭಿನಂದನೆಗಳು ಸಲ್ಲಿಸಿದ್ದಾರೆ.

## ಅಸ್ತ್ರ ಮ್ಯಾನೇಜ್ಮೆಂಟ್ ಫೆಸ್ಟ್: ವಿದ್ಯಾರ್ಥಿ ಪ್ರತಿಭೆಗೆ ವೇದಿಕೆ



• ಮಲ್ಲಮ್ಮ ನುಡಿ ವಾರ್ತೆ, ಬಳ್ಳಾರಿ

ಆರ್ ವೈ ಎಂ ಇಂಜಿನಿಯರಿಂಗ್ ಕಾಲೇಜಿನ ಎಂ.ಬಿ.ಎ ವಿಭಾಗದ ವತಿಯಿಂದ ರಾಷ್ಟ್ರಮಟ್ಟದ 'ಅಸ್ತ್ರ ಮ್ಯಾನೇಜ್ಮೆಂಟ್ ಫೆಸ್ಟ್–2026' ಕಾರ್ಯಕ್ರಮವನ್ನು ವ್ಯವಸ್ಥಿತವಾಗಿ ಆಯೋಜಿಸಲಾಯಿತು. ವೀರಶೈವ ವಿದ್ಯಾವರ್ಧಕ ಸಂಘದ ಆಶ್ರಯದಲ್ಲಿ ನಡೆದ ಈ ಮಹತ್ವದ ಕಾರ್ಯಕ್ರಮವು ಪದವಿ ವಿದ್ಯಾರ್ಥಿಗಳಲ್ಲಿರುವ ಸುಪ್ತ ಪ್ರತಿಭೆಯನ್ನು ಅನಾವರಣಗೊಳಿಸುವ ಜೊತೆಗೆ, ಅವರಲ್ಲಿರುವ ನಾಯಕತ್ವ, ಸೃಜನಶೀಲತೆ ಮತ್ತು ಸ್ಪರ್ಧಾತ್ಮಕ ಮನೋಭಾವವನ್ನು ಬೆಳೆಸುವ ಉದ್ದೇಶವನ್ನು ಹೊಂದಿತ್ತು.

ಕಾರ್ಯಕ್ರಮವನ್ನು ಸಂಘದ ಕಾರ್ಯದರ್ಶಿಗಳಾದ ಡಾ. ಅರವಿಂದ್ ಪಟೇಲ್ ಅವರು ಉದ್ಘಾಟಿಸಿ ಮಾತನಾಡುತ್ತಾ.. ಇಂತಹ ಮ್ಯಾನೇಜ್ಮೆಂಟ್ ಫೆಸ್ಟ್‌ಗಳು ವಿದ್ಯಾರ್ಥಿಗಳಿಗೆ ತಮ್ಮ ಸಾಮರ್ಥ್ಯವನ್ನು ಪ್ರದರ್ಶಿಸಲು ವಿಶಿಷ್ಟ ವೇದಿಕೆಯಾಗಿದ್ದು, ಅವರ ಆತ್ಮವಿಶ್ವಾಸವನ್ನು ವೃದ್ಧಿಸಿ ಭವಿಷ್ಯ ನಿರ್ಮಾಣಕ್ಕೆ ದಿಕ್ಕು ತೋರಿಸುತ್ತವೆ ಎಂದು ಹೇಳಿದರು. ವಿದ್ಯಾರ್ಥಿಗಳು ಸ್ಪರ್ಧೆಗಳ ಮೂಲಕ ಅನುಭವ ಪಡೆಯುವುದರಿಂದ ಜೀವನದಲ್ಲಿ ಯಶಸ್ಸಿನ ದಾರಿಗೆ ಹೆಜ್ಜೆಯಿಡಲು ಸಹಕಾರಿಯಾಗುತ್ತದೆ ಎಂದೂ ಅವರು ಅಭಿಪ್ರಾಯಪಟ್ಟರು. ಸಂಸ್ಥೆ ಸದಾ ಇಂತಹ ಶೈಕ್ಷಣಿಕ ಮತ್ತು ಸಹಪಠ್ಯ ಚಟುವಟಿಕೆಗಳಿಗೆ ಪ್ರೋತ್ಸಾಹ ನೀಡುವುದಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ಆಡಳಿತ ಮಂಡಳಿ ಅಧ್ಯಕ್ಷರಾದ ಜಾನೇಕುಂಟೆ ಬಸವರಾಜ್, ಕಾಲೇಜಿನ ಪ್ರಾಚಾರ್ಯರಾದ ಡಾ. ಹೆಚ್. ಮಹಾಬಲೇಶ್ವರ್, ಉಪಪ್ರಾಚಾರ್ಯರಾದ ಡಾ. ಸವಿತಾ ಸೋನಾಲಿ ಉಪಸ್ಥಿತರಿದ್ದು ಕಾರ್ಯಕ್ರಮಕ್ಕೆ ಮೆರಗು ನೀಡಿದರು. ವಿಭಾಗದ ಮುಖ್ಯಸ್ಥರಾದ ಡಾ. ಎ. ತಿಮ್ಮನಗೌಡ ಅವರು ಎಲ್ಲ ಅತಿಥಿಗಳನ್ನು ಆತ್ಮೀಯವಾಗಿ ಸ್ವಾಗತಿಸಿ, ಕಾರ್ಯಕ್ರಮದ ಉದ್ದೇಶ ಮತ್ತು ಅಗತ್ಯತೆಯನ್ನು ಪ್ರಸ್ತಾವಿಕ ನುಡಿಯಲ್ಲಿ ವಿವರಿಸಿದರು.

ಕಾರ್ಯಕ್ರಮದಲ್ಲಿ ವಿಶೇಷವಾಗಿ ಕಾಲೇಜಿನ ಹಳೆಯ ವಿದ್ಯಾರ್ಥಿಯಾಗಿರುವ ಹಾಗೂ ಬೆಂಗಳೂರಿನ ಪ್ರತಿಷ್ಠಿತ ಕಂಪನಿಯ ನಿರ್ದೇಶಕರಾದ ನವೀನ್ ಲೋಕೆರೆ ಹಾಗೂ ಮುರಳಿ ಅವರು ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿ, ತಮ್ಮ ಉದ್ಯಮ ಜೀವನದ ಅನುಭವಗಳನ್ನು ಹಂಚಿಕೊಂಡರು. ಅವರ ಮಾರ್ಗದರ್ಶನ ವಿದ್ಯಾರ್ಥಿಗಳಿಗೆ ಪ್ರೇರಣೆಯಾಗಿ ಪರಿಣಮಿಸಿತು.

ಉದ್ಘಾಟನಾ ಸಮಾರಂಭದ ನಂತರ ವಿವಿಧ ಸ್ಪರ್ಧೆಗಳು ವಿದ್ಯಾರ್ಥಿಗಳ ಉತ್ಸಾಹವನ್ನು ಹೆಚ್ಚಿಸಿತು. ಹಣಕಾಸಿನ ನಿರ್ವಹಣೆಗೆ ಸಂಬಂಧಿಸಿದ 'ಕೌಟಿಲ್ಯ', ಉತ್ತಮ ವ್ಯವಸ್ಥಾಪನಾ ಕೌಶಲ್ಯವನ್ನು ಅಳೆಯುವ 'ಸಮರ್ಥ', ಮಾರುಕಟ್ಟೆ ತಂತ್ರಗಳನ್ನು ಪರೀಕ್ಷಿಸುವ 'ಸವ್ಯಸಾಚಿ', ರಸಪ್ರಶ್ನೆಯ ರೂಪದಲ್ಲಿನ 'ವಿವೇಚನ', ಮಾನವ ಸಂಪನ್ಮೂಲ ನಿರ್ವಹಣೆಯ 'ನಿರ್ಗುಣ' ಹಾಗೂ ಸಾಂಸ್ಕೃತಿಕ ಪ್ರತಿಭೆಗಳಿಗೆ 'ರಂಗಕ್ಷೇತ್ರ' ಎಂಬ ಹೆಸರಿನಲ್ಲಿ ವೈವಿಧ್ಯಮಯ ಸ್ಪರ್ಧೆಗಳು ಜರುಗಿದವು. ಈ ಚಟುವಟಿಕೆಗಳು ವಿದ್ಯಾರ್ಥಿಗಳ ಬೌದ್ಧಿಕ ಸಾಮರ್ಥ್ಯ, ತಂಡ ಮನೋಭಾವ ಹಾಗೂ ಸೃಜನಶೀಲತೆಯನ್ನು ಪ್ರತಿಬಿಂಬಿಸಿತು.

ರಾಜ್ಯದ ವಿವಿಧ ಭಾಗಗಳಿಂದ ಆಗಮಿಸಿದ ಸುಮಾರು 40 ಕ್ಕೂ ಹೆಚ್ಚು ಕಾಲೇಜುಗಳ ವಿದ್ಯಾರ್ಥಿಗಳು ಉತ್ಸಾಹದಿಂದ ಭಾಗವಹಿಸಿ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಿದರು. ವಿಜೇತರು ಪ್ರಶಸ್ತಿ ಪಡೆದು ಸಂತಸಗೊಂಡರು. ಬೆಳಿಗ್ಗೆಯಿಂದ ಸಂಜೆ 7 ಗಂಟೆಯವರೆಗೆ ನಿರಂತರವಾಗಿ ನಡೆದ ಈ ಫೆಸ್ಟ್ ವಿದ್ಯಾರ್ಥಿಗಳಿಗೆ ಹೊಸ ಅನುಭವವನ್ನು ನೀಡಿದಂತಾಯಿತು.

ಒಟ್ಟಿನಲ್ಲಿ, 'ಅಸ್ತ್ರ ಮ್ಯಾನೇಜ್ಮೆಂಟ್ ಫೆಸ್ಟ್–2026'ವು ವಿದ್ಯಾಭ್ಯಾಸದ ಗಡಿಯಾಚೆಗೆ ಹೋಗಿ ವಿದ್ಯಾರ್ಥಿಗಳ ಸಮಗ್ರ ವ್ಯಕ್ತಿತ್ವ ವಿಕಾಸಕ್ಕೆ ಪೂರಕವಾದ, ಉತ್ಸಾಹಭರಿತ ಮತ್ತು ಅರ್ಥಪೂರ್ಣ ಕಾರ್ಯಕ್ರಮವಾಗಿ ಯಶಸ್ವಿಯಾಗಿ ನೆರವೇರಿತು.

## ರಸ್ತೆ ಅಗಲೀಕರಣ ಮರಕಡಿಯುವುದನ್ನು ತಡೆದ ಅರಣ್ಯ ಸಿಬ್ಬಂದಿ ಮೇಲೆ ಹಲ್ಲೆ



• ಮಲ್ಲಮ್ಮ ನುಡಿ ವಾರ್ತೆ, ಬಳ್ಳಾರಿ

ಬೇಸಿಗೆಯ ಬಿಸಿಲಿಗೆ ತತ್ತರಿಸಿದ ಬಳ್ಳಾರಿಯಲ್ಲಿ ಇದೀಗ ಮರಗಳ ಮಾರಣ ಹೋಮ ಮಾಡಲಾಗ್ತಿದೆ.

ಮರ ಬೆಳೆಸಬೇಕಾದ ಸಂದರ್ಭದಲ್ಲಿ ಮರಗಳನ್ನು ಕಡಿಯಲಾಗ್ತಿದೆ. ರಸ್ತೆ ಅಗಲೀಕರಣದ ನೆಪದಲ್ಲಿ ನೂರಾರು ಮರಗಳಿಗೆ ಕೊಡಲಿ ಪೆಟ್ಟು ನೀಡುತ್ತಿದೆ.

ಬಳ್ಳಾರಿಯ ವಿಮ್ಸ್ ಆಸ್ಪತ್ರೆಯಿಂದ ಕೊಳಗಲ್ ಗ್ರಾಮಕ್ಕೆ ಹೋಗುವ ರಸ್ತೆ ಅಗಲೀಕರಣ ಮಾಡಲಾಗ್ತಿದೆ.

ಇದಕ್ಕೆ ಅಡ್ಡವಾಗಿದೆ ಎಂದು 234 ಮರಗಳನ್ನು ಗುರುತಿಸಿ ಕಡಿಯಲು ಗುತ್ತಿಗೆದಾರರು ಮುಂದಾಗಿದ್ದಾರೆ. ನಿನ್ನೆ ತಡರಾತ್ರಿ ನಾಲ್ಕಾರು ಮರಗಳನ್ನು ಕಡಿದಿದ್ದಾರೆ.

ಈ ವೇಳೆ ಅರಣ್ಯ ಇಲಾಖೆಯ ಸಿಬ್ಬಂದಿ ಅಡ್ಡಿ ಪಡಿಸಿದಾಗ ಸಿಬ್ಬಂದಿ ಮೇಲೆ ಹಲ್ಲೆ ಮಾಡಲಾಗಿದೆ. ಮರಗಳ ಕಡಿಯುತ್ತಿರೋ ವಿಡಿಯೋ ಮಾಡಿದ ಹಿನ್ನೆಲೆ ಮೊಬೈಲ್ ಒಡೆದು ಹಾಕಿದ್ದಾರೆ.

ಅರಣ್ಯ ಇಲಾಖೆ ಸಿಬ್ಬಂದಿ ಮೇಲೆ ದೌರ್ಜನ್ಯವೆಸಗಿ ಮರಕಡಿಯಲು ಮುಂದಾಗಿರೋದು. ಸಾರ್ವಜನಿಕ ವಲಯದಲ್ಲಿ ಸಾಕಷ್ಟು ಆಕ್ರೋಶ ವ್ಯಕ್ತವಾಗಿದೆ. ಇನ್ನೂ ಮರ ಕಡಿಯಲು ಅರಣ್ಯ ಇಲಾಖೆಯ ಅನುಮತಿ ನಿರಾಕರಿಸಲಾಗಿದೆ.

## ಡಾ.ಬಿ.ಆರ್ ಅಂಬೇಡ್ಕರ್ ಬಾಲಕಿಯರ ವಸತಿ ನಿಲಯ ಶಾಲೆಗೆ ಶೇ 100 ಫಲಿತಾಂಶ




• ಮಲ್ಲಮ್ಮ ನುಡಿ ವಾರ್ತೆ, ಚಿಟಗುಪ್ಪ

ತಾಲ್ಲೂಕಿನ ಬೋರಳ್ ಗ್ರಾಮದ ಹೊರವಲಯದಲ್ಲಿರುವ ಡಾ.ಬಿ.ಆರ್ ಅಂಬೇಡ್ಕರ್ ಬಾಲಕಿಯರ ವಸತಿ ನಿಲಯ ಶಾಲೆಗೆ ಶೇ 100 ಫಲಿತಾಂಶ ಪ್ರಕಟವಾಗಿದೆ,

2026ರಲ್ಲಿ ಜರುಗಿದ ಎಸ್. ಎಸ್.ಎಲ್.ಸಿ ಪರೀಕ್ಷೆಯಲ್ಲಿ ಶಾಲೆಗೆ ಅತ್ಯುತ್ತಮ ಫಲಿತಾಂಶ. ಶೇ 100ರಷ್ಟ ಬಂದಿದೆ ಈ ಕೆಳಕಂಡ ವಿದ್ಯಾರ್ಥಿ ವಿದ್ಯಾರ್ಥಿನಿಯರು ಅತಿ ಹೆಚ್ಚು ಅಂಕ ಗಳಿಸಿ ಶಾಲೆಗೆ ಕೀರ್ತಿ ತಂದಿದ್ದಾರೆ, ವೈಷ್ಣವಿ ತಂದೆ ದಶರತ್ ವಿದ್ಯಾರ್ಥಿನಿ 93.60% ಪ್ರತಿಶತ

ಅಂಕ ಪಡೆದು ಶಾಲೆಗೆ ಪ್ರಥಮ ಸ್ಥಾನದಲ್ಲಿ ಉತ್ತೀರ್ಣನಾಗಿದ್ದಾಳೆ.

ಸರಸ್ವತಿ ತಂದೆ ಶಿವುಕುಮಾರ 90.80%, ದ್ವಿತೀಯ ಸ್ಥಾನದಲ್ಲಿ ಉತ್ತೀರ್ಣನಾಗಿದ್ದಾಳೆ, ಅದೇ ರೀತಿ

ಸುರಕ್ಷಾ ತಂದೆ ಶಿವರಾಜ್ 88.00%, ಲಕ್ಷ್ಮಿಬಾಯಿ ತಂದೆ ಮಲಶೆಟ್ಟಿ 87,80%, ಲಕ್ಷ್ಮೀ ತಂದೆ ಶಿವುಕುಮಾರ 85,28%, ವರ್ಷ ತಂದೆ ಮೌಲಪ್ಪ 89,60% ,ಸುನಿತಾ ಶಂಕರ್ 89,28% ಈ ಮಕ್ಕಳ ಈ ಸಾಧನೆಗೆ ಶಾಲೆಯ ಶಿಕ್ಷಕರು ಪ್ರಾಂಶುಪಾಲರು ವಿಜಯಕುಮಾರ್ ಅಕ್ಕಣಾ ಹರ್ಷ ವ್ಯಕ್ತಪಡಿಸಿದರು,

## ವಸತಿ ಶಾಲೆಗೆ ಉತ್ತಮ ಫಲಿತಾಂಶ



• ಮಲ್ಲಮ್ಮ ನುಡಿ ವಾರ್ತೆ, ಮುದಗಲ್

ಪಟ್ಟಣ ಸಮೀಪದ ನಾಗರಹಾಳ ಕ್ರಾಸ್ ಹತ್ತಿರ ಇರುವ ಶ್ರೀಮತಿ ಇಂದಿರಾಗಾಂಧಿ ವಸತಿಶಾಲೆ ಮುದಗಲ್ಲ 2025–26 ನೇ ಸಾಲಿನ ಎಸ್ ಎಸ್ ಎಲ್ ಸಿ ವಾರ್ಷಿಕ ಪರೀಕ್ಷೆಯಲ್ಲಿ ಶೇಕಡಾ 100 ಫಲಿತಾಂಶ ಬಂದಿದೆ.

ವಸಂತ ಶಿವಪ್ಪ ಎಂಬ ವಿದ್ಯಾರ್ಥಿ 615 ಅಂಕಗಳೊಂದಿಗೆ 98.4% ಫಲಿತಾಂಶದೊಂದಿಗೆ ಶಾಲೆಗೆ ಪ್ರಥಮ ಸ್ಥಾನ ಹಾಗೂ ಮುದಗಲ್ ವಲಯಕ್ಕೆ ದ್ವಿತೀಯಸ್ಥಾನ ಪಡೆದಿದ್ದಾನೆ. ಅದೆರೀತಿ ಲಕ್ಷ್ಮಿ ಸೋಮಲಿಂಗಪ್ಪ ಎಂಬ ವಿದ್ಯಾರ್ಥಿನಿ 613 ಅಂಕದೊಂದಿಗೆ 98.04% ಫಲಿತಾಂಶ ಪಡೆದು ಶಾಲೆಗೆ ದ್ವಿತೀಯಸ್ಥಾನ ಪಡೆದಿದ್ದಾನೆ . ಈ ಬಾರಿ ಶಾಲೆಯ 33 ಗಂಡು ಮಕ್ಕಳು 18 ಹೆಣ್ಣುಮಕ್ಕಳು ಸೇರಿ ಒಟ್ಟು 51 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು16 ವಿದ್ಯಾರ್ಥಿಗಳು ಡಿಸ್ಟಿಂಕ್ಷನ್ ನಲ್ಲಿ 32 ವಿದ್ಯಾರ್ಥಿಗಳಿ ಪ್ರಥಮ ದರ್ಜೆಯಲ್ಲಿ ಹಾಗೂ ಉಳಿದ 3 ವಿದ್ಯಾರ್ಥಿಗಳು ದ್ವಿತೀಯ ಸ್ಥಾನದಲ್ಲಿ ಉತ್ತಿಏನರಾಗಿರುತ್ತಾರೆ

ಎಂದು ಪ್ರಾಂಶುಪಾಲರಾದ ದುರಗಪ್ಪ ಕುಣೆಕೆಲ್ಲೂರ ಮಾಹಿತಿ ನೀಡಿದರು ಇದೆ ವೇಳೆ ಈ ಎಲ್ಲಾ ವಿದ್ಯಾರ್ಥಿಗಳಿಗೆ ಪ್ರಾಂಶುಪಾಲರಾದ ಶ್ರೀ ದುರುಗಪ್ಪ ಕುಣೆಕೆಲ್ಲೂರ್, ಉಪ ಪ್ರಾಂಶುಪಾಲರಾದ ಸೋಮನಾಥ ಪಾಮನಕೆಲ್ಲೂರ್ , ನಿಲಯ ಪಾಲಕರು ಹಾಗೂ ದೈಹಿಕ ಶಿಕ್ಷಣ ಶಿಕ್ಷಕರಾದ ಅಂಬರೀಶ್,

ಹಾಗೂ ಸಿಬ್ಬಂದಿವರ್ಗದವರಿಂದ ಹೃದಯಪೂರ್ವಕ ಅಭಿನಂದನೆಗಳು ತಿಳಿಸಿದ್ದಾರೆ.

## ಜಗದೀಶ್ ಅಂತಾರರಾಷ್ಟ್ರೀಯ ಸಾಧನೆ

• ಮಲ್ಲಮ್ಮ ನುಡಿ ವಾರ್ತೆ, ಬಳ್ಳಾರಿ



ಇನ್ಸಿಟ್ಯೂಟ್ ಆಫ್ ಟೆಕ್ನಾಲಜಿ & ಮ್ಯಾನೇಜ್ಮೆಂಟ್ (ಬಿಐಟಿಎಂ), ಬಳ್ಳಾರಿಯ ಕಂಪ್ಯೂಟರ್ ಸೈನ್ಸ್ ಮತ್ತು ಎಂಜಿನಿಯರಿಂಗ್ ವಿಭಾಗದ ಪ್ರೊಫೆಸರ್ ಡಾ. ಜಗದೀಶ್ ಆರ್.ಎಂ. ಅವರು ತೈವಾನ್ನ ನ್ಯಾಷನಲ್ ಕೌಶಿಯುಂಗ್ ಯೂನಿವರ್ಸಿಟಿ ಆಫ್ ಸೈನ್ಸ್ ಅಂಡ್ ಟೆಕ್ನಾಲಜಿ (ಎನ್.ಕೆ.ಯು.ಎಸ್.ಟಿ.) ಯ ಐಒಟಿ ಸೈಬರ್ಸಿಕ್ಯೂರಿಟಿ ಸಂಶೋಧನಾ ಸಂಸ್ಥೆಯಲ್ಲಿ ಅಂತರರಾಷ್ಟ್ರೀಯ ಪೋಸ್ಟ್‌ಡಾಕ್ಟರಲ್ ಕಾರ್ಯಕ್ರಮವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ್ದಾರೆ.

ಈ ಸಂಶೋಧನಾ ಕಾರ್ಯಕ್ರಮವನ್ನು ಪ್ರೊ. ಚಿನ್–ಶಿಹ್ ಶೈ (ಎನ್.ಕೆ.ಯು.ಎಸ್.ಟಿ.) ಹಾಗೂ ಡಾ. ಮೊಹಮ್ಮದ್ ಅಲಿ ಹುಸ್ಸೇನ್, ಡೀನ್ (ಆರ್ & ಡಿ), ಶ್ರೀನಿಧಿ ಇನ್ಸಿಟ್ಯೂಟ್ ಆಫ್ ಸೈನ್ಸ್ & ಟೆಕ್ನಾಲಜಿ, ಹೈದರಾಬಾದ್ ಅವರ ಮಾರ್ಗದರ್ಶನದಲ್ಲಿ ಕೈಗೊಂಡಿದ್ದಾರೆ.

"ಐಒಟಿ ಬಳಸಿ ಬೆಳೆಗಳ ಮೇಲ್ವಿಚಾರಣೆಗಾಗಿ ಅಡಾಪ್ಟಿವ್ ಕೃತಕ ಬುದ್ಧಿಮತ್ತೆ (ಎಐ) ಆಧಾರಿತ ತಂತ್ರಜ್ಞಾನ" ಎಂಬ ಮಹತ್ವದ ಸಂಶೋಧನಾ ವಿಷಯದ ಮೇಲೆ ಕಾರ್ಯನಿರ್ವಹಿಸಿರುವ ಡಾ. ಜಗದೀಶ್ ಅವರು, ಈ ಶೈಕ್ಷಣಿಕ ಪ್ರಯಾಣವು ಅತ್ಯಂತ ಸಮೃದ್ಧ ಮತ್ತು ಜ್ಞಾನವರ್ಧಕ ಅನುಭವವಾಗಿದ್ದು, ಐಒಟಿ ಹಾಗೂ ಕೃತಕ ಬುದ್ಧಿಮತ್ತೆ ಕ್ಷೇತ್ರಗಳಲ್ಲಿ ತಮ್ಮ ಸಂಶೋಧನಾ ಸಾಮರ್ಥ್ಯವನ್ನು ಮತ್ತಷ್ಟು ವಿಸ್ತರಿಸಲು ಸಹಕಾರಿಯಾಗಿದೆ ಎಂದು ತಿಳಿಸಿದ್ದಾರೆ.

ಈ ಸಾಧನೆಯ ಕುರಿತು ಸಂಸ್ಥೆಯ ಅಧ್ಯಕ್ಷರಾದ ಡಾ. ಯಶವಂತ್ ಭೂಪಾಲ್ ಅವರು ಸಂತಸ ವ್ಯಕ್ತಪಡಿಸಿ, "ನಮ್ಮ ಸಂಸ್ಥೆಯ ಅಧ್ಯಾಪಕರು ಜಾಗತಿಕ ಮಟ್ಟದಲ್ಲಿ ಸಾಧನೆ ಮಾಡುತ್ತಿರುವುದು ಹೆಮ್ಮೆಯ ವಿಷಯವಾಗಿದ್ದು, ಇದು ನಮ್ಮ ಸಂಸ್ಥೆಯ ಗೌರವವನ್ನು ಮತ್ತಷ್ಟು ಹೆಚ್ಚಿಸುವಲ್ಲಿ ಮಹತ್ವದ ಪಾತ್ರವಹಿಸುತ್ತದೆ" ಎಂದು ತಿಳಿಸಿದ್ದಾರೆ.

ಸಂಸ್ಥೆಯ ನಿರ್ದೇಶಕರಾದ ವೈ. ಜೆ. ಪೃಥ್ವಿರಾಜ್ ಭೂಪಾಲ್ ಅವರು, "ಡಾ. ಜಗದೀಶ್ ಅವರ ಸಾಧನೆ ನಮ್ಮ ವಿದ್ಯಾರ್ಥಿಗಳಿಗೆ ಪ್ರೇರಣೆಯಾಗಿದ್ದು, ಸಂಶೋಧನೆ ಮತ್ತು ನವೀನತೆಯತ್ತ ಹೆಜ್ಜೆ ಇಡುವಂತೆ ಉತ್ತೇಜಿಸುತ್ತದೆ" ಎಂದು ಅಭಿನಂದಿಸಿದ್ದಾರೆ.

# ಎಸ್ಸೆಸ್ಸೆಲ್ಸಿಯಲ್ಲಿ ಕಂಪ್ಲಿ ತಾಲೂಕಿಗೆ ಟಾಪರ್



• ಮಲ್ಲಮ್ಮ ನುಡಿ ವಾರ್ತೆ, ಕಂಪ್ಲಿ

ತಾಲೂಕು ಸರಕಾರಿ ಪ್ರೌಢಶಾಲೆ ರಾಮಸಾಗರದ ವಿಧ್ಯಾರ್ಥಿನಿ ಕೆ.ಜ್ಯೋತಿ ತಂದೆ ನಿಂಗಪ್ಪ 625 ಕ್ಕೆ 598 ಅಂಕಗಳನ್ನು ಪಡೆಯುವ ಮೂಲಕ ಕಂಪ್ಲಿ ತಾಲೂಕು ಸರಕಾರಿ ಪ್ರೌಢಶಾಲಾ ವಿಭಾಗದಲ್ಲಿ ತಾಲೂಕಿಗೆ ಟಾಪರ್ ಆಗಿ ಹೊರಹೊಮ್ಮಿದ್ದಾಳೆ.

ಶಾಲೆಗೆ ಮತ್ತು ಗ್ರಾಮಕ್ಕೆ ಕೀರ್ತಿ ತಂದ ವಿದ್ಯಾರ್ಥಿನಿಯ ಸಾಧನೆಗೆ ಎಸ್ಡಿಎಂಸಿ ಅಧ್ಯಕ್ಷರು ಸರ್ವ ಸದಸ್ಯರು ಮುಖ್ಯಗುರುಗಳು ಮತ್ತು ಶಿಕ್ಷಕ ವೃಂದ ಹಾಗೂ ಗ್ರಾಮದ ಹಿರಿಯರು ಪ್ರಶಂಸೆ ವ್ಯಕ್ತಪಡಿಸಿದ್ದಾರೆ.

# ಶ್ರೀ ಭಗವಾನ ಬುದ್ಧ ಜಯಂತಿಗೆ ಅಚ್ಚುಕಟ್ಟು ವ್ಯವಸ್ಥೆ ಕಲ್ಪಿಸಿ : ಎಡಿಸಿ




• ಮಲ್ಲಮ್ಮ ನುಡಿವಾರ್ತೆ, ಕೊಪ್ಪಳ

ಮೇ 01 ರಂದು ಜಿಲ್ಲಾ ಕೇಂದ್ರದಲ್ಲಿ ಶ್ರೀ ಭಗವಾನ ಬುದ್ಧ ಜಯಂತಿಯನ್ನು ಅದ್ದೂರಿ ಮತ್ತು ಅರ್ಥಪೂರ್ಣವಾಗಿ ಆಚರಿಸಲು ನಿರ್ಧರಿಸಲಾಗಿದ್ದು, ಸಂಬಂಧಿಸಿದ ಅಧಿಕಾರಿಗಳು ಅಚ್ಚುಕಟ್ಟು ವ್ಯವಸ್ಥೆ ಕಲ್ಪಿಸಿ, ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು. ಶ್ರೀ ಭಗವಾನ ಬುದ್ಧ ಜಯಂತಿ ಆಚರಣೆ ಕುರಿತು ಕೊಪ್ಪಳ ಜಿಲ್ಲಾಡಳಿತ ಭವನದ ಕೆಸ್ವಾನ್-2ರ ಸಭಾಂಗಣದಲ್ಲಿ ಶುಕ್ರವಾರ ಕರೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

# ಸಿದ್ಧನಗೌಡ ಪಾಟೀಲರಿಗೆ ಕೆಯುಡಬ್ಲೂಜೆ ಅಭಿನಂದನೆ



• ಮಲ್ಲಮ್ಮ ನುಡಿ ವಾರ್ತೆ, ಬೆಂಗಳೂರು

ರಾಜ್ಯಸರ್ಕಾರ ಕೊಡ ಮಾಡುವ ಸಂಗೊಳ್ಳಿ ರಾಯಣ್ಣ ಪ್ರತಿಷ್ಠಿತ ಪ್ರಶಸ್ತಿಗೆ ಭಾಜನರಾಗಿರುವ, ಕೆಯುಡಬ್ಲೂಜೆ ಹಿರಿಯ ಸದಸ್ಯರು, ಹೊಸತು ಪತ್ರಿಕೆ ಸಂಪಾದಕರಾದ ಕಾಮ್ರೆಡ್ ಡಾ.ಸಿದ್ಧನಗೌಡ ಪಾಟೀಲ ಅವರನ್ನು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ (ಕೆಯುಡಬ್ಲೂಜೆ) ಸಭಾಂಗಣದಲ್ಲಿ ಶುಕ್ರವಾರ ನಡೆದ ಕಾರ್ಯಕ್ರಮದಲ್ಲಿ ಕೆಯುಡಬ್ಲ್ಯೂಜೆ ವತಿಯಿಂದ ಆತ್ಮೀಯವಾಗಿ ಅಭಿನಂದಿಸಲಾಯಿತು.

ಕೆಯುಡಬ್ಲ್ಯೂಜೆ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರ ಅಧ್ಯಕ್ಷತೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಹಿರಿಯ ಪತ್ರಕರ್ತರಾದ ಜಿ.ಎನ್. ಮೋಹನ್, ರಾಷ್ಟ್ರಪತಿ ಪ್ರಶಸ್ತಿ ಪುರಸ್ಕೃತ ಸಿನಿಮಾ ನಿರ್ದೇಶಕರಾದ ಕೇಸರಿ ಹರವೂ ಮಾತನಾಡಿದರು

ಕೆಯುಡಬ್ಲ್ಯೂಜೆ ಉಪಾಧ್ಯಕ್ಷರಾದ ಎಚ್.ಬಿ.ಮದನಗೌಡ, ಸಂಘದ ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ, ಖಜಾಂಚಿ ವಾಸುದೇವ ಹೊಳ್ಳ, ಬೆಂಗಳೂರು ಘಟಕದ ಅಧ್ಯಕ್ಷ ಸೋಮಶೇಖರ ಗಾಂಧಿ ಮತ್ತು ಪದಾಧಿಕಾರಿಗಳು ಸೇರಿದಂತೆ ಗಣ್ಯರು ಭಾಗವಹಿಸಿದ್ದರು.

ಇದೇ ಸಂದರ್ಭದಲ್ಲಿ ಬೀದರ್ ಸಮ್ಮೇಳನಕ್ಕೆ ಕಾರಣಾಂತರದಿಂದ ಬರಲು ಸಾಧ್ಯವಾಗದಿದ್ದ ಈ ಸಂಜೆ ಪತ್ರಿಕೆಯ ಹಿರಿಯ ಪತ್ರಕರ್ತರಾದ ಜನಾರ್ಧನಚಾರಿ, ಹೊಸದಿಗಂತ ಪತ್ರಿಕೆಯ ನವ್ಯಜ್ಯೋತಿ ಅವರಿಗೆ ಕೆಯುಡಬ್ಲೂಣಟಿಜಜಜಿಟಿಜಜಜೆ ಪ್ರಶಸ್ತಿ ನೀಡಿ ಗೌರವಿಸಲಾಯಿತು.

# ಖಬರಸ್ತಾನ್ ಉಳಿವಿಗೆ ಶಾಸಕ ಭರತ್ ರೆಡ್ಡಿ ಮಧ್ಯಸ್ಥಿಕೆ

• ಮಲ್ಲಮ್ಮ ನುಡಿ ವಾರ್ತೆ, ಬಳ್ಳಾರಿ




ನಗರದ ಎಪಿಎಂಸಿ ಸಮೀಪದ ಮುಸ್ಲಿಂ ಸಮುದಾಯದ ಸುನ್ನಿ ಖಬರಸ್ತಾನಕ್ಕೆ ರೈಲ್ವೆ ಇಲಾಖೆಯ ಉದ್ದೇಶಿತ ಹೆಚ್ಚುವರಿ ರೈಲು ಹಳಿ ಅಭಿವೃದ್ಧಿ ಕಾಮಗಾರಿಯಿಂದ ತೆರವು ಭೀತಿ ಎದುರಾಗಿರುವ ಹಿನ್ನೆಲೆಯಲ್ಲಿ, ಬಳ್ಳಾರಿ ನಗರ ಶಾಸಕ ಭರತ್ ರೆಡ್ಡಿ ಸ್ಥಳಕ್ಕೆ ಭೇಟಿ ನೀಡಿ ಪರಿಸ್ಥಿತಿ ಪರಿಶೀಲಿಸಿದರು.

ಮುಸ್ಲಿಂ ಸಮುದಾಯದ ಮುಖಂಡರ ಮನವಿ ಮೇರೆಗೆ ಖಬರಸ್ತಾನಕ್ಕೆ ಭೇಟಿ ನೀಡಿದ ಶಾಸಕ ಭರತ್ ರೆಡ್ಡಿ, ರೈಲ್ವೆ ಇಲಾಖೆಯ ಅಧಿಕಾರಿಗಳೊಂದಿಗೆ ಸ್ಥಳದಲ್ಲೇ ಚರ್ಚೆ ನಡೆಸಿ, ಅಭಿವೃದ್ಧಿ ಕಾಮಗಾರಿಯ ಜೊತೆಗೆ ಸಮಾಧಿಗಳ ಉಳಿವಿಗೂ ಆದ್ಯತೆ ನೀಡಬೇಕು ಎಂದು ಸ್ಪಷ್ಟಪಡಿಸಿದರು.

"ಅಭಿವೃದ್ಧಿ ಕಾಮಗಾರಿಗಳು ಜನಹಿತದ ದೃಷ್ಟಿಯಿಂದ ಅಗತ್ಯ. ಆದರೆ ಶತಮಾನಗಳ ಇತಿಹಾಸ, ಧಾರ್ಮಿಕ ಭಾವನೆಗಳಿಗೆ ಸಂಬಂಧಿಸಿದ ಸಮಾಧಿಗಳ ರಕ್ಷಣೆ ಕೂಡ ಅಷ್ಟೇ ಮುಖ್ಯ. ಅಭಿವೃದ್ಧಿಯೂ ಆಗಬೇಕು, ಸಮಾಧಿಗಳ ಉಳಿವೂ ಆಗಬೇಕು ಎಂಬುದು ನಮ್ಮ ನಿಲುವು," ಎಂದು ಶಾಸಕ ಭರತ್ ರೆಡ್ಡಿ ತಿಳಿಸಿದರು.

ರೈಲ್ವೆ ಇಲಾಖೆಯ ಹೆಚ್ಚುವರಿ ಹಳಿ ಕಾಮಗಾರಿಯಿಂದ ಖಬರಸ್ತಾನದ ಒಂದು ಭಾಗಕ್ಕೆ ಧಕ್ಕೆಯಾಗುವ ಆತಂಕ ವ್ಯಕ್ತವಾಗುತ್ತಿದ್ದಂತೆ, ಮುಸ್ಲಿಂ ಸಮುದಾಯದ ಮುಖಂಡರು ಶಾಸಕರ ಗಮನಕ್ಕೆ ವಿಷಯ ತಂದಿದ್ದರು. ಇದಕ್ಕೆ ತಕ್ಷಣ ಸ್ಪಂದಿಸಿದ ಶಾಸಕ ಭರತ್ ರೆಡ್ಡಿ, ಸ್ಥಳ ಪರಿಶೀಲನೆ ನಡೆಸಿ ಅಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿದ್ದು, ಸಮುದಾಯದ ಆತಂಕಕ್ಕೆ ಸ್ಪಂದಿಸಿದ ಕ್ರಮವಾಗಿ ಕಂಡುಬಂದಿದೆ.

# ಎಸೆಸೆಲ್ಸಿ: ವಿಸ್ಡಂ ಶಾಲೆಗೆ ಶೇ.98.07 ಫಲಿತಾಂಶ



• ಮಲ್ಲಮ್ಮ ನುಡಿ ವಾರ್ತೆ, ಬೀದರ್

ಎಸೆಸೆಲ್ಸಿ ಪರೀಕ್ಷೆಯಲ್ಲಿ ವಿಸ್ಡಂ ಶಾಲೆಗೆ ಒಟ್ಟು ಶೇ.98.07 ಫಲಿತಾಂಶ ಬಂದಿದೆ ಎಂದು ವಿಸ್ಡಂ ಸಂಸ್ಥೆಯ ಅಧ್ಯಕ್ಷ ಮುಹಮ್ಮದ್ ಆಸಿಫುದ್ದೀನ್ ಅವರು ತಿಳಿಸಿದ್ದಾರೆ.

ನಗರದ ವಿಸ್ಡಂ ಶಾಲೆಯಲ್ಲಿ ಗುರುವಾರ ಸಾಯಂಕಾಲ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದ ಅವರು, ನಮ್ಮ ಶಾಲೆಗೆ ಶೇ.98.07 ಫಲಿತಾಂಶ ಬಂದಿದೆ. ಶಾಲೆಯಲ್ಲಿ ಒಟ್ಟು 104 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದರು. ಅದರಲ್ಲಿ 102 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. 19 ವಿದ್ಯಾರ್ಥಿಗಳು ಅಗ್ರಶ್ರೇಣಿ, 50 ವಿದ್ಯಾರ್ಥಿಗಳು ಪ್ರಥಮ ಶ್ರೇಣಿಯಲ್ಲಿ ಪಾಸಾಗಿದ್ದಾರೆ ಎಂದು ಅವರು ಹೇಳಿದ್ದಾರೆ.

ಮುಹಮ್ಮದ್ ರಮಾನ್ ಸಿದ್ದಿಕಿ 625ಕ್ಕೆ 591 (ಶೇ. 94.56), ಹುದಾ ಫಾತಿಮಾ 625ಕ್ಕೆ 591 (ಶೇ. 94.56), ತಸನಿಮ್ 625ಕ್ಕೆ 591 (8. 94.56), 625 584 8. 93.44, ಸೈಯದಾ ಉಮೈಮಾ 625ಕ್ಕೆ (ಶೇ. 93.28), ಸೈಯದಾ ತಹುರಾ 625ಕ್ಕೆ 576 (ಶೇ.92.16) ಅಂಕ ಗಳಿಸಿದ್ದಾರೆ. ಅದೇ ರೀತಿಯಲ್ಲಿ ಶ್ರೇಯಾ, ಸುಮಿತ್, ಸುಶಾಂತ್ ಇವರು ಸಹ ಉತ್ತಮ ರೀತಿಯಲ್ಲಿ ಉತ್ತೀರ್ಣರಾಗಿದ್ದಾರೆ ಎಂದು ಅವರು ಮಾಹಿತಿ ನೀಡಿದ್ದಾರೆ.

ಎಸೆಸೆಲ್ಸಿ ಪರೀಕ್ಷೆಯಲ್ಲಿ ವಿದ್ಯಾರ್ಥಿಗಳು ಮುಂದಿನ ವಿದ್ಯಾಭ್ಯಾಸದ ಕಡೆಗೆ ಗಮನ ಹರಿಸಬೇಕು. ಅನುತ್ತೀರ್ಣರಾದ ವಿದ್ಯಾರ್ಥಿಗಳಿಗಾಗಿ ರಿಮಿಡಿಯಲ್ ತರಗತಿ ಪ್ರಾರಂಭಮಾಡಲಾಗುವುದು. ಪಿಯುಸಿ ಪರೀಕ್ಷೆಯಲ್ಲಿ ಶೇ. 98 ಬಂದಿತ್ತು. ಈಗ ಎಸೆಸೆಲ್ಸಿ ಪರೀಕ್ಷೆಯಲ್ಲೂ ಕೂಡ ಉತ್ತಮ ಫಲಿತಾಂಶ ಬಂದಿದೆ. ಎ.30 ನಗರದ ರಂಗಮಂದಿರದಲ್ಲಿ ಸನ್ಮಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಅವರು ತಿಳಿಸಿದ್ದಾರೆ,

ವಿದ್ಯಾರ್ಥಿಗಳ ಸಾಧನೆಗೆ ಸಂಸ್ಥೆಯ ಕಾರ್ಯದರ್ಶಿ ಮುಹಮ್ಮದ್ ಸಲಾಹುದ್ದಿನ್ ಫರ್ಹಾನ್ ಸೇರಿದಂತೆ ಶಾಲೆಯ ಶಿಕ್ಷಕರು, ಸಿಬ್ಬಂದಿಗಳು ಹರ್ಷ ವ್ಯಕ್ತಪಡಿಸಿದ್ದಾರೆ.

# ಆಸ್ಪತ್ರೆ ಸಿಬ್ಬಂದಿ ನಿರ್ಲಕ್ಷ್ಯ ವೃದ್ಧೆ ಸಾವು ಆರೋಪ



• ಮಲ್ಲಮ್ಮ ನುಡಿ ವಾರ್ತೆ, ಬಳ್ಳಾರಿ

ವಿಮ್ಸ್ ಆಸ್ಪತ್ರೆಯಲ್ಲಿ ಸಿಬ್ಬಂದಿ ನಿರ್ಲಕ್ಷ್ಯಕ್ಕೆ ವೃದ್ಧೆ ಬಲಿಯಾಗಿದ್ದಾಳೆಂಬ ಆರೋಪ ಕೇಳಿ ಬಂದಿದೆ.

ಏ. 9ರಂದು ವಿಮ್ಸ್ ಅಸ್ಪತ್ರೆ ಕ್ಯಾನ್ಸರ್ ರೋಗಕ್ಕೆ ಸಂಬಂಧಿಸಿ ಅಕ್ಕಮ್ಮ ಎನ್ನುವ ವೃದ್ಧೆ ಬಾಯಿಯಲ್ಲಿನ ಕ್ಯಾನ್ಸರ್ ಗೆ ಸಂಬಂಧಿಸಿದಂತೆ ದಾಖಲಾಗಿದ್ದರು.

ಏ. 17 ರಂದು ಆಪರೇಷನ್ ಕೂಡ ಮಾಡಲಾಗಿತ್ತು. ಅಪರೇಷನ್ ಸೆಕ್ಸಸ್ ಅಗಿ ವೈದ್ಯರು ಚೆನ್ನಾಗಿ ನೋಡಿಕೊಂಡಿದ್ದಾರೆ. ಅದ್ರೇ ಅಪರೇಷನ್ ನಂತರ ಸಿಬ್ಬಂದಿ ನಿರ್ಲಕ್ಷ್ಯಕ್ಕೆ ವೃದ್ಧೆಯ ಸಾವಾಗಿದೆ ಎಂದು ಕುಟುಂಬಸ್ಥರು ಅರೋಪಿಸಿದ್ದಾರೆ. ಟೈಮ್ ಟೈಮ್ ನೀಡಬೇಕಾದ ಯಾವುದೇ ರೀತಿಯ ಇಂಜೆಕ್ಷನ್, ಟ್ಯಾಬ್ಲಟ್ ಸೇರಿದಂತೆ ಇತರೆ ಟ್ರಿಟ್ಮೆಂಟ್ ನೀಡಿಲ್ಲ. ಸರಿಯಾದ ಸಮಯಕ್ಕೆ ಚಿಕಿತ್ಸೆ ನೀಡಿದ್ರೇ ವೃದ್ಧೆ ಅಕ್ಕಮ್ಮ ಬದುಕುತ್ತಿದ್ರು. ಆದ್ರೇ ಆಸ್ಪತ್ರೆ ಸಿಬ್ಬಂದಿ ಎಡವಟ್ಟು ಅಕ್ಕಮ್ಮ ಸಾವಾಗಿದೆ ಎಂದು ಕುಟುಂಬ ಸದಸ್ಯ ವಿಜಯೇಂದ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

# ಬಿಜೆಪಿ ಅಧ್ಯಕ್ಷ ಹತ್ಯೆ: ಅಂತಿಮ ತೀರ್ಪು ಪ್ರಕಟ



• ಮಲ್ಲಮ್ಮ ನುಡಿ ವಾರ್ತೆ, ಗಂಗಾವತಿ

ಕೊಪ್ಪಳ. ಗಂಗಾವತಿಯಲ್ಲಿ ಬಿಜೆಪಿ ಯುವ ಮೋರ್ಚಾ ಅಧ್ಯಕ್ಷ ವೆಂಕಟೇಶ್ ಕುರುಬರ ಹತ್ಯೆ ಪ್ರಕರಣ..ಇಂದು ಅಂತಿಮ ತೀರ್ಪು ಪ್ರಕಟಿಸಿದ ನ್ಯಾಯಾಲಯ.ಗಂಗಾವತಿ ಒಂದನೇ ಹೆಚ್ಚುವರಿ ಸತ್ರ ನ್ಯಾಯಾಲಯದಿಂದ ತೀರ್ಪು ಪ್ರಕಟ.6 ಜನ ಅಪರಾಧಿಗಳು,6 ಜನ ನಿರಪರಾಧಿಗಳೆಂದು ಪ್ರಕಟ

ರವಿ , ವಿಜಯ್ ಅಲಿಯಾದ್ ಮೈಲಾರಿ, ಧನರಾಜ್, ಭೀಮ್ ಅಲಿಯಾದ್ ಭರತ್,ಸಲೀಮ್ ಮಹಮ್ಮದ್ ರಫೀಕ್, ಗಂಗಾಧರ ಗೌಳಿ ಎಂದು ಅಪರಾಧಿಗಳು ಎಂದು ತೀರ್ಪು ಕಾರ್ತಿಕ್, ದಾದಪೀರ್, ಮಹಮ್ಮದ್ ಅಲ್ತಾಪ್, ಮಲ್ಲಿಕಾರ್ಜುನ , ಹರ್ತೋಟಿ ಶರಣ, ಚೈತ್ರಾ ನಿರಪರಾಧಿಗಳು ಎಂದು ತೀರ್ಪು

ಕಳೆದ ಅಕ್ಟೋಬರ್ 7 –2025 ರಂದು ಗಂಗಾವತಿಯಲ್ಲಿ ವೆಂಕಟೇಶ ಕುರುಬರ ಹತ್ಯೆಯಾಗಿತ್ತು.ಹಳೇ ದ್ವೇಷದ ಹಿನ್ನಲೆ ವೆಂಕಟೇಶ್ ಕುರುಬರನನ್ನ ಬರ್ಬರವಾಗಿ ಕೊಲೆ ಮಾಡಿದ್ದ ಹಂತಕರು.

ಕೊಲೆ ಕೇಸ್ ಗೆ ಸಂಭಂದಿಸಿದಂತೆ 12 ಜನರನ್ನು ಬಂಧಿಸಿದ್ದ ಗಂಗಾವತಿ ನಗರ ಪೊಲೀಸರು.ಪ್ರಮುಖ ಆರೋಪಿ ರವಿ ಸೇರಿ 12 ಜನರ ಬಂಧನವಾಗಿತ್ತು

ಕೊಲೆ ಕೇಸ್ ಹಿನ್ನಲೆ ಸುಮಾರು 927 ಪುಟಗಳ ಚಾರ್ಜ್ ಶೀಟ್ ಸಲ್ಲಿಸಿದ್ದ ಗಂಗಾವತಿ ನಗರ ಪೊಲೀಸರು..12 ಜನ ಆರೋಪಿಗಳಲ್ಲಿ ಆರು ಜನ ನಿರ್ದೋಷಿ.01 ದಿಂದ 06 ವರೆಗೂ ಅಪರಾಧಿಗಳೆಂದ ಕೋರ್ಟ್

ಆರೋಪಿ 7 ರಿಂದ 12 ರವರೆಗೂ ನಿರ್ದೋಷಿ ಎಂದ ತೀರ್ಪು ಗಂಗವಾತಿ ಒಂದನೇ ಹೆಚ್ಚುವರಿ ಸತ್ರ ನ್ಯಾಯಾಲಯದಿಂದ ಆದೇಶ.

ಉಳಿದ ಆರು ಜನರಿಗೆ 27 ರಂದು ಶಿಕ್ಷೆ ಪ್ರಮಾಣ ಪ್ರಕಟ.

## 34 ನೇ ರಾಷ್ಟ್ರೀಯ ಪಂಚಾಯತ ರಾಜ್ ದಿನಾಚರಣೆ

# ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಅಭಿವೃದ್ಧಿಗೆ ಶ್ರಮಿಸಬೇಕು : ಪಾಟೀಲ್



• ಮಲ್ಲಮ್ಮ ನುಡಿ ವಾರ್ತೆ, ಯಲಬುರ್ಗಾ

ಸಾಮಾಜಿಕ ,ಶೈಕ್ಷಣಿಕ,ಆರ್ಥಿಕ ಅಭಿವೃದ್ಧಿಗಾಗಿ ಈ ಮೂರು ಹಂತದಲ್ಲಿ ಕೆಲಸ ನಿರ್ವಹಿಸಿದಾಗ ಮಾತ್ರ , ಪಂಚಾಯತ್ ರಾಜ್ ಇಲಾಖೆಯ ಉದ್ದೇಶ ಈಡೇರಲು ಸಾದ್ಯ ಎಂದು ಎಂದು ತಾಲೂಕು ಪಂಚಾಯತಿ ಸಹಾಯಕ ನಿರ್ದೇಶಕರಾದ ಹನಮಂತಗೌಡ ಪೊಲೀಸ್ ಪಾಟೀಲ್ ಅವರು

ಕರ್ನಾಟಕ ರಾಜ್ಯ ಪಂಚಾಯತ್ ರಾಜ್ ಇಲಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಜಿಲ್ಲಾ ಪಂಚಾಯತ್ ಕೊಪ್ಪಳ, ತಾಲೂಕು ಪಂಚಾಯತ್ ಯಲಬುರ್ಗಾ ರವರ ಸಂಯುಕ್ತಾಶ್ರಯದಲ್ಲಿ ರಾಷ್ಟ್ರೀಯ ಪಂಚಾಯತ್ ರಾಜ್ ದಿನ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿ,

ಗ್ರಾಮ ಪಂಚಾಯತಿ ಮಟ್ಟದಲ್ಲಿ ಕೆಲಸ ಮಾಡುವ ಸಿಬ್ಬಂದಿ ತಮ್ಮ ಜನರ ಜತೆಗೆ ಉತ್ತಮ ಬಾಂಧವ್ಯ ಹೊಂದಿರಬೇಕು. ತಮ್ಮ ಗ್ರಾಮದ ಅಭಿವೃದ್ಧಿಗಾಗಿ ಆಸಕ್ತಿ ವಹಿಸಿ ಶ್ರಮಿಸಬೇಕು. ಸಾಮಾಜಿಕ, ಶೈಕ್ಷಣಿಕ, ಆರ್ಥಿಕವಾಗಿ ಅಭಿವೃದ್ಧಿ ಆದಾಗ ಮಾತ್ರ ಈ ಮೂರು ಹಂತದ ಪಂಚಾಯತ್ ರಾಜ್ ಇಲಾಖೆಯ ಉದ್ದೇಶ ಈಡೇರಲು ಸಾಧ್ಯ ಎಂದರು.

ಪ್ರಾಸ್ತಾವಿಕವಾಗಿ ಸಹಾಯಕ ನಿರ್ದೇಶಕರಾದ ಫಕೀರಪ್ಪ ಕಟ್ಟಿಮನಿ ಮಾತನಾಡಿ, 73 ನೇ ಸಂವಿಧಾನ ತಿದ್ದುಪಡಿಯಿಂದಾಗಿ ಮಂಡಲ ಪಂಚಾಯತಿ ಇರುವುದನ್ನು ಗ್ರಾಮ ಪಂಚಾಯತಿ, ತಾಲೂಕು ಪಂಚಾಯತಿ, ಜಿಲ್ಲಾ ಪಂಚಾಯತಿ ಹೀಗೆ ಪಂಚಾಯತ್ ರಾಜ್ ಇಲಾಖೆ ಜಾರಿಗೆ ಬಂತು. ಗ್ರಾಮಿಣ ಪ್ರದೇಶದಲ್ಲಿ ಜನರ ಜತೆ ಕೆಲಸ ಮಾಡುತ್ತ ಉತ್ತಮ ಸೇವೆ ಸಲ್ಲಿಸುತ್ತಿದ್ದೇವೆ. ಗ್ರಾಮೀಣ ಮಕ್ಕಳಿಗೆ ಜ್ಞಾನ ವೃದ್ಧಿಗಾಗಿ ಗ್ರಂಥಾಲಯಗಳು, ಮಹಿಳಾ ಸಬಲೀಕರಣ ಹೀಗೆ ಹಲವಾರು ಮಾದರಿ ಕಾರ್ಯಗಳನ್ನು ಮಾಡಲು ಅನುಕೂಲವಾಗಿದೆ. ಹೀಗೆ ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ಎಲ್ಲರಿಗೂ ಅಭಿನಂದನೆ ಸಲ್ಲಿಸಲಾಗುವುದು ಎಂದರು.

ಹಿರೇಮ್ಯಾಗೇರಿ ಗ್ರಾಮ ಪಂಚಾಯತಿ ಪಿಡಿಒರಾದ ಮಂಗಳೇಶ ನಾಯಕ, ಕಲ್ಲೂರ ಪಿಡಿಒರಾದ ರೇಣುಕಾ ಟಂಕದ, ವಿಷಯ ನಿರ್ವಾಹಕರಾದ ಬಸವರಾಜ ಹಳ್ಳಿ, ಕರವಸೂಲಿಗಾರರಾದ ಪ್ರಕಾಶ, ದುರಗಪ್ಪ, ಗ್ರಂಥಪಾಲಕರಾದ ಶರಣಪ್ಪ ಬಂಡಾರಿ, ವಿಆರ್ ಡಬ್ಲೂ ಭರತ್ ರೆಡ್ಡಿ, ಮಾತನಾಡಿದರು.

ಈ ವೇಳೆ ಕರವಸೂಲಿ, ಉತ್ತಮ ಗಂಥಾಲಯ ವ್ಯವಸ್ಥೆ, ವಿಆರ್ ಡಬ್ಲೂ, ಸ್ವ ಸಹಾಯ ಸಂಘದ ಮಹಿಳೆಯರಿಗೆ ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ತಾಲೂಕು ಪಂಚಾಯತಿ ಅಧಿಕಾರಿಗಳು, ಸಿಬ್ಬಂದಿ, ಗ್ರಾಮ ಪಂಚಾಯತಿ ಪಿಡಿಒರವರು, ಡಿಇಒ, ಕರವಸೂಲಿಗಾರರು, ನೀರು ಗಂಟಿಗಳು, ಸ್ವಸಹಾಯ ಸಂಘದ ಮಹಿಳೆಯರು, ವಿಆರ್ ಡಬ್ಲೂ, ಸಿಬ್ಬಂದಿ ಹಾಜರಿದ್ದರು.

# ಸ್ವಾಯತ್ತತೆ ರೂಪಿಸುವ ಮೂಲಕ ಗ್ರಾಮೀಣ ಸಬಲೀಕರಣಕ್ಕೆ ಉತ್ತೇಜನ

• ಮಲ್ಲಮ್ಮ ನುಡಿವಾರ್ತೆ, ಕೊಪ್ಪಳ



ಗ್ರಾಮೀಣ ಜನರಿಗೆ ಆಡಳಿತದಲ್ಲಿ ನೇರ ಪಾಲ್ಗೊಳ್ಳುವ ಅವಕಾಶ ಮತ್ತು ಸ್ಥಳೀಯ ಸಮಸ್ಯೆಗಳಿಗೆ ಸ್ಥಳೀಯ ಮಟ್ಟದಲ್ಲೇ ಪರಿಹಾರ ಒದಗಿಸಿ ಗ್ರಾಮಾಭಿವೃದ್ಧಿ ಮತ್ತು ಸ್ವಾಯತ್ತತೆ ರೂಪಿಸುವ ಮೂಲಕ ಗ್ರಾಮೀಣ ಸಬಲೀಕರಣಕ್ಕೆ ಉತ್ತೇಜನ ನೀಡಲಾಗುತ್ತಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ವರ್ಣಿತ್ ನೇಗಿ ಅವರು ಹೇಳಿದರು.

ಜಿಲ್ಲಾ ಪಂಚಾಯತ್ ಜೆ.ಹೆಚ್. ಪಟೇಲ್ ಸಭಾಂಗಣದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ರಾಷ್ಟ್ರೀಯ ಪಂಚಾಯತ್ ರಾಜ್ ದಿನ ಆಚರಣೆ ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು.

ಪ್ರಜಾಪ್ರಭುತ್ವ ವಿಕೇಂದ್ರೀಕರಣ ಮತ್ತು ಸ್ಥಳೀಯ ಆಡಳಿತವನ್ನು ಬಲಗೊಳಿಸುವ ನಮ್ಮ ಬದ್ಧತೆಯನ್ನು ಪುನರುಜ್ಜೀವನಗೊಳಿಸುವ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಾಧಿಸಿರುವ ಗಮನಾರ್ಹ ಪ್ರಗತಿ ಮತ್ತು ಸಾಮರ್ಥ್ಯವನ್ನು ಸಂಭ್ರಮಿಸುವ ದಿನವಾಗಿದೆ. ಭಾರತ ಸಂವಿಧಾನದ 73ನೇ ತಿದ್ದುಪಡಿ 1992 ರನ್ವಯ ಪಂಚಾಯತ್ ರಾಜ್ ಸಂಸ್ಥೆಗಳಿಗೆ ಸಂವಿಧಾನಾತ್ಮಕ ಸ್ಥಾನಮಾನವನ್ನು ನೀಡಿದೆ. 1993ರ ಏಪ್ರಿಲ್ 24ರಂದು 73ನೇ ತಿದ್ದುಪಡಿ ಕಾಯ್ದೆ ಜಾರಿಗೆ ತಂದಿದ್ದು, ಪ್ರತಿ ವರ್ಷ ಏಪ್ರಿಲ್ 24 ರಂದು ರಾಷ್ಟ್ರೀಯ ಪಂಚಾಯತ್ ರಾಜ್ ದಿನ ಆಚರಿಸಲಾಗುತ್ತದೆ. ಗ್ರಾಮೀಣ ಜನರಿಗೆ ಆಡಳಿತದಲ್ಲಿ ನೇರ ಪಾಲ್ಗೊಳ್ಳಲು ಅವಕಾಶ ನೀಡಲಾಗಿದೆ ಎಂದು ತಿಳಿಸಿದರು.

ಜಿ.ಪಂ ಉಪಕಾರ್ಯದರ್ಶಿಗಳಾದ ಟಿ.ಕೃಷ್ಣಮೂರ್ತಿ ಅವರು ಕಾರ್ಯಕ್ರಮ ಉದ್ದೇಶಿಸಿ ಪ್ರಸ್ತಾವಿಕವಾಗಿ ಮಾತನಾಡಿ, 73ನೇ ಸಂವಿಧಾನ ತಿದ್ದುಪಡಿ ಕಾಯ್ದೆ ಜಾರಿಗೆ ಬಂದ ದಿನವನ್ನು ಸ್ಮರಿಸುವುದಕ್ಕಾಗಿ ಪ್ರತಿ ವರ್ಷ ಏಪ್ರಿಲ್ 24 ರಂದು ರಾಷ್ಟ್ರೀಯ ಪಂಚಾಯತ್ ರಾಜ್ ದಿನವನ್ನು ಆಚರಿಸಲಾಗಿತ್ತದೆ. ಈ ತಿದ್ದುಪಡಿಯು ಪಂಚಾಯತಿಗಳಿಗೆ ಸಂವಿಧಾನಾತ್ಮಕ ಸ್ಥಾನಮಾನವನ್ನು ನೀಡಿದ್ದು, ಭಾರತದಲ್ಲಿ ವಿಕೇಂದ್ರೀಕೃತ ಆಡಳಿತ ಪಯಣದಲ್ಲಿ ಮಹತ್ವದ ಮೈಲುಗಲ್ಲಾಗಿದೆ ಎಂದರು.

ಕೊಪ್ಪಳ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳಾದ ದುಂಡಪ್ಪ ತುರಾದಿ ಅವರು ಮಾತನಾಡಿ, ಪಂಚಾಯತ್ ರಾಜ್ ವ್ಯವಸ್ಥೆ ವೇದಗಳು ಕಾಲದಿಂದಲು ಇದ್ದು, ಇದು ನಿರಂತರ ಬದಲಾಗುತ್ತ ಬಂದಿದೆ. ಅದರಂತೆ ಭಾರತವು ಹಳ್ಳಿಗಳ ದೇಶವಾಗಿದ್ದು, ಗ್ರಾಮಗಳು ಅಭಿವೃದ್ಧಿ ಹೊಂದಿದರೆ ಮಾತ್ರ ದೇಶ ಸಮಗ್ರ ಅಭಿವೃದ್ಧಿ ಸಾಧಿಸಬಲ್ಲದು. ಈ ನಿಟ್ಟಿನಲ್ಲಿ ಸ್ಥಳೀಯ ಸ್ವಯಂ ಆಡಳಿತ ವ್ಯವಸ್ಥೆಗಳು ವಿಶೇಷ ಪಾತ್ರ ವಹಿಸುತ್ತವೆ. ಅಂತಹದೇ ಒಂದು ಪ್ರಮುಖ ವ್ಯವಸ್ಥೆಯಾದ ಪಂಚಾಯತ್ ರಾಜ್ ವ್ಯವಸ್ಥೆಯನ್ನು ಗೌರವಿಸುವ ಉದ್ದೇಶದಿಂದ ಪ್ರತಿ ವರ್ಷ ಏಪ್ರಿಲ್ 24ರಂದು ರಾಷ್ಟ್ರೀಯ ಪಂಚಾಯತ್ ರಾಜ್ ದಿನವನ್ನು ಆಚರಿಸಲಾಗುತ್ತದೆಂದು ಹೇಳಿದರು. ವಿಶೇಷ ಉಪನ್ಯಾಸ: ಫೌಂಡೇಶನ್ ಫಾರ್ ಎಕಾಲಾಜಿಕಲ್ ಸೆಕ್ಯೂರಿಟಿ (ಎಫ್.ಇ.ಎಸ್) ಸಂಸ್ಥೆಯ ಜಿಲ್ಲಾ ಸಂಯೋಜಕರಾದ ವಾಸುದೇವ ಮೂರ್ತಿ ವಿಶೇಷ ಉಪನ್ಯಾಸ ನೀಡಿ, ರಾಷ್ಟ್ರೀಯ ಪಂಚಾಯತ್ ರಾಜ್ ದಿನ ಕುರಿತಂತೆ ಮೂರು ಹಂತದ ಆಡಳಿತ ಕ್ರಮದಲ್ಲಿ ಗ್ರಾಮ ಪಂಚಾಯಿತಿ ಮಟ್ಟದ ಸ್ಥಳೀಯ ಆಡಳಿತದೊಂದಿಗೆ ನೈಸರ್ಗಿಕ ಸಂಪನ್ಮೂಲ ಸಂರಕ್ಷಣೆ ಹಾಗೂ ಸಮುದಾಯ ಆಸ್ತಿಗಳನ್ನು ಸಂರಕ್ಷಿಸುವಲ್ಲಿ ಇರುವ ಕಾನೂನು ನಿಯಮಗಳ ಬಗ್ಗೆ, ನೈಸರ್ಗಿಕ ಸಂಪನ್ಮೂಲ ಸಂರಕ್ಷಣೆ ಸಂಬಂಧಪಟ್ಟ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳುವಲ್ಲಿ ಮಹತ್ವ ಎಂದರು .

# ಗ್ರಾಮೀಣ ಜನರ ಜೀವನಾಡಿ ಗ್ರಾ, ಪಂಚಾಯತಿಗಳು : ಬಿರಾದಾರ್



• ಮಲ್ಲಮ್ಮ ನುಡಿವಾರ್ತೆ, ಕುಕನೂರ


ತಾಲೂಕ ಪಂಚಾಯತ ಕುಕನೂರ ಕಛೇರಿಯಲ್ಲಿ ಪಂಚಾಯತ್ ರಾಜ್ ದಿನವನ್ನು ಸಂಭ್ರಮದಿಂದ ಆಚರಣೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ತಾಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಸಂತೋಷ ಬಿರಾದರ್ ಮಾತನಾಡಿ ನಮ್ಮ ಸಂವಿಧಾನಕ್ಕೆ 73 ನೇ ತಿದ್ದುಪಡಿ ಮಾಡುವ ಮೂಲಕ ದೇಶಾದ್ಯಂತ ಮೂರು ಹಂತದ ಪಂಚಾಯತ್ ರಾಜ್ ವ್ಯವಸ್ಥೆ ಪ್ರಾರಂಭವಾಯಿತು. ಜಿಲ್ಲಾ ಪಂಚಾಯತ್, ತಾಲೂಕ ಪಂಚಾಯತ್, ಗ್ರಾಮ ಪಂಚಾಯತಿಗಳ ಮೂಲಕ ಗ್ರಾಮೀಣ ಜನರ ಸರ್ವಾಂಗೀಣ ಅಭಿವೃದ್ಧಿಗೆ ನಾಂದಿಯಾಯಿತು.

ಜನ ಪ್ರತಿನಿಧಿಗಳು ಮತ್ತು ಅಧಿಕಾರಿಗಳು ಸಹಭಾಗಿತ್ವದಲ್ಲಿ ಸ್ಥಳೀಯ ಸರ್ಕಾರ ಉದಯವಾಯಿತು. ಅಥ ಸ್ಥಳೀಯ ಸರ್ಕಾರದಲ್ಲಿ ಗ್ರಾಮ ಸಭೆಗೆ ವಿಶೇಷ ಅಧಿಕಾರ ನೀಡಿ ಸಭಾ ನಿರ್ಣಯಗಳು. ತೆರಿಗೆ ವಸೂಲಿ ಮಾಡುವ ಅಧಿಕಾರವು, ಗ್ರಾಮ ಪಂಚಾಯತಿಗಳಿಗೆ ಲಭಿಸಿದೆ.

ಅಲ್ಲದೆ ಗ್ರಾಮೀಣ ಜನರ ಆಶೋತ್ತರಗಳಿಗೆ ಸ್ಪಂದಿಸುತ್ತಾ ಮೂಲ ಭೂತ ಸೌಕರ್ಯಗಳನ್ನು ಪ್ರತಿ ದಿನ ನೀಡುತ್ತಾ, ಸ್ವಚ್ಛ ಭಾರತ, ಮಹಾತ್ಮಗಾಂಧಿ ನರೇಗಾ, ವಸತಿ ಯೋಜನೆ, ಕುಡಿಯೋ ನೀರು, ನೌರ್ಮಲ್ಯ ಸೇರಿದಂತೆ ನೂರಾರು ಸೇವೆಗಳನ್ನು ಮಾಡುವ ಅಧಿಕಾರ ಗ್ರಾಮ ಪಂಚಾಯತಿಗಳಿಗೆ ಇದೆ ಅಂತ ಗ್ರಾಮೀಣ ಜನರ ಸೇವೆ ಮಾಡುವ ಅಧಿಕಾರ ಎಲ್ಲರಿಗೂ ಸಿಗಲಾರದು. ನಮಗೆ ಅವಕಾಶ ಇದೆ. ಎಲ್ಲರೂ ಉತ್ಸಾಹದಿಂದ ಮುಂದಿನ ದಿನಗಳಲ್ಲಿ ಇನ್ನು ಹೆಚ್ಚಿನ ಸೇವೆಗಳನ್ನು ನೀಡೋಣ ಪಂಚಾಯತ್ ರಾಜ್ ವ್ಯವಸ್ಥೆ ಒಂದು ಆಲದ ಮರವಿದ್ದಂತೆ ಇದರಡಿಯಲ್ಲಿ ನೂರಾರು ನೌಕರರು ಸೇವೆ ಮಾಡುತ್ತಿದ್ದೇವೆ. ಎಲ್ಲರೂ ಪಂಚಾಯತ್ ರಾಜ್ ದಿನದ ಶುಭಾಶಯ ಹೇಳಿದರು.

# ಶ್ರೀ ಶಾರದಾ ಮಂದಿರದಲ್ಲಿ ಅಕ್ಷರ ಅಭ್ಯಾಸ



ಮಲ್ಲಮ್ಮ ನುಡಿ ವಾರ್ತೆ, ಗಂಗಾವತಿ

ಗಂಗಾವತಿ. ನಗರದ ಶ್ರೀ ಶಂಕರ ಮಠದ ಶಾರದಾ ಮಂದಿರದಲ್ಲಿ ಅಕ್ಷಯ ತೃತೀಯ ಪ್ರಯುಕ್ತ ಅಪಾರ ಮಕ್ಕಳಿಂದ ಅಕ್ಷರಭ್ಯಾಸ ಶ್ರದ್ಧೆ ಭಕ್ತಿಯಿಂದ ಜರುಗಿತು.

ದೇವಸ್ಥಾನದ ಪ್ರಧಾನ ಅರ್ಚಕ ಬೆಳಿಗ್ಗೆ ಮೂಲ ದೇವರು ಗಳಿಗೆ ಅಭಿಷೇಕ ಅಷ್ಟೋತ್ತರ ಪಾರಾಯಣ ಸೇರಿದಂತೆ ಬಳಿಕ ಮಕ್ಕಳ ಪಾಲಕರಿಗೆ ಮಹಾ ಸಂಕಲ್ಪ ಗಣಪತಿ ಪೂಜೆ ಹಾಗೂ ಅಕ್ಷದ ಅಭ್ಯಾಸವನ್ನು ಕ್ರಮಬದ್ಧವಾಗಿ ನೆರವೇರಿಸಿದರು. ಈ ಸಂದರ್ಭದಲ್ಲಿ ದೇವಸ್ಥಾನದ ಪ್ರಧಾನ ಅರ್ಚಕ ಕುಮಾರ್ ಭಟ್ ಮಾತನಾಡಿ ಅಕ್ಷಯ ತೃತೀಯ ಅತ್ಯಂತ ಮಹತ್ವವಾದ ದಿನವಾದದ್ದು ವಿದ್ಯಾದೇವತೆಯ ಆರಾಧನೆ ಮೂಲಕ ಮಕ್ಕಳ ಅಕ್ಷರ ಅಭ್ಯಾಸಕ್ಕೆ ಅತ್ಯಂತ ಪವಿತ್ರವಾದ ದಿನವಾಗಿದೆ ಎಂದು ತಿಳಿಸಿದರು. ನಗರ ಸೇರಿದಂತೆ ಗಂಗಾವತಿ ತಾಲೂಕಿನ ವಿವಿಧ ಭಾಗಗಳಿಂದ ಮಕ್ಕಳು ಹಾಗೂ ಪೋಷಕರು ಪಾಲ್ಗೊಂಡಿದ್ದರು...

# ಕೈಯಿಂದಲೇ ಹುಮನಾಬಾದ್ ಮತಕ್ಷೇತ್ರ ಸರ್ವಾಂಗೀಣ ಪ್ರಗತಿ





**ಹುಮನಾಬಾದ್:** ಹುಮನಾಬಾದ್ ಮತಕ್ಷೇತ್ರದ ಸಮಗ್ರ ಅಭಿವೃದ್ಧಿ ಕಾಂಗ್ರೆಸ್ ಪಕ್ಷದಿಂದ ಮಾತ್ರ ಸಾಧ್ಯ ಎಂದು ಮಾಜಿ ಸಚಿವ ರಾಜಶೇಖರ ಪಾಟೀಲ ತಿಳಿಸಿದ್ದಾರೆ. ತಾಲ್ಲೂಕಿನ ಹಳ್ಳಿಖೇಡ (ಬಿ) ಗ್ರಾಮದಲ್ಲಿ ನಡೆದ ಕಾಂಗ್ರೆಸ್ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಅವರು, ಕ್ಷೇತ್ರದ ಅಭಿವೃದ್ಧಿಗೆ ಜನಪರ ಯೋಜನೆಗಳು, ರೈತರ ಹಿತ, ಯುವಕರಿಗೆ ಉದ್ಯೋಗಾವಕಾಶ ಹಾಗೂ ಮೂಲಭೂತ ಸೌಕರ್ಯಗಳ ವೃದ್ಧಿಗೆ ಕಾಂಗ್ರೆಸ್ ಪಕ್ಷ ಸದಾ ಬದ್ಧವಾಗಿದೆ ಎಂದು ಹೇಳಿದ್ದಾರೆ. ಜನರ ಸಮಸ್ಯೆಗಳನ್ನು ಅರಿತು ಪರಿಹಾರ ನೀಡುವ ನೈಜ ಶಕ್ತಿ ಕಾಂಗ್ರೆಸ್ ಪಕ್ಷಕ್ಕಿದ್ದು, ಕಾರ್ಯಕರ್ತರು ಪಕ್ಷ ಸಂಘಟನೆಗೆ ಹೆಚ್ಚಿನ ಒತ್ತು ನೀಡಿ ಗ್ರಾಮ ಮಟ್ಟದಲ್ಲಿ ಜನರೊಂದಿಗೆ ಸಂಪರ್ಕ ಬೆಳೆಸಬೇಕು ಎಂದು ಕರೆ ನೀಡಿದ್ದಾರೆ. ಭೆಯಲ್ಲಿ ವಿಧಾನ ಪರಿಷತ ಸದಸ್ಯರಾದ ಡಾ.ಚಂದ್ರಶೇಖರ ಪಾಟೀಲ, ಭೀಮರಾವ ಪಾಟೀಲ, ಮಾಜಿ ಎಂಎಲ್ ಸಿ ಅರವಿಂದ ಅರಳಿ, ಕಾಂಗ್ರೆಸ್ ಪಕ್ಷದ ಸಹಕಾರಿ ಕ್ಷೇತ್ರದ ಅಧ್ಯಕ್ಷ ಧನರಾಜ ತಾಳಂಪಳ್ಳಿ, ಹಿಂದುಳಿದ ವರ್ಗಗಳ ರಾಜ್ಯ ಉಪಾಧ್ಯಕ್ಷ ಸಿದ್ರಾಮ ವಾಘಮಾರೆ, ಮಾಜಿ ಜಿಪಂ ಸದಸ್ಯ ಗುಂಡುರಡ್ಡಿ, ಸೇರಿದಂತೆ ಹಲವು ಮುಖಂಡರು, ಕಾರ್ಯಕರ್ತರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

**ಹುಮನಾಬಾದ್ ಕ್ಷೇತ್ರದಲ್ಲಿ ಶಿಕ್ಷಣ, ಆರೋಗ್ಯ, ರಸ್ತೆ, ಕುಡಿಯುವ ನೀರು ಸೇರಿದಂತೆ ಅನೇಕ ಅಭಿವೃದ್ಧಿ ಕಾರ್ಯಗಳು ಕಾಂಗ್ರೆಸ್ ಆಡಳಿತದಲ್ಲಿ ನಡೆದಿವೆ. ಭವಿಷ್ಯದಲ್ಲಿ ಇನ್ನಷ್ಟು ಅಭಿವೃದ್ಧಿಗಾಗಿ ಜನರು ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಬೇಕು.**
**–ರಾಜಶೇಖರ ಪಾಟೀಲ, ಮಾಜಿ ಸಚಿವ**

# ಶ್ರೀ ಭಗೀರಥ ಜಯಂತಿ ಅದ್ದೂರಿ ಆಚರಣೆ: ಕುಂಭ ಕಳಸ ಮೆರವಣಿಗೆ

• ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ

ರಾಜಕೀಯ, ಸಾಮಾಜಿಕ, ಆರ್ಥಿಕ ಹಾಗು ಶೈಕ್ಷಣಿಕವಾಗಿ ಮುಂದೆ ಬರಬೇಕಿರುವ ಉಪ್ಪಾರ ಸಮಾಜ ಸರ್ವ ಜನಾಂಗದ ಒಡನಾಡಿಯಾಗಿ ಸಹೋದರತೆಯಿಂದ ಬಾಳುತ್ತಿದೆ ಎಂದು ಮಾಜಿ ಶಾಸಕ ಪರಣ್ಣ ಮುನವಳ್ಳಿ ಹೇಳಿದರು.

ಅವರು ನಗರದ ಶ್ರೀ ಭಗೀರಥ ವೃತ್ತದಲ್ಲಿ ಶ್ರೀ ಭಗೀರಥ ರಾಜಋಷಿ ಜಯಂತ್ಯೋತ್ಸವದಲ್ಲಿ ಭಾಗವಹಿಸಿ ಮಾತನಾಡಿದರು. ಶಿಕ್ಷಣವೇ ಶಕ್ತಿಯಾಗಿದ್ದು ಎಲ್ಲರು ಶಿಕ್ಷಣಕ್ಕೆ ಆದ್ಯತೆ ನೀಡಬೇಕಿದೆ ನಮ್ಮ ಅವಧಿಯಲ್ಲಿ ಸಮಾಜಕ್ಕೆ ಕೈಲಾದ ಮಟ್ಟಿಗೆ ನೆರವಾಗಿದ್ದೇನೆ ಎಂದರು.

ವಿಧಾನ ಪರಿಷತ್ ಮಾಜಿ ಸದಸ್ಯ ಹೆಚ್. ಆರ್.ಶ್ರೀನಾಥ್ ಮಾತನಾಡಿ, ದೇವ ಗಂಗೆಯನ್ನು ಧರೆಗಿಳಿಸಿದ ಸಮಾಜ ಸತತ ಪ್ರಯತ್ನಕ್ಕೆ ಹೆಸರುವಾಸಿಯಾಗಿದೆ, ಸಮಾಜದ ಪ್ರಮುಖರಾದ ದುರುಗಪ್ಪ ಅಮರಜ್ಯೋತಿ ಇವರು ಪುರಸಭೆ ಅಧ್ಯಕ್ಷರಾಗಿದ್ದ ಸಂದರ್ಭದಲ್ಲಿ ಅನೇಕ ಅಭಿವೃದ್ಧಿ ಕೆಲಸ ಮಾಡಿದ್ದಾರೆ, ಗಂಗಾವತಿ ಬೈಪಾಸ್ ರಸ್ತೆ, ಮುರಹರಿ ನಗರ ಹಾಗು ಗುಂಡಮ್ಮ ಕ್ಯಾಂಪ್‌ಗಳಲ್ಲಿ ಸರ್ವ ಜನಾಂಗಕ್ಕೂ ನಿವೇಶನ ನೀಡಿದ್ದಾರೆಂದರು.

ಮಾಜಿ ಸಂಸದ ಶಿವರಾಮಗೌಡ ಮಾತನಾಡಿ, ಮೊದಲು ಉಪ್ಪು ಮಾರು ವೃತ್ತಿಯಲ್ಲಿದ್ದ ಈ



ಜನಾಂಗ ಪ್ರಪಂಚಕ್ಕೆ ರುಚಿಯನ್ನು ತೋರಿಸಿತು ಬಳಿಕ ವಿವಿಧ ವೃತ್ತಿಗಳಿಗೆ ಹಂಚಿ ಹೋಗಿದ್ದು ಈ ಜನಾಂಗದ ಅಭಿವೃದ್ಧಿ ನಿಗಮಕ್ಕೆ ಸೂಕ್ತ ಅನುದಾನ ನೀಡಬೇಕೆಂದು ಸಲಹೆ ನೀಡಿದರು.

ಕಾಡಾ ಮಾಜಿ ಅಧ್ಯಕ್ಷ ತಿಪ್ಪೆರುದ್ರಸ್ವಾಮಿ ಮಾತನಾಡಿ, ಸಮಾಜ ಮೇಲ್ಮಟ್ಟಕ್ಕೇರುವ ಕುರಿತು ಚಿಂತನ ಮಂಥನ ನಡೆಸಬೇಕು, ಒಗ್ಗಟ್ಟಿನಿಂದ ಏನನ್ನಾದರೂ ಸಾಧಿಸಲು ಸಾಧ್ಯವಿದ್ದು, ಪರಸ್ಪರ ಸಹಕಾರದಿಂದ ಎಲ್ಲ ರಂಗದಲ್ಲಿ ಸಮಾಜ ಮುಂದರೆ ಬರಲಿ ಎಂದು ಹಾರೈಸಿದರು. ಬಿಜೆಪಿ ಮುಖಂಡರಾದ ಮನೋಹರಗೌಡ ಹೇರೂರು ಮಾತನಾಡಿ, ಸತತ ಶ್ರಮದಿಂದ ಮೇಲೆ ಬರುತ್ತಿರುವ ಉಪ್ಪಾರ ಸಮಾಜ ಶ್ರಮಜೀವಿಗಳು ಎಂದರು.

ಮಕ್ಕಳ ತಜ್ಞರಾದ ಡಾ.ಅಮರ್ ಮಾತನಾಡಿ, ಉಪ್ಪಾರ ಸಮಾಜಕ್ಕೆ ಸೂಕ್ತ ರಾಜಕೀಯ ವೇದಿಕೆ ದೊರೆಯಬೇಕಿದೆ, ಏನನ್ನಾದರೂ ಸಾಧಿಸುವ ಛಲ ಹೊಂದಿದ ಜನಾನುರಾಗಿ ಜನಾಂಗ ಎಂದು ಶ್ಲಾಘಿಸಿದರು. ಕಾಡಾ ಮಾಜಿ ಅಧ್ಯಕ್ಷ ಹೆಚ್. ಗಿರೇಗೌಡ್ರು, ಶ್ರೀ ಭಗೀರಥ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ನರಸಪ್ಪ ಅಮರಜ್ಯೋತಿ, ನಗರಸಭೆ ಮಾಜಿ ಸದಸ್ಯರಾದ ವಾಸು ಕೊಳಗದ, ನೀಲಕಂಠಪ್ಪ ಕಟ್ಟಿಮನಿ, ಉಮೇಶ್ ಸಿಂಗನಾಳ್, ತಾಲೂಕು ಉಪ್ಪಾರ ಸಮಾಜದ ಗೌರವಧ್ಯಕ್ಷ ಯಲ್ಲಪ್ಪ ಕಟ್ಟಿಮನಿ, ಅಧ್ಯಕ್ಷ ವೆಂಕಟೇಶ್ ಅಮರಜ್ಯೋತಿ, ಕಾರ್ಯಾಧ್ಯಕ್ಷ ಮುಕ್ಕಣ್ಣ ಮಾನಳ್ಳಿ, ಮುಖಂಡರಾದ ಯುವ ಲಕ್ಷಣ, ಬಜಾರ್ ನಾರಾಯಣಪ್ಪ, ಮುಖಂಡರಾದ ಯಂಕಪ್ಪ ಕಟ್ಟಿಮನಿ, ಯಮನೂರಪ್ಪ ಹುಲಿಗಿ, ಮಹೇಶ್ ಸಾಗರ್, ನಾಗರಾಜ್ ಇಂಗಳಗಿ, ಕುರಿತಲಿ ರಾಮಣ್ಣ, ವಿ.ಸತ್ಯನಾರಾಯಣ, ರಂಗಸ್ವಾಮಿ ಇಂಗಳಗಿ, ಗೋವಿಂದಪ್ಪ ಹುಲಿಗಿ, ಶರಣಪ್ಪ ಮಿಣಿಜಿಗಿ ವಕೀಲರು, ಪಂಪಾಪತಿ ಇಂಗಳಗಿ, ನಿರುಪಾದಿ ಇಂಗಳದಾಳ, ನೌಕರರ ಸಂಘದ ದೇವಪ್ಪ ಶಿಕ್ಷಕರು, ಮಲ್ಲಪ್ಪ ಉಪ್ಪಾರ, ಕನಕಪ್ಪ ಉಪ್ಪಾರ, ರಾಜಪ್ಪ ಹುಲಿಗಿ, ಹನುಮಂತಪ್ಪ ಆದಾಪುರ, ಯಂಕಪ್ಪ ಪೂಜಾರ್, ಶರಣಪ್ಪ ವಿರುಪಾಪುರ, ಇದಕ್ಕೆ ಮುನ್ನಾ ನಗರದ ಶ್ರೀ ದುರ್ಗಾದೇವಿ ದೇವಸ್ಥಾನದಿಂದ ತಾಶಾ ಬಾಜಹಾ ಭಜಂತ್ರಿಯೊಂದಿಗೆ 101 ಕುಂಬ ಕಳಸ ಹೊತ್ತ ಮಹಿಳೆಯರು ಶ್ರೀ ಭಗೀರಥ ರಾಜ ಋಷಿ ಭಾವಚಿತ್ರದ ಮೆರವಣಿಗೆಯೊಂದಿಗೆ ಶ್ರೀ ಭಗೀರಥ ವೃತ್ತದ ಮೂಲಕ ಉಪ್ಪಾರ ಸಮಾಜದ ಶ್ರೀ ಸೀತಾರಾಮಾಂಜನೇಯ್ಯ ದೇವಸ್ಥಾನ ತಲುಪಿದರು. ಬಳಿಕ ಧಾರ್ಮಿಕ ಕಾರ್ಯಕ್ರಮಗಳು ಶ್ರದ್ಧಾಭಕ್ತಿಯಿಂದ ಜರುಗಿದವು. ಅನ್ನ ಸಂತರ್ಪಣೆ ಜರುಗಿತು.

# ರಾಷ್ಟ್ರಪ್ರೇಮ, ನಾಯಕತ್ವ ಗುಣ ಬೆಳೆಸಲು ಸಹಕಾರಿ

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ರಾಮಕೃಷ್ಣ ವಿದ್ಯಾಶಾಲೆಯು ಕೇವಲ ಅಂಕಗಳಿಗೆ ಸೀಮಿತವಾಗದೆ, ವಿದ್ಯಾರ್ಥಿಗಳಲ್ಲಿ ನಾಯಕತ್ವದ ಗುಣಗಳು, ರಾಷ್ಟ್ರಪ್ರೇಮ, ಶಾರದಾದೇವಿ ಮತ್ತು ಸ್ವಾಮಿ ವಿವೇಕಾನಂದ ಆದರ್ಶಗಳನ್ನು ಅಳವಡಿಸಿಕೊಂಡು, ಮನುಷ್ಯ ನಿರ್ಮಾಣ ಶಿಕ್ಷಣ ತತ್ವದಡಿಯಲ್ಲಿ ಶೈಕ್ಷಣಿಕ, ಉತ್ಕೃಷ್ಟತೆ, ದೈಹಿಕ ಶಕ್ತಿ ಮತ್ತು ಆಧ್ಯಾತ್ಮಿಕ ಮೌಲ್ಯಗಳನ್ನು ಬೋಧಿಸುತ್ತದೆ ಎಂದು ಹಿರೇಮಠ ಸಂಸ್ಥಾನ ವಿದ್ಯಾಪೀಠ ಟ್ರಸ್ಟ ಅಧ್ಯಕ್ಷ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಹೇಳಿದರು.

ಪಟ್ಟಣದ ಹಿರೇಮಠ ಸಂಸ್ಥಾನದಲ್ಲಿ 2025–26ನೇ ಸಾಲಿನ ಎಸ್ಸೆಸ್ಸೆಲ್ಸಿಯಲ್ಲಿ 606 ಅಂಕ ಪಡೆದ ಬಸವವೈಭವ ಚೆನ್ನಬಸವಣ್ಣ ಬಳತೆ ಅವರನ್ನು ಶುಕ್ರವಾರ ಸನ್ಮಾನಿಸಿ, ಆಶೀರ್ವದಿಸಿ ಅವರು ಮಾತನಾಡಿದರು.

ಇಂತಹ ಪ್ರತಿಷ್ಠಿತ ಶಾಲೆಯಲ್ಲಿ ಕಲಿತ ನಮ್ಮ ಬೀದರ ಜಿಲ್ಲೆಯ ಭಾಲ್ಕಿಯ ಕು.ಬಸವವೈಭವ ಚೆನ್ನಬಸವಣ್ಣ ಬಳತೆ ಎಸ್ಸೆಸ್ಸೆಲ್ಸಿಯಲ್ಲಿ 606 ಅಂಕ




ಪಡೆದಿರುವುದು ತುಂಬಾ ಸಂತಸ ತಂದಿದೆ ಎಂದು ತಿಳಿಸಿದರು. ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಮಾತನಾಡಿ, ವಿದ್ಯಾರ್ಥಿ ಬಸವವೈಭವ ಅವರ ಮುಂದಿನ ಭವಿಷ್ಯ ಉಜ್ವಲವಾಗಲಿ ಎಂದು ಹಾರೈಸಿದರು.

ಮಹಾಲಿಂಗ ಸ್ವಾಮೀಜಿ, ಬಸವಲಿಂಗ ಸ್ವಾಮೀಜಿ, ಪ್ರಭುದೇವ ಸ್ವಾಮೀಜಿ ಸಮ್ಮುಖ ವಹಿಸಿದ್ದರು.

ಈ ಸಂದರ್ಭದಲ್ಲಿ ಶುಭಾಂಗಿ ಚೆನ್ನಬಸವಣ್ಣ, ಚೆನ್ನಬಸವಣ್ಣ ಬಳತೆ, ಕಾಶಿನಾಥ ಕೊಡಗೆ, ಹಿರೇಮಠ ಸಂಸ್ಥಾನ ವಿದ್ಯಾಪೀಠದ ಆಡಳಿತಾಧಿಕಾರಿ ಶರಣ ಮೋಹನ ರೆಡ್ಡಿ ಹಾಜರಿದ್ದರು.

# ಬ್ರೆಟ್ ವೇ ಶಾಲೆ ಸತತ 9ನೇ ಬಾರಿಗೆ 100%

• ಮಲ್ಲಮ್ಮ ನುಡಿ ವಾರ್ತೆ ಕಂಪ್ಲಿ




2025–2026ನೇ ಸಾಲಿನ ಎಸ್ಸೆಸ್ಸೆಲ್ಸಿ ಪರೀಕ್ಷೆಫಲಿತಾಂಶ ಪ್ರಕಟವಾಗಿದ್ದು, ಕಂಪ್ಲಿ ಪಟ್ಟಣದ ನಿವೇದಿತಾ ಎಜ್ಯುಕೇಷನ್ ಸೊಸೈಟಿಯ ಬ್ರೆಟ್‌ವೇ ಆಂಗ್ಲ ಮಾಧ್ಯಮ ಪ್ರೌಢಶಾಲೆಯು ಸತತ ಒಂಬತ್ತನೇ ಬಾರಿಗೆ ನೂರಕ್ಕೆ ನೂರರಷ್ಟು ಫಲಿತಾಂಶ ಪಡೆಯುವ ಮೂಲಕ ಶಾಲೆಯ ಕೀರ್ತಿ ಹೆಚ್ಚಿಸಿದೆ ಎಂದು ಶಾಲಾ ಆಡಳಿತ ಮಂಡಳಿ ಕಾರ್ಯದರ್ಶಿ ಶಿವರಾಜ ಉಗಾದಿ ತಿಳಿಸಿದರು.

ಶಾಲೆಯಿಂದ ಹತ್ತನೇ ತರಗತಿಗೆ ಹಾಜರಾದ 20 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಇದರಲ್ಲಿ 5 ವಿದ್ಯಾರ್ಥಿಗಳು ಡಿಸ್ಟಿಂಗ್ಷನ್, 8 ವಿದ್ಯಾರ್ಥಿಗಳು ಪ್ರಥಮ ಶ್ರೇಣಿ, 4 ವಿದ್ಯಾರ್ಥಿಗಳು ದ್ವಿತೀಯ ಶ್ರೇಣಿ ಹಾಗೂ 3 ವಿದ್ಯಾರ್ಥಿಗಳು ಉತ್ತೀರ್ಣರಾಗುವ ಮೂಲಕ ಸಾಧನೆಯ ಜೊತೆಗೆ ಶಾಲೆಯ ಕೀರ್ತಿಗೆ ಪಾತ್ರರಾಗಿದ್ದಾರೆ.

ವಿದ್ಯಾರ್ಥಿ ಗೌಳೇರು ವಿಶ್ವನಾಥ ಇವರು 625ಕ್ಕೆ 586(ಶೇ.93.76%) ಅಂಕಗಳೊಂದಿಗೆ ಪ್ರಥಮ ಸ್ಥಾನದ ಸಾಧನೆ ಮಾಡಿದ್ದಾರೆ. ನಂತರದಲ್ಲಿ ಶಾಲೆಯ ಕೆ.ಗೌತಮ್ ವಿದ್ಯಾರ್ಥಿನಿಯು.ನಂದಿತ್ 585(ಶೇ.93.60%), ಬಿ.ಮುಸ್ಕಾನ್ 559(ಶೇ.89.44%), 542(ಶೇ.86.72%), ಎಂ.ಮುಸ್ಕಾನ್ 541(ಶೇ.86.56%), ಅಮೃತ 529(ಶೇ.84.64%), ಲಹರಿ ಅಂಕಗಳ ಸಾಧನೆ ಮಾಡಿದ್ದಾರೆ. ಮತ್ತು ಕನ್ನಡ ವಿಷಯದಲ್ಲಿ 100ಕ್ಕೆ 100ರಷ್ಟು ಅಂಕಗಳನ್ನು ಎಂ.ಮುಸ್ಕಾನ್, ಎನ್.ನಂದಿತ್ ಪಡೆಯುವ ಮೂಲಕ ಶಿಕ್ಷಣ ಪ್ರೇಮಿಗಳ ಮನಗೆದ್ದಿದ್ದಾರೆ. ಸತತ 9ನೇ ಬಾರಿಗೆ ಶಾಲೆಗೆ ನೂರಕ್ಕೆ ನೂರು ಫಲಿತಾಂಶವನ್ನು ತಂದ ವಿದ್ಯಾರ್ಥಿಗಳನ್ನು ಹಾಗೂ ಶಿಕ್ಷಕರನ್ನು ಶಾಲೆಯ ಆಡಳಿತ ಮಂಡಳಿ ಅಧ್ಯಕ್ಷೆ ವಿನೂತಾ ಮಂಡಳಿಯವರು ಮತ್ತು ಶಿಕ್ಷಕ ವೃಂದದವರು ಸೇರಿ ಇತರರು ಪ್ರಶಂಸಿಸಿದ್ದಾರೆ.

# ಮಹಮದಿಯಾ ಆಂಗ್ಲ ಪ್ರೌಢಶಾಲೆಗೆ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇ.100



**ಚಿಕ್ಕಬಳ್ಳಾಪುರ:** ನಗರದ ಮಹಮದಿಯಾ ಆಂಗ್ಲ ಪ್ರೌಢಶಾಲೆಯಲ್ಲಿ ನಡೆದ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇ.100ರಷ್ಟು ಫಲಿತಾಂಶ ದಾಖಲಾಗಿದೆ. ಪರೀಕ್ಷೆಗೆ ಹಾಜರಾದ ಒಟ್ಟು19 ವಿದ್ಯಾರ್ಥಿಗಳಲ್ಲಿ ಎಲ್ಲರೂ ಉತ್ತೀರ್ಣರಾಗಿದ್ದಾರೆ. ಇವರಲ್ಲಿ 10 ಮಂದಿ ಪ್ರಥಮ ದರ್ಜೆಯಲ್ಲಿ, 6 ಮಂದಿ ದ್ವಿತೀಯ ದರ್ಜೆಯಲ್ಲಿ ಹಾಗೂ ಉಳಿದ 3 ಮಂದಿ ಉನ್ನತ ದರ್ಜೆಯಲ್ಲಿ ಉತ್ತೀರ್ಣರಾಗಿದ್ದಾರೆ. ಬಿಬಿ ಫಾತಿಮಾ 507 ಅಂಕಗಳು ಹಾಗೂ ಮುಖರಮ್ 497 ಅಂಕಗಳನ್ನು ಪಡೆದು ಶಾಲೆಗೆ ಕೀರ್ತಿ ತಂದಿದ್ದಾರೆ. ಇನ್ನೂ ವಿಶೇಷವೆಂದರೆ, ಶಾಲೆಯ ವಿದ್ಯಾರ್ಥಿಗಳು ಕನ್ನಡ ಭಾಷೆಯಲ್ಲಿ ಉತ್ತಮ ಸಾಧನೆ ಮಾಡಿದ್ದು, ಅಫ್ರೋಝ್ 100, ಸಾದಿಕ್ 110 ಹಾಗೂ ಮುಕರಮ್ಮ್ 101 ಅಂಕಗಳನ್ನು ಪಡೆದು ಗಮನ ಸೆಳೆದಿದ್ದಾರೆ. ಫಲಿತಾಂಶ ಪ್ರಕಟವಾದ ಬಳಿಕ ಶಾಲೆಯಲ್ಲಿ ವಿದ್ಯಾರ್ಥಿಗಳಿಗೆ ಸಿಹಿತಿಂಡಿ ವಿತರಿಸಿ ಸಂಭ್ರಮಿಸಲಾಯಿತು. ಶಿಕ್ಷಕವೃಂದವು ವಿದ್ಯಾರ್ಥಿಗಳಿಗೆ ಅಭಿನಂದನೆ ಸಲ್ಲಿಸಿ, ಅವರ ಮುಂದಿನ ವಿದ್ಯಾಭ್ಯಾಸಕ್ಕೆ ಶುಭಾಶಯ ಕೋರಿದರು. ಈ ಸಂದರ್ಭದಲ್ಲಿ ಶಾಲೆಯ ಪ್ರಾಂಶುಪಾಲೆ ಸೈದ ತಬಸ್ಸುಮ್ ಮಾತನಾಡಿ, ಪರೀಕ್ಷೆಗೆ ಪೂರ್ವಭಾವಿಯಾಗಿ ವಿಶೇಷ ತರಗತಿಗಳನ್ನು ನಡೆಸಲಾಗಿತ್ತು. ವಿಷಯವಾರು ಶಿಕ್ಷಕರು ವಿದ್ಯಾರ್ಥಿಗಳ ಮೇಲೆ ವಿಶೇಷ ಗಮನ ಹರಿಸಿದ್ದರಿಂದಲೇ ಶೇ.100ರಷ್ಟು ಫಲಿತಾಂಶ ಸಾಧ್ಯವಾಗಿದೆ ಎಂದು ತಿಳಿಸಿದರು. ತೇರ್ಗಡೆಯಾದ ವಿದ್ಯಾರ್ಥಿಗಳ ಮುಂದಿನ ಶೈಕ್ಷಣಿಕ ಜೀವನ ಉತ್ತಮವಾಗಿರಲಿ ಎಂದು ಹಾರೈಸಿದರು.

# ಅನೀಲಕುಮಾರ್ ಹಡಪದ ರವರ 5ನೇ ವರ್ಷದ ಪುಣ್ಯಸ್ಮರಣೋತ್ಸವ

• ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ

ಪಟ್ಟಣದ ಕಾಯಕಜೀವಿ ಲಿಂಗೈಕ್ಯ ಅನೀಲಕುಮಾರ ಆರ್. ಹಡಪದ ಅವರ 5ನೇ ವರ್ಷದ ಪುಣ್ಯಸ್ಮರಣೋತ್ಸವ ಇವರ ಕುಟುಂಬದವರು ಕಲಾವಿದರ ಸಂಗೀತ ದರ್ಬಾರ್ ಮೂಲಕ ಏರ್ಪಡಿಸಿ ಪುಣ್ಯಸ್ಮರಣೋತ್ಸವ ಆಚರಿಸಿ ಕಲಾವಿದರಿಗೆ ಪ್ರೋತ್ಸಾಹ ನೀಡಿದರು. ಲಿಂಗೈಕ್ಯ ಅನೀಲಕುಮಾರ ಆರ್. ಹಡಪದ ಅವರು ಸರಳ ಜೀವಿಗಳಾಗಿದರು. ಜೀವನದ ಕೊನೆಯ ಉಸಿರಿನ ವರೆಗೆ ಕಲಾವಿದರನ್ನು ಪ್ರೋತ್ಸಾಹಿಸುತ್ತ ಬಂದಿದ್ದರು. ಕಾಯಕದಲ್ಲಿ ಅಪಾರ ನಂಬಿಕೆ ಇದ್ದವರು ಕಾಯಕ ಮಾಡಿ ಜೀವಿಸುತ್ತಿದರು.

ಇತರರಿಗೆ ಕಾಯಕದ ಮಹತ್ವದ ಬಗ್ಗೆ ಜಾಗೃತಿ ಮಾಡುತ್ತಿದ್ದರು ಎಂದು ಕಲ್ಯಾಣ ಕರ್ನಾಟಕ ಸಂಗೀತ ಕಲಾವಿದೆ ಬೇಬಿತಾ ಡಿಗ್ಗಿ ಅವರು ಹಾಡುವ ಮೂಲಕ ಸ್ಮರಿಸಿದರು. ಪತ್ರಕರ್ತರು ಹಾಗೂ ಅವರ ಸೊಹೋದರ ರಾಜಕುಮಾರ ಆರ್. ಹಡಪದ ಮಾತನಾಡಿ, ಲಿಂಗೈಕ್ಯ



ನಮ್ಮ ತಂದೆ ಹಾಗೂ ನನ್ನ ಅಣ್ಣನ ಆತ್ಮಕ್ಕೆ ಚಿರಶಾಂತಿ ಸಿಗಲೆಂದು ದೇವರಲ್ಲಿ ಪ್ರಾರ್ಥಿಸಿದರು. ನಮ್ಮ ತಂದೆ–ತಾಯಿ ಮತ್ತು ನನ್ನ ಸೊಹೋದರ ಲಿಂಗೈಕ್ಯ ಅನೀಲಕುಮಾರ ಹಡಪದ ಅವರು ಹಾಕಿ ಕೊಟ್ಟಿರುವ ಮಾರ್ಗದಲ್ಲಿ ನಾನು ಮುನ್ನಡೆಯುತ್ತಿದ್ದೇನೆ ಎಂದರು.

ವ್ಯಕ್ತಿಯಲ್ಲಿ ದೈಹಿಕ ಬದಲಾವಣೆಯೊಂದಿಗೆ ಮಾನಸಿಕ ಶಾಂತಿ ನೀಡುವ ಶಕ್ತಿ ಸಂಗೀತಕ್ಕಿದೆ. ಇಂದಿನ ಒತ್ತಡದ ಬದುಕಿನ ತೊಂದರೆಗೆ ಸಂಗೀತ ಆಲಿಸುವುದು ಅಗತ್ಯವಾಗಿದೆ. ಸಂಗೀತ ಕ್ಷೇತ್ರದ ಬೆಳವಣಿಗೆಗೆ ಇಡೀ ತಮ್ಮ ಜೀವನ ಉದ್ದಕ್ಕೂ ಸೇವೆಯನ್ನು ಸಲ್ಲಿಸಿ ನಮ್ಮ ನಾಡಿನ ಕೀರ್ತಿಯನ್ನು ದೇಶದಾದ್ಯಂತ ಪಸರಿಸುವಂತೆ ಮಾಡಿದ ಕಲ್ಯಾಣ ಕರ್ನಾಟಕದ ಖ್ಯಾತ ಸಂಗೀತ ಕಲಾವಿದೆ ಬೇಬೀತಾ ಡಿಗ್ಗಿ, ಮಂಜುನಾಥ ಉಡಮನಳ್ಳಿ ಹಾಗೂ ತಬಲಾ ವಾದಕ ಛತ್ರಪ್ಪ ಕೆ.ಹಡಪದ, ಶ್ರೀಕಾಂತ ಉಡಬಾಳ, ಸೂರ್ಯಕಾಂತ ಹಡಪದ ಇವರ ಕೊಡುಗೆ ಅಪಾರವಾಗಿದೆ ಎಂದು ಹೇಳಿದರು.

ಮಾತೋಶ್ರೀ ನಾಗಮ್ಮ ಹಡಪದ ಅವರ ಅಧ್ಯಕ್ಷತೆಯಲ್ಲಿ ಕಾರ್ಯಕ್ರಮ ಜರುಗಿತ್ತು. ಸಿಂಧನಕೇರಾ ಸೋಮಲಿಂಗೇಶ್ವರ ಭಜನಾ ಮಂಡಳಿಯವರಾದ ಮನೋಹರ್ ಕಾಡವಾದಿ, ಭೀಮಶಾ ಹಣಗಾರ್, ಮಡೆಪ್ಪ ಹಡಪದ, ದಯಾನಂದ ಸಿಂಧನಕೇರಾ, ಶಂಕ್ರಯ್ಯಾಸ್ವಾಮಿ ಇವರುಗಳು ಸಂಗೀತ ಸೇವೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಹಣಮಂತ ಹಡಪದ, ದತ್ತಾತ್ರೇಯ ಹಡಪದ, ಶಿವಕುಮಾರ್ ಹಡಪದ, ಅವಿನಾಶ ಎಚ್. ಹಡಪದ, ಮಾಣಿಕರೆಡ್ಡಿ ರಾಂಪುರ, ರಾಜಕುಮಾರ ಸ್ವಾಮಿ, ನರಸಪ್ಪ ನರನಾಳ, ದಿಲೀಪ ಕಟ್ಟಿಮನಿ, ಗುರುದಾಸ್, ನವೀನ ಹಡಪದ, ಆದಿತ್ಯ ಎ. ಹಡಪದ, ಆಯುಷ ಎ.ಹಡಪದ, ಅಭಿಷೇಕ ಹಡಪದ ಸಸ್ತಪೂರ್, ಹಡಪದ ಪರಿವಾರದವರು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಹಾಸನ ಆನೆ ಕಾರ್ಯಪಡೆಗೆ 10 ಬೈಕ್ ಸೇರಿ 13 ಹೊಸ ವಾಹನ



**ಬೆಂಗಳೂರು:** ಆನೆಗಳ ಹಾವಳಿ ಹೆಚ್ಚಿರುವ ಹಾಸನ ಜಿಲ್ಲೆಯಲ್ಲಿ ಸಾರ್ವಜನಿಕರಿಗೆ ಮಾಹಿತಿ ನೀಡಲು ಮತ್ತು ಆನೆಗಳನ್ನು ಕಾಡಿಗೆ ಮರಳಿಸಲು ಜಿಲ್ಲಾ ಆನೆ ಕಾರ್ಯಪಡೆಗೆ 13 ಹೊಸಗಳು ಇಂದು ಸೇರ್ಪಡೆಯಾಗಿದ್ದು, ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಖಂಡ್ರೆ ಹಸಿರು ನಿಶಾನೆ ತೋರಿಸಿದರು.

ಬೆಂಗಳೂರು ಮಲ್ಲೇಶ್ವರದ ಅರಣ್ಯ ಭವನದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸಚಿವರು, 1 ಸ್ಕಾರ್ಪಿಯೋ, 2 ಕ್ಯಾಂಪರ್ ಹಾಗೂ 10 ದ್ವಿಚಕ್ರವಾಹನಗಳಿಗೆ ಹಸಿರು ನಿಶಾನೆ ತೋರಿ, ತಾವೇ ಬೈಕ್ ಓಡಿಸುವ ಮೂಲಕ ಚಾಲನೆ ನೀಡಿದರು.

ಮಾನವ–ವನ್ಯಜೀವಿ ಸಂಘರ್ಷ ನಿಯಂತ್ರಣಕ್ಕೆ ಇದು ಹೊಸ ಉಪಕ್ರಮವಾಗಿದೆ. ಈ ಎಲ್ಲ ವಾಹನಗಳಿಗೆ ವಾಕಿಟಾಕಿ ಮತ್ತು ಧ್ವನಿವರ್ಧಕ ಅಳವಡಿಸಲಾಗಿದ್ದು ಜಿಲ್ಲಾ ಆನೆ ಕಾರ್ಯಪಡೆ ಸಿಬ್ಬಂದಿ ವಾಹನಗಳಲ್ಲಿ ಗಸ್ತು ಮಾಡುತ್ತಾ, ಆನೆಗಳು ತೋಟ ಅಥವಾ ವಸತಿ ಪ್ರದೇಶಗಳ ಬಳಿ ಬಂದಾಗ ಸ್ಥಳೀಯರಿಗೆ ಧ್ವನಿವರ್ಧಕಗಳ ಮೂಲಕ ಎಚ್ಚರಿಕೆ ನೀಡುತ್ತಾರೆ. ಈ ವಾಹನಗಳನ್ನು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ತನ್ನ ಸಿಎಸ್‌ಆರ್. ನಿಧಿಯಿಂದ ಅರಣ್ಯ ಇಲಾಖೆಗೆ ನೀಡಿದೆ ಎಂದು ಈಶ್ವರ ಖಂಡ್ರೆ ತಿಳಿಸಿದರು.


# ರಿಯಲ್ ಎಸ್ಟೇಟ್ ಉದ್ಯಮಿ ಹತ್ಯೆ: 6 ಬಂಧನ

• ಮಲ್ಲಮ್ಮ ನುಡಿ ವಾರ್ತೆ ವಿಜಯಪುರ

ನಗರ ಸಮೀಪದ ಅಲಿಯಾಬಾದ್ ಇಂಡಸ್ಟ್ರಿಯಲ್ ಪ್ರದೇಶದಲ್ಲಿ ನಡೆದ ಭೀಕರ ಹತ್ಯೆ ಪ್ರಕರಣವನ್ನು ವಿಜಯಪುರ ಗ್ರಾಮೀಣ ಪೊಲೀಸರು ಅತಿ ಕಡಿಮೆ ಅವಧಿಯಲ್ಲಿ ಭೇದಿಸಿ 6 ಆರೋಪಿಗಳನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ ಎಂದು ಜಿಲ್ಲಾ ಪೊಲೀಸ್ ಅಧಿಕ್ಷಕರಾದ ಲಕ್ಷ್ಮಣ ನಿಂಬರಗಿ ತಿಳಿಸಿದರು

ಇಂದು ಪತ್ರಿಕಾಗೋಷ್ಠಿ ನಡೆಸಿದ ಮಾತನಾಡಿದ ಅವರು ದಿನಾಂಕ 14.04.2026 ರಂದು ಮಧ್ಯಾಹ್ನ ಸುಮಾರು 3 ಗಂಟೆಗೆ, ಗೊಡಂದೊಡ್ಡಿ ನಿವಾಸಿ ಹಾಗೂ ರಿಯಲ್ ಎಸ್ಟೇಟ್ ಉದ್ಯಮಿ ರಾಜು ತಂ. ಬಾಪು ಖರೆ (42) ಅವರು ತಮ್ಮ ಥಾರ್ ಕಾರಿನಲ್ಲಿ ವಿಜಯಪುರದತ್ತ ಬರುತ್ತಿದ್ದ ವೇಳೆ, ಅಲಿಯಾಬಾದ್ ಇಂಡಸ್ಟ್ರಿಯಲ್ ಏರಿಯಾದ ಧರಿದೇವರ ಪೇಟೆ ಸಮೀಪ ಟಿಪ್ಪರ್ ವಾಹನ ಡಿಕ್ಕಿ ಹೊಡೆದಿತ್ತು. ಅದೇ ಸಮಯದಲ್ಲಿ ಎರಡು ಬೈಕ್‌ಗಳಲ್ಲಿ ಬಂದ ಆರೋಪಿತರು ಕಾರನ್ನು ಅಡ್ಡಗಟ್ಟಿ, ಕಲ್ಲಿನಿಂದ ಹಲ್ಲೆ ನಡೆಸಿ ಬಳಿಕ ಪಿಸ್ತೂಲ್‌ನಿಂದ ಗುಂಡು ಹಾರಿಸಿ ರಾಜು ಖರೆ ಅವರನ್ನು ಕಾರಿನಲ್ಲಿಯೇ ಹತ್ಯೆ ಮಾಡಿದ್ದರು. ಈ ಕುರಿತು ಮೃತರ ಅಣ್ಣ ಸುಜೀರ ಬಾಪು ಖರೆ ನೀಡಿದ ದೂರಿನ ಮೇರೆಗೆ ವಿಜಯಪುರ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಪ್ರಕರಣದ ಗಂಭೀರತೆಯನ್ನು ಮನಗಂಡು, ಹೆಚ್ಚುವರಿ ಪೊಲೀಸ್ ಅಧೀಕ್ಷಕ ರಾಮನಗೌಡ ಹಟ್ಟಿ ಅವರ ಮೇಲ್ವಿಚಾರಣೆಯಲ್ಲಿ ಇಶಿತಾ ಗುಪ್ತಾ (ಐಪಿಎಸ್







ಪ್ರೊಬೇಷನರ್), ಡಿಎಸ್ಪಿ ಟಿ.ಎಸ್. ಸುಲ್ಪಿ, ಪಿಐ ಆರ್.ಎಸ್. ಜಾನರ, ಪಿಎಸ್ಐ ವಿನೋದ ದೊಡಮನಿ, ಲಕ್ಷ್ಮೀ ದೇಗಿನಾಳ ಹಾಗೂ ಸಿಬ್ಬಂದಿಗಳನ್ನೊಳಗೊಂಡ ಎರಡು ವಿಶೇಷ ತನಿಖಾ ತಂಡಗಳನ್ನು ರಚಿಸಲಾಗಿತ್ತು. ತನಿಖೆಯ ವೇಳೆ ದೊರೆತ ಸುಳಿವುಗಳ ಆಧಾರದ ಮೇಲೆ ಆರೋಪಿತರನ್ನು ಪತ್ತೆ ಹಚ್ಚಲಾಗಿದ್ದು, ಬಂಧಿತರಾದವರು: ಅಬುಶ್ಯಾ ಸೋಪಾನ್ ಕೊಡ್ಲೇಕರ (36), ಅಬಾಶ್ಯಾ ಬಾಳು ಮಾನೆ (35), ವಾಗೀಶ ಶಂಕರ ಪೋಳ (31), ಜಾಲಿಂದರ್ ಅಲಿಯಾಸ್ ಪೋಪಟ್ ಹಕ್ಕೆ (29), ಖಂಡೂಬಾ ಅಲಿಯಾಸ್ ಅಜೀತ್ ತಾಂಬೆ (29) ಹಾಗೂ ಮುರಗು ಅಲಿಯಾಸ್ ಮರಗು ಹಕ್ಕೆ (24) ಎಂದು ಗುರುತಿಸಲಾಗಿದು, ಆಸ್ತಿ ವಿವಾದದ ಹಿನ್ನೆಲೆ ಆರೋಪಿಗಳು ಕೊಲೆ ಮಾಡಲು ಪೂರ್ವ ಯೋಜನೆ ರೂಪಿಸಿ, ಟಿಪ್ಪರ್ ವಾಹನದ ಮೂಲಕ ಕಾರಿಗೆ ಡಿಕ್ಕಿ ಹೊಡೆಸಿ ಬಳಿಕ ಗುಂಡು ಹಾರಿಸಿ ಹತ್ಯೆ ನಡೆಸಿರುವುದು ತನಿಖೆಯಲ್ಲಿ ಬಹಿರಂಗವಾಗಿದೆ ಎಂದು ತಿಳಿಸಿದರು , ಇನ್ನು ಘಟನೆ ಬಳಿಕ ಆರೋಪಿಗಳು ಬೈಕ್‌ಗಳನ್ನು ತಿಕೋಟಾ ತಾಲೂಕಿನ ಟಕ್ಕಳಕಿ ಹಾಗೂ ಸೋಲಾಪುರ ರೈಲು ನಿಲ್ದಾಣದಲ್ಲಿ ಬಿಟ್ಟು ಪರಾರಿಯಾಗಿದ್ದರು.

ಬಂಧಿತರಿಂದ 2 ಅಕ್ರಮ ಕಂಟ್ರಿ ಪಿಸ್ತೂಲ್‌ಗಳು, 7 ಮೊಬೈಲ್‌ಗಳು, 2 ಮೋಟಾರ್ ಸೈಕಲ್‌ಗಳು, 1 ಟಿಪ್ಪರ್ ಹಾಗೂ 1 ಕಾರನ್ನು ವಶಪಡಿಸಿಕೊಳ್ಳಲಾಗಿದೆ.

ಆರೋಪಿಗಳನ್ನು ಏಪ್ರಿಲ್ 20 ರಂದು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದ್ದು, ಮುಂದಿನ ತನಿಖೆ ಮುಂದುವರೆದಿದೆ. ಈ ಪ್ರಕರಣವನ್ನು ತ್ವರಿತವಾಗಿ ಭೇದಿಸಿದ ತನಿಖಾ ತಂಡದ ಕಾರ್ಯಕ್ಷಮತೆಯನ್ನು ಹಿರಿಯ ಪೊಲೀಸ್ ಅಧಿಕಾರಿಗಳು ಶ್ಲಾಘಿಸಿದ್ದಾರೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.
PRGI NO. 120927
(RNINO:KARKAN/2011/48371)